ಬೀದರ | ಕಲಬುರಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಸಾರ Postal Reg. No. BDR/054/2026-2027 Email: mallammanudi@gmail.com E-paper: www.mallammanudi.in

# ಮಲ್ಲಮ್ಮ ನುಡಿ

ಪ್ರಾದೇಶಿಕ ಕನ್ನಡ ದಿನಪತ್ರಿಕೆ

ಸಂಪಾದಕರು: ರಮೇಶರೆಡ್ಡಿ | 9448 604450

Mallammanudi Regional News Paper | Editor: Ramesh Reddy | RNI NO:KARKAN/2011/48371

VOLUME - 13 ಸಂಪುಟ-13 | ISSUE - 101 ಸಂಚಿಕೆ- 101 | PAGE-8 ಪುಟ-8 | ಬುಧವಾರ 28.05.2025 | RS.2/- ಬೆಲೆ 2/-

## ಪ್ರಾಕ್ಸಿ ಯುದ್ಧವಲ್ಲ, ಆಪರೇಷನ್ ಸಿಂಧೂರ್‌ಗೆ ಪುರಾವೆಗಳಿವೆ: ಪ್ರಧಾನಿ ಮೋದಿ



ಮಲ್ಲಮ್ಮ ನುಡಿ ವಾರ್ತೆ ಗಾಂಧಿನಗರ:ಮೇ.27:ಪಹಲ್ಗಾಮ್ ಭಯೋತ್ಪಾದಕ ದಾಳಿಯನ್ನು ಇನ್ನು ಮುಂದೆ ಪ್ರಾಕ್ಸಿ ಯುದ್ಧ ಎಂದು ಕರೆಯಲಾಗುವುದಿಲ್ಲ ಎಂದು ಪ್ರಧಾನಿ ಮೋದಿ ಹೇಳಿದ್ದಾರೆ.

2 ದಿನಗಳ ಗುಜರಾತ್ ಪ್ರವಾಸದಲ್ಲಿರುವ ಪ್ರಧಾನಿ ಮೋದಿ ಇಂದು ಗಾಂಧಿನಗರದ ಮಹಾತ್ಮ ಮಂದಿರದಲ್ಲಿ 5,536 ಕೋಟಿ ರೂ.ಗಳ ವಿವಿಧ ಅಭಿವೃದ್ಧಿ ಯೋಜನೆಗಳನ್ನು ಉದ್ಘಾಟಿಸಿ, ಶಂಕುಸ್ಥಾಪನೆ ನೆರವೇರಿಸಿದರು. ಈ ಸಮಯದಲ್ಲಿ ಅವರು ಬೃಹತ್ ಸಾರ್ವಜನಿಕ ಸಭೆಯನ್ನುದ್ದೇಶಿಸಿ ಮಾತನಾಡಿದರು. ಈ ಸಂದರ್ಭದಲ್ಲಿ, ಅವರು ಆಪರೇಷನ್ ಸಿಂಧೂರ ಕುರಿತು ವಿರೋಧ ಪಕ್ಷಗಳನ್ನು ಟೀಕಿಸಿದರು. ಅವರು ಸಿಂಧೂ ನದಿ ನೀರು ಒಪ್ಪಂದದ ಬಗ್ಗೆಯೂ ಪ್ರಸ್ತಾಪಿಸಿದರು.

ಮೇ 6 ರ ನಂತರ ಮೃತಪಟ್ಟ ಭಯೋತ್ಪಾದಕರಿಗೆ ಪಾಕಿಸ್ತಾನದಲ್ಲಿ ಸರ್ಕಾರಿ ಗೌರವಗಳನ್ನು ನೀಡಲಾಯಿತು. ಪಾಕಿಸ್ತಾನದ ಧ್ವಜಗಳನ್ನು ಅವರ ಶವಪೆಟ್ಟಿಗೆಯ ಮೇಲೆ ಇರಿಸಲಾಯಿತು. ಪಾಕಿಸ್ತಾನ ಸೈನ್ಯ ಅವರಿಗೆ ನಮಸ್ಕರಿಸಿತು. ಭಯೋತ್ಪಾದಕ ಚಟುವಟಿಕೆಗಳು ಪ್ರಾಕ್ಸಿ ಯುದ್ಧವಲ್ಲ. ಆದರೆ ಉತ್ತಮವಾಗಿ ಯೋಜಿತ ಯುದ್ಧ ತಂತ್ರ ಎಂದು ಇದು ಸಾಬೀತುಪಡಿಸುತ್ತದೆ ಎಂದರು.

ನೀವು ಈಗಾಗಲೇ ಯುದ್ಧದಲ್ಲಿದ್ದು, ಅದಕ್ಕೆ ತಕ್ಕಂತೆ ಪ್ರತಿಕ್ರಿಯೆಯನ್ನು ನೀವು ಪಡೆಯುತ್ತೀರಿ. ನಾವು ಯಾರೊಂದಿಗೂ ದ್ವೇಷವನ್ನು ಬಯಸುವುದಿಲ್ಲ. ನಾವು ಶಾಂತಿಯುತವಾಗಿ ಬದುಕಲು ಬಯಸುತ್ತೇವೆ, ನಾವು ಲೋಕ ಕಲ್ಯಾಣಕ್ಕೆ ಕೊಡುಗೆ ನೀಡಲು ಸಾಧ್ಯವಾಗುವಂತೆ ಪ್ರಗತಿ ಹೊಂದಲು ಬಯಸುತ್ತೇವೆ ಎಂದರು.

1947 ರಲ್ಲಿ ಭಾರತ ವಿಭಜನೆಯಾದ ಸಮಯವನ್ನು ನೆನಪಿಸಿಕೊಂಡ ಪ್ರಧಾನಿ ಮೋದಿ, ಪಾಕಿಸ್ತಾನವು ಭಯೋತ್ಪಾದಕರ ಸಹಾಯದಿಂದ ಕಾಶ್ಮೀರದ ಒಂದು ಭಾಗವನ್ನು ಸ್ವಾಧೀನಪಡಿಸಿಕೊಂಡಿತು ಎಂದು ಹೇಳಿದರು. ಆ ದಿನ ಆ ಭಯೋತ್ಪಾದಕರು ಕೊಲ್ಲಲ್ಪಟ್ಟಿದ್ದರೆ, ಸರ್ದಾರ್ ವಲ್ಲಭಬಾಯಿ ಪಟೇಲ್ ಅವರ ಸಲಹೆಯನ್ನು ಸ್ವೀಕರಿಸಿದ್ದರೆ, ಭಾರತದಲ್ಲಿ ಕಳೆದ 75 ವರ್ಷಗಳಿಂದ ನಡೆಯುತ್ತಿರುವ ಭಯೋತ್ಪಾದಕ ಚಟುವಟಿಕೆಗಳ ಸರಣಿ ನಿಲ್ಲುತ್ತಿತ್ತು ಎಂದು ಅಭಿಪ್ರಾಯಪಟ್ಟರು.

1947 ರಲ್ಲಿ, ಭಾರತ ಮಾತೆಯನ್ನು ತುಂಡುತುಂಡಾಗಿ ಹರಿದುಹಾಕಲಾಯಿತು. ಸರಪಳಿಗಳನ್ನು ಕತ್ತರಿಸಬೇಕಿತ್ತು, ಆದರೆ ತೋಳುಗಳನ್ನು ಕತ್ತರಿಸಲಾಯಿತು. ದೇಶವನ್ನು ಮೂರು ಭಾಗಗಳಾಗಿ ವಿಂಗಡಿಸಲಾಯಿತು, ಅದೇ ರಾತ್ರಿ, ಕಾಶ್ಮೀರದ ಮಣ್ಣಿನಲ್ಲಿ ಮೊದಲ ಭಯೋತ್ಪಾದಕ ದಾಳಿ ನಡೆಯಿತು. ಪಾಕಿಸ್ತಾನವು ಮುಜಾಹಿದ್ದೀನ್‌ಗಳ ಹೆಸರಿನಲ್ಲಿ ಭಯೋತ್ಪಾದಕರ ಸಹಾಯದಿಂದ ಭಾರತದ ಒಂದು ಭಾಗವನ್ನು ವಶಪಡಿಸಿಕೊಂಡಿತು.

ಆ ದಿನ ಈ ಮುಜಾಹಿದ್ದೀನ್‌ಗಳನ್ನು ಕೊಂದು ಸರ್ದಾರ್ ಪಟೇಲ್ ಅವರ ಸಲಹೆಯನ್ನು ಸ್ವೀಕರಿಸಿದ್ದರೆ, ಕಳೆದ 75 ವರ್ಷಗಳಿಂದ ನಡೆಯುತ್ತಿರುವ ಈ ಸರಣಿ (ಭಯೋತ್ಪಾದಕ ಘಟನೆಗಳು) ಕಾಣುತ್ತಿರಲಿಲ್ಲ. ದೇಹವು ಎಷ್ಟೇ ಬಲಿಷ್ಠವಾಗಿದ್ದರೂ ಅಥವಾ ಆರೋಗ್ಯಕರವಾಗಿದ್ದರೂ, ಒಂದೇ ಒಂದು ಮುಳ್ಳು ಕೂಡ ನಿರಂತರ ನೋವನ್ನು ಉಂಟುಮಾಡಬಹುದು. ನಮ್ಮ ಸರ್ಕಾರ ಮುಳ್ಳನ್ನು ತೆಗೆದುಹಾಕಬೇಕು ಎಂದು ನಿರ್ಧರಿಸಿದ್ದೇವೆ ಎಂದರು.

ಪಾಕಿಸ್ತಾನ ಯುದ್ಧದಲ್ಲಿ ಭಾರತವನ್ನು ಸೋಲಿಸಲು ಸಾಧ್ಯವಿಲ್ಲ, ಅದಕ್ಕಾಗಿಯೇ ಅವರು ಪರೋಕ್ಷ ಯುದ್ಧವನ್ನು ಪ್ರಾರಂಭಿಸಿದ್ದಾರೆ. ಭಯೋತ್ಪಾದಕರು ಭಾರತದ ಮೇಲೆ ದಾಳಿ ಮಾಡುತ್ತಲೇ ಇದ್ದರೂ ಭಾರತ ಸಹಿಸಿಕೊಂಡು ಬಂದಿದೆ ಎಂದರು.

ಪಾಕಿಸ್ತಾನದೊಂದಿಗೆ ಯುದ್ಧದ ಅಗತ್ಯ ಬಂದಾಗ, ಭಾರತದ ಮಿಲಿಟರಿ ಶಕ್ತಿ ಪಾಕಿಸ್ತಾನವನ್ನು ಮೂರು ಬಾರಿಯೂ ಸೋಲಿಸಿತು. ಭಾರತವನ್ನು ಯುದ್ಧದಲ್ಲಿ ಸೋಲಿಸಲು ಸಾಧ್ಯವಿಲ್ಲ ಎಂದು ಪಾಕಿಸ್ತಾನ ಅರ್ಥಮಾಡಿಕೊಂಡಿತು. ಅದು ಭಾರತದ ವಿರುದ್ಧ ಪರೋಕ್ಷ ಯುದ್ಧವನ್ನು ಪ್ರಾರಂಭಿಸಿತು. ಅವಕಾಶ ಸಿಕ್ಕಲ್ಲೆಲ್ಲಾ ಅವರು ದಾಳಿ ಮಾಡುತ್ತಲೇ ಇದ್ದರು, ಮತ್ತು ನಾವು ಅದನ್ನು ಸಹಿಸಿಕೊಳ್ಳುತ್ತಲೇ ಇದ್ದೆವು" ಎಂದರು.

4ನೇ ದೊಡ್ಡ ಆರ್ಥಿಕ ಶಕ್ತಿ:

ಮೇ 26, 2014 ರಂದು, ನಾನು ಮೊದಲ ಬಾರಿಗೆ ಪ್ರಧಾನಿಯಾಗಿ ಪ್ರಮಾಣ ವಚನ ಸ್ವೀಕರಿಸಿದೆ. ಆ ಸಮಯದಲ್ಲಿ, ಭಾರತದ ಆರ್ಥಿಕತೆ ವಿಶ್ವದಲ್ಲಿ 11 ನೇ ಸ್ಥಾನದಲ್ಲಿತ್ತು.

(2ನೇ ಪುಟ ನೋಡಿ)

## ಗ್ರೇಡ್-2 ತಹಸೀಲ್ದಾರ್ ಜಯಶ್ರೀ ಅಮಾನತಿಗೆ ಆಗ್ರಹ




ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ್ : ಚಿಟಗುಪ್ಪ ತಾಲೂಕು ಆಡಳಿತದ ಗ್ರೇಡ್-2 ತಹಸೀಲ್ದಾರ್ ಜಯಶ್ರೀಗೆ ಅಮಾನತು ಮಾಡುವಂತೆ ಆಗ್ರಹಿಸಿ, ಪಟ್ಟಣದ ತಹಸೀಲ್ ಕಚೇರಿ ಆವರಣದಲ್ಲಿ ಅಖಿಲ ಭಾರತ ವೀರಶೈವ ಮಹಾಸಭಾ ತಾಲೂಕ ಘಟಕದಿಂದ ಪ್ರತಿಭಟನೆ ನಡೆಸಿ, ಸಚಿವ ಕೃಷ್ಣ ಬೈರೆಗೌಡ ಗೆ ಬರೆದ ಮನವಿ ಪತ್ರ ತಹಸೀಲ್ದಾರ್ ಅಂಜುಮ್ ತಬಸುಮ್ ಗೆ ಸಲ್ಲಿಸಲಾಯಿತು.

ಅಖಿಲ ಭಾರತ ವೀರಶೈವ ಮಹಾಸಭಾ ತಾಲೂಕ ಘಟಕದ ಪದಾಧಿಕಾರಿಗಳು ಮಾತನಾಡಿ, ಚಿಟಗುಪ್ಪ ಗ್ರೇಡ್-2 ತಹಸೀಲ್ದಾರ್ ಜಯಶ್ರೀ ಅವರ ಪತಿ ಶಾಧ್ರಕ ಹಂದಿಕೇರಾ ಸೇರಿದಂತೆ ನಾಲ್ಕು ಜನ ಸಹಚರರು ಒಗ್ಗೂಡಿ ಚಿಟಗುಪ್ಪ ತಾಲೂಕು ಆಡಳಿತದ ಶಿರಸ್ತೆದಾರ ಸುಭಾಷ ಚಂದ್ರ ನಿಡಗುಂದಿಗೆ ಅಪಹರಿಸಿ ಹಲ್ಲೆ ನಡೆಸಿದ್ದಾರೆ. ಈ ಪ್ರಕರಣಕ್ಕೆ ಸಂಬಂಧಿಸದಂತೆ ಅವರ ವಿರುದ್ಧ ಕಾನೂನು ಕ್ರಮ ಕೈಗೊಂಡು ಗ್ರೇಡ್-2 ತಹಸೀಲ್ದಾರ್ ಜಯಶ್ರೀಗೆ ಅಮಾನತು ಮಾಡಬೇಕು ಎಂದು ಒತ್ತಾಯಿಸಿದರು.

ಈ ವೇಳೆ ಬಾಬುರಾವ ಪೋಚಂಪಳ್ಳಿ, ಮಲ್ಲಿಕಾರ್ಜುನ್ ಮಾಳಶಟ್ಟಿ, ರೇವಣಸಿದ್ದಯ್ಯಸ್ವಾಮಿ, ಮಹೇಶ ಅಗಡಿ, ಉಮೇಶ ಜಮಗಿ, ಶ್ರೀನಾಥ ದೇವಣಿ, ಸುನಿಲ ಪತ್ರಿ, ಬಸವರಾಜ ರುದ್ರವಾಡಿ, ಜಗದೀಶ ಬಾವಿ, ಕಾಶಿನಾಥ ಜಕ್ಕಾ, ಶಶಿಕಾಂತ ಮಾಲಿಪಾಟೀಲ್, ಸೋಮನಾಥಸ್ವಾಮಿ, ರತನಸಿಂಗ ಠಾಕೂರ್, ಸುಭಾಷ ಕೆನಡೆ, ಚಂದು ಜವಳಗಿ, ರಾಜಶೇಖರ ಚಿಂಚೋಳಿ, ಉದಯಕುಮಾರ ವಾರದ, ಗುರುಶಾಂತ ವಾರದ ಸೇರಿ ಅನೇಕರಿದ್ದರು.

## ನೆಹರು ಅವರು ಆಧುನಿಕ ಭಾರತದ ನಿರ್ಮಾತೃ: ಮುಖ್ಯಮಂತ್ರಿ ಸಿದ್ದರಾಮಯ್ಯ



ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು, ಮೇ 27:ಸ್ವತಂತ್ರ ಭಾರತದ ಮೊದಲನೇ ಪ್ರಧಾನಿ ಜವಾಹರ್ ಲಾಲ್ ನೆಹರು ಅವರು ಆಧುನಿಕ ಭಾರತದ ನಿರ್ಮಾತೃ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

ಇಂದು ವಿಧಾನಸೌಧದ ಪೂರ್ವ ದ್ವಾರದ ಬಳಿ ಇರುವ ಮಾಜಿ ಪ್ರಧಾನ ಮಂತ್ರಿ ದಿವಂಗತ ಪಂಡಿತ್ ಜವಾಹರಲಾಲ್ ನೆಹರು ರವರ ಪುಣ್ಯತಿಥಿಯ ಅಂಗವಾಗಿ ಅವರ ಪ್ರತಿಮೆ ಹಾಗೂ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿದ ನಂತರ ಮಾಧ್ಯಮದವರೊಂದಿಗೆ ಮಾತನಾಡಿದ ಅವರು ನೆಹರು ಅವರ ಪುಣ್ಯತಿಥಿಯನ್ನು ಸರ್ಕಾರ ಗೌರವ ಹಾಗೂ ಅಭಿಮಾನದಿಂದ ನೆರವೇರಿಸಿದೆ ಎಂದರು.

ದೇಶದ ಬಡತನವನ್ನು ಹೋಗಲಾಡಿಸುವ ಪ್ರಾಮಾಣಿಕ ಪ್ರಯತ್ನವನ್ನು ಮಾಡಿದ ನೆಹರು ಅವರು, ಉದ್ಯೋಗ ಸೃಷ್ಟಿ, ಮಿಶ್ರ ಆರ್ಥಿಕತೆಯನ್ನು ದೇಶದಲ್ಲಿ ಪರಿಚಯಿಸಿದ್ದಲ್ಲದೆ ದೇಶದಲ್ಲಿ ಹಸಿರು ಕ್ರಾಂತಿಗೆ ಅಡಿಗಲ್ಲು ಹಾಕಿದರು. ಸಹಕಾರಿ ಚಳವಳಿ, ವಿಕೇಂದ್ರೀಕರಣಕ್ಕೆ ಬದ್ಧತೆಯಿಂದ ಕೆಲಸ ಮಾಡಿದರು. ಅವರು ಪ್ರಧಾನಿಗಳಾಗಿದ್ದ 17 ವರ್ಷಗಳ ಅವಧಿಯಲ್ಲಿ ಅನೇಕ

(2ನೇ ಪುಟ ನೋಡಿ)

## ಬಿತ್ತನೆ ಬೀಜ್, ಗೊಬ್ಬರ ಸಕಾಲದಲ್ಲಿ ರೈತರಿಗೆ ವಿತರಣೆ ಮಾಡಿ-ಸಚಿವ ರಹೀಂ ಖಾನ್

ಮಲ್ಲಮ್ಮ ನುಡಿ ವಾರ್ತೆ ಬೀದರ :ಮೇ.26:ರೈತರಿಗೆ ಸರ್ಕಾರದಿಂದ ಸಿಗುವ ಬಿತ್ತನೆಬೀಜ, ಕೃಷಿಭಾಗ್ಯ ಯೋಜನೆ, ಸಾವಯವ ಕೃಷಿ ಹಾಗೂ ಇತರೆ ಯೋಜನೆಗಳ ಲಾಭವನ್ನು ಸಕಾಲದಲ್ಲಿ ರೈತರಿಗೆ ವಿತರಿಸುವಂತೆ ಪೌರಾಡಳಿತ ಹಾಗೂ ಹಜ್ ಸಚಿವರಾದ ರಹೀಂ ಖಾನ್ ಅಧಿಕಾರಿಯವರಿಗೆ ಸೂಚಿಸಿದರು.

ಅವರು ಮಂಗಳವಾರ ಜಿಲ್ಲಾ ಪಂಚಾಯತ, ಕೃಷಿ ಇಲಾಖೆ, ಸಹಾಯಕ ಕೃಷಿ ನಿರ್ದೇಶಕರ ಕಛೇರಿ ಬೀದರ ಸಂಯುಕ್ತಾಶ್ರಯದಲ್ಲಿ ಚಾಂಬೋಳಾ ಗ್ರಾಮದಲ್ಲಿ ಹಮ್ಮಿಕೊಂಡಿದ್ದ ಬಿತ್ತನೆ ಬೀಜ ವಿತರಣೆ ಹಾಗೂ ಬೀಜ ಉಪಚಾರ ಹಾಗೂ ಕೀಟನಾಸಕ ಸುರಕ್ಷಾ ತರಬೇತಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಬೀದರ ಜಂಟಿ ಕೃಷಿ ನಿರ್ದೇಶಕರಾದ ಜಿಯಾವುಲ್ಲಾ ಕೆ. ಅವರು ಪಾಸ್ತಾವಿಕ ಮಾತನಾಡಿ, ಸೋಯಾ ಮತ್ತು ಇತರೆ ಬೀಜಗಳು ದಾಸ್ತಾನು ಮಾಡಿರುವ 29 ಬೀಜ ವಿತರಣಾ ಕೇಂದ್ರಗಳ ಬಗ್ಗೆ ಎಲ್ಲಾ ಗ್ರಾಮ ಪಂಚಾಯತಿಗಳಿಗೆ ಮಾಹಿತಿ ನೀಡಿ ದಿನಾಂಕವಾರು ಬಿತ್ತನೆ ಬೀಜ ವಿತರಣೆ ಮಾಡಲಾಗುತ್ತಿದೆ ಎಂದರು.




ಸಕಾಲದಲ್ಲಿ ಮಳೆಯಾಗಿರುವುದರಿಂದ ಉದ್ದು, ಹೆಸರು ಮತ್ತು ಮಿಶ್ರ ಬೆಳೆಗೆ ಹೆಚ್ಚಿನ ಆದ್ಯತೆ ನೀಡಬೇಕು. ಹಾಗೂ ಡಿಎಪಿ ಬದಲಿಗೆ ಸಂಯುಕ್ತ ಗೊಬ್ಬರಗಳನ್ನು ಬಳಸಲು ರೈತರಿಗೆ ಸಲಹೆ ನೀಡಿದರು.

ಕೃಷಿ ಸಂಶೋಧನಾ ಕೇಂದ್ರದ ಕೃಷಿ ವಿಜ್ಞಾನಿಗಳಾದ ಡಾ.ಮಲ್ಲಿಕಾರ್ಜುನ ಲಿಂಗದಳ್ಳಿ ಅವರು ಸಮಗ್ರ ಕೃಷಿ ಪದ್ಧತಿ ಹಾಗೂ ಬಿತ್ತನೆ ಬೀಜ ಉಪಚಾರದ ಕುರಿತು ತರಬೇತಿ ನೀಡಿದರು.

ಈ ಸಂದರ್ಭದಲ್ಲಿ ಜಿಲ್ಲಾ ಕೃಷಿಕ ಸಮಾಜದ ಅಧ್ಯಕ್ಷರಾದ ಸಿದ್ರಾಮಯ್ಯ

(2ನೇ ಪುಟ ನೋಡಿ)

## ಕೊರೋನಾ ಬಗ್ಗೆ ಭಯಭೇಡ ಜಾಗೃತಿ ಅಗತ್ಯ:ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ



ಮಲ್ಲಮ್ಮ ನುಡಿ ವಾರ್ತೆ ಬೀದರ: ಮೇ.27: ಜಿಲ್ಲೆಯಲ್ಲಿ ಸಾರ್ವಜನಿಕರು ಕೋರೋನಾ ಬಗ್ಗೆ ಭಯ ಪಡುವ ಅಗತ್ಯವಿರುವುದಿಲ್ಲ. ಜಿಲ್ಲಾಡಳಿತ ಮತ್ತು ಆರೋಗ್ಯ ಇಲಾಖೆಯಿಂದ ಪರಿಸ್ಥಿತಿಯನ್ನು ಎದುರಿಸಲು ಎಲ್ಲಾ ರೀತಿಯ ಸಕಲ ಸಿದ್ದತೆಯನ್ನು ಬೀದರ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ ಹಾಗೂ ಭೋದಕ ಆಸ್ಪತ್ರೆ ಬೀದರ ಮತ್ತು ಜಿಲ್ಲೆಯ ಎಲ್ಲಾ ತಾಲೂಕಿನ ಸಾರ್ವಜನಿಕ ಆಸ್ಪತ್ರೆಗಳಲ್ಲಿ ವ್ಯವಸ್ಥೆ ಮಾಡಿಕೊಳ್ಳಲಾಗಿದೆ ಎಂದು ಜಿಲ್ಲಾಧಿಕಾರಿಗಳಾದ ಶಿಲ್ಪಾ ಶರ್ಮಾ ಅವರು ತಿಳಿಸಿದ್ದಾರೆ.

ಕಾರಣ ಸಾರ್ವಜನಿಕರು ಜಿಲ್ಲಾಡಳಿತ ಮತ್ತು ಆರೋಗ್ಯ ಇಲಾಖೆಯಿಂದ ನೀಡುವ ಮುನ್ನಚ್ಚೆರಿಕೆ ಕ್ರಮಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕೆಂದು ಅವರು ತಿಳಿಸಿದ್ದಾರೆ.

ಯಾರು ಸಂಶಯಾಸ್ಪದ ಕೊರೋನಾ ಸೋಂಕು ಹೊಂದಿರುವವರು: ಯಾವುದೇ ವ್ಯಕ್ತಿ ನೆಗಡಿ, ಕೆಮ್ಮು, ಜ್ವರ, ಗಂಟಲು ಕೆರೆತ, ನೋವು ಹಾಗೂ ಶ್ವಾಸಕೋಶದ ಲಕ್ಷಣಗಳನ್ನು ಹೊಂದಿರಬೇಕು ಮತ್ತು ಇಲ್ಲದೇ ಕಡ್ಡಾಯವಾಗಿ ಆ ವ್ಯಕ್ತಿ ಈಗಾಗಲೇ ಕೊರೋನಾ ಸೋಂಕು ದೃಢಪಟ್ಟಿರುವ ವ್ಯಕ್ತಿ ಸಂಪರ್ಕ ಹೊಂದಿದ್ದರೆ ಅಥವಾ ಆ ವ್ಯಕ್ತಿ ಕೊರೋನಾ ಸೋಂಕು ಪ್ರಕರಣಗಳು ದೃಢಪಟ್ಟಿರುವ ಪ್ರದೇಶ (ಜಿಲ್ಲೆ/ರಾಜ್ಯ/ರಾಷ್ಟ್ರಗಳಿಗೆ) ಈ ಲಕ್ಷಣಗಳು ಕಾಣಿಸಿಕೊಳ್ಳುವ ಹದಿನಾಲ್ಕು ದಿನಗಳ ಒಳಗೆ ಭೇಟಿ ನೀಡಿದರೆ ಅಂಥಹ ವ್ಯಕ್ತಿಗಳನ್ನು ಸಂಶಯಾಸ್ಪದ ಕೊರೋನಾ ಸೋಂಕು ಹೊಂದಿರಬಹುದೆಂದು ಶಂಕಿಸಲಾಗುತ್ತದೆ.

ಶಂಕಿತ ವ್ಯಕ್ತಿಗಳ ರಕ್ತ ಹಾಗೂ ಗಂಟಲಿನ ದ್ರವದ ಮಾದರಿಯನ್ನು ಸಂಗ್ರಹಿಸಿ ಬೀದರ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ಪ್ರಯೋಗಾಲಯದಲ್ಲಿ ಪರೀಕ್ಷೆಗೆ ಒಳಪಡಿಸಲಾಗುತ್ತಿದೆ. ಸೋಂಕಿತ ವ್ಯಕ್ತಿಯ ಕೆಮ್ಮಿದಾಗ, ಸೀನಿದಾಗ ಪಕ್ಕದಲ್ಲಿರುವ ವ್ಯಕ್ತಿಗೆ ತುಂತುರು ಹನಿಗಳ ಮೂಲಕ ಹರಡುತ್ತದೆ. ಆದುದ್ದರಿಂದ ಕೆಮ್ಮು , ನೆಗಡಿ ಹೊಂದಿರುವ ಯಾವುದೇ ವ್ಯಕ್ತಿಯು ಸಾರ್ವಜನಿಕ ಸ್ಥಳಗಳಿಗೆ ಭೇಟಿ ನೀಡಿದಾಗ ಮೂಗು ಹಾಗೂ ಬಾಯಿಯನ್ನು ಮುಚ್ಚಿಕೊಳ್ಳಲು ಮಾಸ್ಕಗಳನ್ನು ಬಳಸಬೇಕು. ಈ ತರಹದ ಲಕ್ಷಣಗಳನ್ನು ಹೊಂದಿರದ ವ್ಯಕ್ತಿಗಳು ಮಾಸ್ಕಗಳನ್ನು ಬಳಸುವ ಅವಶ್ಯಕತೆ ಇರುವುದಿಲ್ಲ.

ಸಾರ್ವಜನಿಕರು ಸೋಂಕು

(2ನೇ ಪುಟ ನೋಡಿ)

## ಲಾರಿ ಡಿಕ್ಕಿ ಓರ್ವ ಸ್ಥಳದಲೇ ಸಾವು



ಮಲ್ಲಮ್ಮ ನುಡಿ ವಾರ್ತೆ

ಕಮಲನಗರ:ಮೇ.27:ಮಂಗಳವಾರ ನಸುಕಿನ ಜಾವ 4 ಗಂಟೆಗೆ ನಿಂತಿದ್ದ ಲಾರಿಗೆ ಹಿಂಬದಿಯಿಂದ ಇನ್ನೊಂದು ಲಾರಿ ಡಿಕ್ಕಿ ಹೊಡೆದ ಪರಿಣಾಮ ಸ್ಥಳದಲ್ಲಿ ಓರ್ವನು ಸಾವನ್ನಪ್ಪಿದ್ದು, ಚಾಲಕನಿಗೆ ಕೈ ಕಾಲುಗಳಿಗೆ ಗಂಭೀರ

(2ನೇ ಪುಟ ನೋಡಿ)

## ಬಿಜೆಪಿಯಿಂದ ಸೋಮಶೇಖರ್, ಶಿವರಾಂ ಹೆಬ್ಬಾರ್ ಉಚ್ಚಾಟನೆ

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು:ಮೇ.27: ಮಹತ್ವದ ಬೆಳವಣಿಗೆಯಲ್ಲಿ ಪಕ್ಷವಿರೋಧಿ ಚಟುವಟಿಕೆ ಆರೋಪದ ಮೇರೆಗೆ ಭಾರತೀಯ ಜನತಾ ಪಕ್ಷ ಯಲ್ಲಿ ಮತ್ತೆರಡು ತಲೆದಂಡವಾಗಿದ್ದು, ಶಾಸಕ ಖಖಿ ಸೋಮಶೇಖರ್ ಮತ್ತು ಶಿವರಾಂ ಹೆಬ್ಬಾರ್ ರನ್ನು ಪಕ್ಷದಿಂದ ಉಚ್ಚಾಟನೆ ಮಾಡಲಾಗಿದೆ.

ಈ ಹಿಂದೆ ಬಿಜೆಪಿ ಪಕ್ಷದ ವಿರುದ್ಧವೇ ಬಹಿರಂಗವಾಗಿ ಮಾತನಾಡುತ್ತಿದ್ದ ಮತ್ತು ಕಾಂಗ್ರೆಸ್ ಪಾಳಯದಲ್ಲಿ ಪದೇ ಪದೇ ಗುರುತಿಸಿಕೊಳ್ಳುತ್ತಿದ್ದ ರೆಬೆಲ್ ಶಾಸಕರಾದ ಖಖಿ ಸೋಮಶೇಖರ್ ಮತ್ತು ಶಿವರಾಂ ಹೆಬ್ಬಾರ್ ಅವರನ್ನು

(2ನೇ ಪುಟ ನೋಡಿ)

## ಅರಣ್ಯದಲ್ಲಿ ರಸ್ತೆ ನಿರ್ಮಾಣ ಪ್ರಸ್ತಾವ ತಿರಸ್ಕರಿಸಿದ ಪರಿಸರ ಸಚಿವಾಲಯ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಮೇ. 27 : ತಾಲ್ಲೂಕಿನ ಅಯಾಸಪೂರ ಸಮೀಪದ ಆರ್‌ಟಿಒ ಕಚೇರಿಗೆ ಸಂಪರ್ಕ ಕಲ್ಪಿಸಲು ರಸ್ತೆ ನಿರ್ಮಾಣಕ್ಕೆ ಅರಣ್ಯ ಪ್ರದೇಶಕ್ಕೆ ಸೇರಿದ 1.76 ಎಕರೆ ಜಮೀನು ನೀಡಬೇಕೆಂಬ ಬೀದರ್ ಜಿಲ್ಲಾ ಅರಣ್ಯ ಇಲಾಖೆಯ ಪ್ರಸ್ತಾವವನ್ನು ಕೇಂದ್ರ ಪರಿಸರ, ಅರಣ್ಯ ಮತ್ತು ಹವಾಮಾನ ಬದಲಾವಣೆ ಸಚಿವಾಲಯ (ಎಮ್‌ಒಇಎಫ್‌ಸಿಸಿ) ತಿರಸ್ಕರಿಸಿದೆ.

ಆರ್‌ಟಿಒ ರೂ 9 ಕೋಟಿ ವೆಚ್ಚದಲ್ಲಿ ಅಯಾಸಪೂರ ಗ್ರಾಮದ ಸಮೀಪ 7 ಎಕರೆ ಜಾಗದಲ್ಲಿ ವಾಹನಗಳ ಚಾಲನಾ ಪರೀಕ್ಷಾ ವಲಯ ಹಾಗೂ ಭಾರಿ ವಾಹನಗಳ ಫಿಟ್‌ನೆಸ್ ಸರ್ಟಿಫಿಕೇಶನ್ (ಎಫ್‌ಸಿ) ಕೇಂದ್ರ ನಿರ್ಮಿಸುತ್ತಿದೆ. ಆದರೆ, ಇದಕ್ಕೆ ನೇರ ರಸ್ತೆ ಸಂಪರ್ಕದ ವ್ಯವಸ್ಥೆ ಇಲ್ಲ. ಅಯಾಸಪೂರ ಗ್ರಾಮದ ರಸ್ತೆ ಮೂಲಕ ಹೋಗಬೇಕು. ಆದರೆ, ಈ ರಸ್ತೆ ಬಹಳ ಕಿರಿದಾಗಿದ್ದು, ಭಾರಿ ವಾಹನಗಳ ಓಡಾಟಕ್ಕೆ ಅದು ಸೂಕ್ತವಾಗಿಲ್ಲ. ಅದಕ್ಕಾಗಿ ಚಿಟ್ಟಾ ಮೀಸಲು ಅರಣ್ಯ ಪ್ರದೇಶದಲ್ಲಿ 1.5 ಕಿ.ಮೀ ರಸ್ತೆ ನಿರ್ಮಾಣಕ್ಕೆ ಅನುಮತಿ ಕೊಡಬೇಕೆಂದು ಆರ್‌ಟಿಒ, ಅರಣ್ಯ ಇಲಾಖೆಗೆ ಕೋರಿಕೆ ಸಲ್ಲಿಸಿತ್ತು.

ಅದರಂತೆ ಅರಣ್ಯ ಇಲಾಖೆ ಕೆಲವು ಷರತ್ತುಗಳನ್ನು ವಿಧಿಸಿ ಪ್ರಸ್ತಾವ ಸಲ್ಲಿಸಿತ್ತು. 'ಆರ್‌ಟಿಒ ಚಾಲನಾ ಪರೀಕ್ಷಾ ಕೇಂದ್ರ ಸಿದ್ಧಗೊಂಡ ನಂತರ ಪರೀಕ್ಷೆಗೆ ನಿತ್ಯ ಕನಿಷ್ಠ 200 ಭಾರಿ ವಾಹನಗಳು ಸಂಚರಿಸುತ್ತವೆ. ಇದಕ್ಕಾಗಿ ರಸ್ತೆ ನಿರ್ಮಾಣಕ್ಕೆ

(2ನೇ ಪುಟ ನೋಡಿ)

ಒಂದನೇ ಪುಟದಿಂದ

## ನಿರ್ಮಾತೃ: ಮುಖ್ಯಮಂತ್ರಿ ಸಿದ್ದರಾಮಯ್ಯ

ಅಣೆಕಟ್ಟು, ಸಾರ್ವಜನಿಕ ವಲಯದಲ್ಲಿ ಕೈಗಾರಿಕೆ, ಶಿಕ್ಷಣ ಸಂಸ್ಥೆಗಳನ್ನೂ ಸ್ಥಾಪಿಸಿದರು.

ದೇಶ ಆರ್ಥಿಕವಾಗಿ ಸಬಲತೆಯನ್ನು ಕಂಡುಕೊಂಡಿದ್ದರೆ, ಆಹಾರದಲ್ಲಿ ಸ್ವಾವಲಂಬನೆಯನ್ನು ಕಂಡುಕೊಂಡಿದ್ದರೆ ನೆಹರೂ ಅವರು ಹಾಕಿದ ಅಡಿಪಾಯ ಕಾರಣ ಎಂದರು. ನೆಹರೂ ಅವರನ್ನು ಗೌರವದಿಂದ ಸ್ಮರಿಸುವ ಕೆಲಸವನ್ನು ಪ್ರತಿಯೊಬ್ಬ ಭಾರತೀಯನೂ ಮಾಡಬೇಕು ಎಂದರು. ಆಧುನಿಕ ಭಾರತಕ್ಕೆ ನೆಹರೂ ಅಡಿಪಾಯ ಹಾಕಿರದೇ ಹೋಗಿದ್ದರೆ ಇಂದಿನ ಭಾರತ ಇರುತ್ತಿರಲಿಲ್ಲ. ಆರ್ಥಿಕತೆಯಲ್ಲಿ ಜಗತ್ತಿನಲ್ಲಿ 5 ನೇ ಸ್ಥಾನದಲ್ಲಿದ್ದರೆ ಅದಕ್ಕೆ ನೆಹರೂ ಅವರೇ ಕಾರಣ ಎಂದರು.

ಕೋವಿಡ್: ವೃದ್ಧರು, ಕಾಯಿಲೆಯಿರುವವರು ಮಾಸ್ಕ್ ಕಡ್ಡಾಯವಾಗಿ ಹಾಕಿಕೊಳ್ಳುವಂತೆ ಸೂಚಿಸಲಾಗಿದೆ:

ಕೋವಿಡ್ ಸಂಬಂಧಿಸಿದಂತೆ ನಿನ್ನೆ ನಡೆದ ಸಭೆಯಲ್ಲಿ ಮುನ್ನೆಚ್ಚರಿಕಾ ಬಗ್ಗೆ ಚರ್ಚಿಸಲಾಗಿದೆ. ನಾವು ಎಲ್ಲದಕ್ಕೂ ಸಿದ್ಧರಾಗಿರಬೇಕು. ವೆಂಟಿಲೇಟರ್, ಆಮ್ಲಜನಕ, ವಾರ್ಡ್ ಗಳಿಗೆ ತೊಂದರೆಯಾಗದಂತೆ ಕ್ರಮ ತೆಗೆದುಕೊಳ್ಳಬೇಕು ಎಂದು ಸೂಚಿಸಲಾಗಿದೆ. ಸುಮಾರು 65 ಇದ್ದ ಪ್ರಕರಣಗಳು 80 ಆಗಿವೆ. ಇದು ಗಂಭೀರವಾದ ತಳಿಯಲ್ಲ. ನೆಗಡಿ, ಕೆಮ್ಮು, ಜ್ವರ ಬಂದಿರುವ ಮಕ್ಕಳನ್ನು ಶಾಲೆಗೆ ಕಳುಹಿಸಬಾರದು ಹಾಗೂ ವೃದ್ಧರು, ವಿವಿಧ ಕಾಯಿಲೆಗಳಿಗೆ ತುತ್ತಾಗಿರುವವರು ಕಡ್ಡಾಯವಾಗಿ ಮಾಸ್ಕ್ ಧರಿಸಬೇಕು. ಲಸಿಕೆಗಳನ್ನು ಮುನ್ನೆಚ್ಚರಿಕಾ ಕ್ರಮವಾಗಿ ಸಂಗ್ರಹಿಸಬೇಕು ಎಂದು ಸೂಚಿಸಲಾಗಿದೆ ಎಂದರು.

ಎಲ್ಲರೂ ಮಾಸ್ಕ್ ಧರಿಸುವುದನ್ನು ಕಡ್ಡಾಯ ಮಾಡಿಲ್ಲ. ಆದರೆ ವೃದ್ಧರು, ಕಾಯಿಲೆಯಿರುವವರು ಮಾಸ್ಕ್ ಕಡ್ಡಾಯವಾಗಿ ಹಾಕಿಕೊಳ್ಳುವಂತೆ ಸೂಚಿಸಲಾಗಿದೆ. ವಿಮಾನ ನಿಲ್ದಾಣಗಳಲ್ಲಿ ತಪಾಸಣೆ ಮಾಡಲು ಕೇಂದ್ರದಿಂದ ಸೂಚನೆ ಬಂದಿಲ್ಲ. ಆದರೆ ಎಚ್ಚರಿಕೆ ವಹಿಸಲಾಗುವುದು ಎಂದರು.

## ವಿತರಣೆ ಮಾಡಿ-ಸಚಿವ ರಹೀಂ ಖಾನ್

ಸ್ವಾಮಿ, ಬೀದರ ಕೃಷಿ ವಿಜ್ಞಾನ ಕೇಂದ್ರದ ಮುಖ್ಯಸ್ಥರಾದ ಡಾ.ಆರ್.ಎಲ್. ಜಾಧವ ಚಾಂಬೋಳ್ ಗ್ರಾಮ ಪಂಚಾಯತ ಅಧ್ಯಕ್ಷರಾದ ಸುರೇಖಾ ಅರ್ಜುನ ಕೋಳಿ, ಉಪಾಧ್ಯಕ್ಷರಾದ ದೌಲತರಾವ, ಚಾಂಬೋಳ್ ಪಿಕೆಪಿಎಸ್ ಅಧ್ಯಕ್ಷರಾದ ಸುನಿಲ್ ಪಾಟೀಲ್, ಜಿಲ್ಲಾ ಕೃಷಿಕ ಸಮಾಜದ ಸದಸ್ಯರಾದ ಸಂಜು ಪಾಟೀಲ್ ಕನ್ನಳ್ಳಿ, ತಾಲ್ಲೂಕ ಪಂಚಾಯತಿ ಸದಸ್ಯರಾದ ರಾಮರಾವ ಪಾಟೀಲ್, ನಾಗೇಂದ್ರ ಪಾಟೀಲ್, ಬಂಡೆಪ್ಪಾ ಜ್ಯಾಂತೆ, ಧನರಾಜ ಪಾಟೀಲ್, ಉಮೇಸ ಮೊಟ್ಟೆ, ಚಂದ್ರಕಾಂತ ಹಿಪ್ಪಳಗಾಂವ ಸೇರಿದಂತೆ ಇತರರು ಉಪಸ್ಥಿತರಿದ್ದರು.

## ಅಗತ್ಯ:ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ

ತಗಲದಂತೆ ಮುಂಜಾಗೃತಾ ಕ್ರಮಗಳನ್ನು ಕಟ್ಟು ನಿಟ್ಟಾಗಿ ಅನುಸರಿಸಬೇಕು: ಕೆಮ್ಮುವಾಗ, ಸೀನುವಾಗ ಕರವಸ್ತ್ರ ಅಥವಾ ಟಿಶ್ಯೂ ಪೇಪರ್‌ನಿಂದ ಮೂರು ಹಾಗೂ ಬಾಯಿಯನ್ನು ಮುಚ್ಚಿಕೊಳ್ಳುವುದು ಮತ್ತು ಅದನ್ನು ಸಮರ್ಪಕವಾಗಿ ವಿಲೆವಾರಿ ಅಥವಾ ನಾಶ ಪಡಿಸುವುದು.ಆಗಾಗ ಕೈಗಳನ್ನು ಶೇ.70 ಪ್ರತಿಶತಕ್ಕಿಂತ ಹೆಚ್ಚು ಅಲ್ಕೋಹಾಲ್ ಇರುವ ಹ್ಯಾಂಡ್‌ವಾಶ್‌ಗಳಿಂದ ತೊಳೆಯುವುದು. ವೈಯಕ್ತಿಕ ಸ್ವಚ್ಚತೆ ಪಾಲಿಸುವುದು. ಜನನಿಬಿಡಾದ ಪ್ರದೇಶದಿಂದ ದೂರವಿರುವುದು. ಸೋಂಕು ಇರುವ ವ್ಯಕ್ತಿಯ ಅತಿ ಸಮೀಪ ಹೋಗಬಾರದು. ಹಸ್ತಲಾಘವ, ತಬ್ಬಿಕೊಳ್ಳುವುದು ಅಥವಾ ಚುಂಬನ ಮಾಡಬಾರದು. ಕಣ್ಣು, ಮೂಗು ಹಾಗೂ ಬಾಯಿಯನ್ನು ಪದೇ ಪದೇ ಮುಟ್ಟಿಕೊಳ್ಳಬಾರದು. ಸಾರ್ವಜನಿಕ ಸ್ಥಳಗಳಲ್ಲಿ ಸಾರ್ವಜನಿಕರು ಸಾಮಾನ್ಯವಾಗಿ ಮುಟ್ಟುವ ವಸ್ತುಗಳನ್ನು ಮುಟ್ಟಬಾರದು. ಸಾರ್ವಜನಿಕರು ಸಾಮಾನ್ಯ ಜ್ವರವಾಗಿದ್ದಲ್ಲಿ ಕೋವಿಡ್-19 ಪರೀಕ್ಷೆ ಮಾಡಿಸಿಕೊಳ್ಳುವ ಅಗತ್ಯವಿಲ್ಲ. ಆರೋಗ್ಯ ಇಲಾಖೆಯ ಎಲ್ಲಾ ಸಿಬ್ಬಂದಿಗಳಿಗೆ ಸದರಿ ಸೋಂಕು ಕುರಿತು ಮಾಹಿತಿ ನೀಡಲಾಗಿದೆ ಮತ್ತು ಈ ಸಿಬ್ಬಂದಿಗಳು ತಮ್ಮ ತಮ್ಮ ವ್ಯಾಪ್ತಿಯಲ್ಲಿ ಸಾರ್ವಜನಿಕರಿಗೆ ಆರೋಗ್ಯ ಶಿಕ್ಷಣ ನೀಡುವಂತೆ ಸೂಚಿಸಲಾಗಿದೆ.

## ತಿರಸ್ಕರಿಸಿದ ಪರಿಸರ ಸಚಿವಾಲಯ

ಆರ್‌ಟಿಒ ಅನುಮತಿ ಕೇಳಿದೆ. ಇದಕ್ಕಾಗಿ ಬೇವಿನ ಮರ, ನೀಲಗಿರಿ ಸೇರಿದಂತೆ ಇತರೆ ಜಾತಿಯ 84 ಮರಗಳನ್ನು ತೆರವುಗೊಳಿಸಬೇಕಾಗುತ್ತದೆ. ಕೃಷ್ಣಮೃಗ, ಕಾಡುಹಂದಿಗಳು ಅಧಿಕ ಪ್ರಮಾಣದಲ್ಲಿದ್ದು, ವಾಹನಗಳ ಸಂಚಾರದಿಂದ ಅವುಗಳಿಗೆ ತೊಡಕಾಗಬಹುದು. ಅದಕ್ಕಾಗಿ ರಸ್ತೆಯ ಎರಡೂ ಬದಿಯಲ್ಲಿ 8ರಿಂದ 10 ಅಡಿ ಎತ್ತರದ ಗೋಡೆ ನಿರ್ಮಿಸಬೇಕಾಗುತ್ತದೆ. ಇತರೆ ಸುರಕ್ಷತಾ ಕ್ರಮಗಳನ್ನು ಕೈಗೊಳ್ಳಬೇಕಾಗುತ್ತದೆ' ಎಂದು ಉಪ ಅರಣ್ಯ ಸಂರಕ್ಷಣಾಧಿಕಾರಿ ವಾನತಿ ಎಮ್.ಎಮ್. ಅವರು ಪ್ರಸ್ತಾವದಲ್ಲಿ ವಿವರಿಸಿದ್ದರು.

ಈ ಮೀಸಲು ಅರಣ್ಯ ಪ್ರದೇಶವು ಯಾವುದೇ ರಾಷ್ಟ್ರೀಯ ಉದ್ಯಾನ, ಹುಲಿ ಸಂರಕ್ಷಿತ ಪ್ರದೇಶ ಅಥವಾ ಆನೆಗಳ ಕಾರಿಡಾರ್‌ಗೆ ಒಳಪಟ್ಟಿಲ್ಲ. ಅಳಿವಿನಂಚಿನಲ್ಲಿರುವ ಸಸ್ಯ ಸಂಪತ್ತು ಕೂಡ ಇಲ್ಲ. ಷರತ್ತಿಗೆ ಒಳಪಟ್ಟು ರಸ್ತೆ ನಿರ್ಮಿಸಲು ಅನುಮತಿ ಕೊಡಬಹುದು ಎಂಬ ವಿವರಣೆ ಒಳಗೊಂಡಿತ್ತು. ಈ ವಿಷಯವನ್ನು ವಾನತಿ ಅವರು ಭಾನುವಾರ ಖಚಿತಪಡಿಸಿದ್ದಾರೆ.

ಆದರೆ, ಪರಿಸರ ಸಚಿವಾಲಯವು ಅರಣ್ಯ ಪ್ರದೇಶದ ಸಂರಕ್ಷಣೆಯ ಭಾಗವಾಗಿ ಈ ಪ್ರಸ್ತಾವ ತಿರಸ್ಕರಿಸಲಾಗಿದೆ ಎಂದು ತಿಳಿಸಿದೆ. 'ಈಗಾಗಲೇ ಆರ್‌ಟಿಒ ಕಚೇರಿಗೆ ಒಂದು ರಸ್ತೆ ಇದೆ. ಹೀಗಿರುವಾಗ ಅರಣ್ಯ ಪ್ರದೇಶದೊಳಗೆ ರಸ್ತೆ ನಿರ್ಮಿಸುವುದು ಸೂಕ್ತವಲ್ಲ. ಇದರಿಂದ 84 ಮರಗಳನ್ನು ಕತ್ತರಿಸಬೇಕಾಗುತ್ತದೆ. ಅಲ್ಲಿರುವ ವನ್ಯಜೀವಿಗಳಿಗೂ ಸಮಸ್ಯೆ ಎದುರಾಗುತ್ತದೆ' ಕಾರಣ ನೀಡಿದೆ.

'ನಾನು ಸ್ಥಳ ಪರಿಶೀಲಿಸಿ ವರದಿ ಸಲ್ಲಿಸಿದ್ದೆ. ಅಯಾಸಪೂರ ಗ್ರಾಮದ ಮೂಲಕ ಹಾದು ಹೋಗಿರುವ ರಸ್ತೆ ಬಹಳ ಕಿರಿದಾಗಿದೆ. ಭವಿಷ್ಯದಲ್ಲಿ ದೊಡ್ಡ ವಾಹನಗಳ ಸಂಚಾರಕ್ಕೆ ತೊಂದರೆಯಾಗುತ್ತದೆ. ಅದನ್ನು ಗಮನದಲ್ಲಿ ಇಟ್ಟುಕೊಂಡು ಕೆಲವು ಷರತ್ತುಗಳೊಂದಿಗೆ ರಸ್ತೆ ನಿರ್ಮಾಣಕ್ಕೆ ಅನುಮತಿ ಕೊಡಬಹುದು ಎಂದು ತಿಳಿಸಿದ್ದೆ. ಆದರೆ, ಪರಿಸರ ಸಚಿವಾಲಯವು ಉಪಗ್ರಹ ಆಧಾರಿತ ಚಿತ್ರಗಳನ್ನು ಪರಿಶೀಲಿಸಿ, ಪ್ರಸ್ತಾವ ತಿರಸ್ಕರಿಸಿದೆ. ಈ ವಿಷಯವನ್ನು ಸರ್ಕಾರದ ಗಮನಕ್ಕೂ ತರಲಾಗಿದೆ' ಎಂದು ವಾನತಿ ತಿಳಿಸಿದ್ದಾರೆ.

ಕೇಂದ್ರ ಪರಿಸರ ಸಚಿವಾಲಯದ ಕ್ರಮವನ್ನು ಪರಿಸರವಾದಿಗಳು ಸ್ವಾಗತಿಸಿದ್ದಾರೆ. 'ಬೀದರ್ ಜಿಲ್ಲೆಯಲ್ಲಿ ಹಸಿರು ಕಡಿಮೆಯಾಗುತ್ತಿದೆ. ಹೀಗಿರುವಾಗ ಅರಣ್ಯ ಪ್ರದೇಶದಲ್ಲಿ ರಸ್ತೆ ನಿರ್ಮಿಸಲು ಅವಕಾಶ ಕೊಟ್ಟರೆ ಇನ್ನಷ್ಟು ಹಸಿರು ಹೋಗುತ್ತದೆ. ಅರಣ್ಯ ಇಲಾಖೆಯ ಪ್ರಸ್ತಾವ ತಿರಸ್ಕರಿಸಿ ಪರಿಸರ ಸಚಿವಾಲಯ ಉತ್ತಮ ಕೆಲಸ ಮಾಡಿದೆ' ಎಂದು ಪರಿಸರ ಹೋರಾಟಗಾರರೂ ಆದ ರಾಜ್ಯ ವನ್ಯಜೀವಿ ಮಂಡಳಿ ಸದಸ್ಯ ವಿನಯ್ ಮಾಳಗೆ ಪ್ರತಿಕ್ರಿಯಿಸಿದ್ದಾರೆ. – ಜಿ.ಕೆ. ಬಿರಾದಾರ ಆರ್‌ಟಿಒ ಬೀದರ್‌ಈಗಾಗಲೇ ಆರ್‌ಟಿಒ ಕಚೇರಿ ನಿರ್ಮಾಣ ಕಾರ್ಯ ಬಹುತೇಕ ಪೂರ್ಣಗೊಂಡಿದೆ. ಅದಕ್ಕೆ ಸೂಕ್ತ ರಸ್ತೆಯಿಲ್ಲ. ರಸ್ತೆ ನಿರ್ಮಾಣಕ್ಕೆ ಪ್ರಸ್ತಾವ ಸಲ್ಲಿಸಿದ್ದೆವು. ಅದು ತಿರಸ್ಕೃತಗೊಂಡಿದೆ.– ವಾನತಿ ಎಂ.ಎಂ. ಉಪ ಅರಣ್ಯ ಸಂರಕ್ಷಣಾಧಿಕಾರಿಸರ್ಕಾರದ ಕೋರಿಕೆ ಮೇರೆಗೆ ನಾನು ಕಳುಹಿಸಿದ್ದ ಪ್ರಸ್ತಾವವನ್ನು ಪರಿಸರ ಸಚಿವಾಲಯ ತಿರಸ್ಕರಿಸಿದೆ. ಪಟ್ಟಾ ಜಮೀನು ಖರೀದಿಸಿ ರಸ್ತೆ ನಿರ್ಮಿಸಿಕೊಳ್ಳಲು ಆರ್‌ಟಿಒಗೆ ಸಲಹೆ ಮಾಡಿದೆ.

## ಓರ್ವ ಸ್ಥಳದಲೇ ಸಾವು

ಗಾಯಗೊಂಡ ಘಟನೆ ನಡೆದಿದೆ.ಕಮಲನಗರ ನಿವಾಸಿ ಎಜಾಜ್ ಶೇಖ್ ಕಲಿಮೊದ್ದೀನ್ ಶೇಖ್ (37) ಸಾವನ್ನಪ್ಪಿದ ದುರ್ದೈವಿ ಎನ್ನಲಾಗಿದೆ. ಚಾಲಕ ಐಕ್ಬಲ್ ಬಾಗವಾನ (45) ಗಂಭೀರ ಗಾಯಗೊಂಡ ಪರಿಣಾಮ ಹೆಚ್ಚಿನ ಚಿಕಿತ್ಸೆ ಗಾಗಿ ಹೈದ್ರಾಬಾದ್ ಆಸ್ಪತ್ರೆಗೆ ಕರೆದುಕೊಂಡು ಹೋಗಲಾಗಿದೆ ಎಂದು ಮೂಲಗಳಿಂದ ತಿಳಿದುಬಂದಿದೆ.

ಹೈದ್ರಾಬಾದ್ ದಿಂದ ಕಮಲನಗರ ಕಡೆ ತೆರಳುತ್ತಿದ್ದ ಲಾರಿ ಬ್ರಿಡ್ಜ್ ಮೇಲೆ ಪಂಪ್ಚರ್ ಆಗಿತ್ತು. ಟೈರ್ ಚೆಂಜ್ ಮಾಡಲು ತೆಳಗಿಳಿದ ಇಬ್ಬರೂ ಸರಿಪಡಿಸುತ್ತಿದ್ದು . ಅಷ್ಟರಲ್ಲಿಯೇ ಹಿಂಬದಿಯಿಂದ ಲಾರಿಯೊಂದು ಡಿಕ್ಕಿ ಹೊಡೆದ ಪರಿಣಾಮ ಈ ದುರ್ಘಟನೆ ಸಂಭವಿಸಿದೆ ಎಂದು ತಿಳಿದು ಬಂದಿದೆ.

## ಪುರಾವೆಗಳಿವೆ: ಪ್ರಧಾನಿ ಮೋದಿ

ಇಂದು, ಭಾರತ ವಿಶ್ವದ ನಾಲ್ಕನೇ ಅತಿದೊಡ್ಡ ಆರ್ಥಿಕತೆಯಾಗಿದೆ. ನಾವು ಈಗ ಜಪಾನ್ ನ್ನು ಮೀರಿಸಿದೆ ಎಂಬುದು ನಮಗೆಲ್ಲರಿಗೂ ಹೆಮ್ಮೆಯ ವಿಷಯ.ನಾವು ಆರನೇ ಸ್ಥಾನದಿಂದ ಐದನೇ ಸ್ಥಾನಕ್ಕೆ ಆರ್ಥಿಕತೆಯಲ್ಲಿ ಏರಿಕೆಯಾದಾಗ ವಿಶೇಷವಾಗಿ ಯುವಕರಲ್ಲಿ ಉತ್ಸಾಹ ಕಂಡುಬಂತು. ಭಾರತವು 250 ವರ್ಷಗಳ ಕಾಲ ನಮ್ಮನ್ನು ಆಳಿದ ರಾಷ್ಟ್ರವಾದ ಯುನೈಟೆಡ್ ಕಿಂಗ್‌ಡಮ್ ನ್ನು ಹಿಂದಿಕ್ಕಿದೆ ಎಂಬುದು ನಮಗೆ ಹೆಮ್ಮೆಯ ಸಂಗತಿ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ.

## ಶಿವರಾಂ ಹೆಬ್ಬಾರ್ ಉಚ್ಚಾಟನೆ



ನಿರೀಕ್ಷೆಯಂತೆಯೇ ಬಿಜೆಪಿ ಪಕ್ಷದಿಂದ ಉಚ್ಚಾಟನೆ ಮಾಡಲಾಗಿದೆ. ಮುಂದಿನ 6 ವರ್ಷಗಳ ಕಾಲ ಇಬ್ಬರೂ ಶಾಸಕರನ್ನು ಪಕ್ಷದಿಂದ ಉಚ್ಚಾಟಿಸಲಾಗಿದೆ ಎಂದು ತಿಳಿದುಬಂದಿದೆ.ಶಿಸ್ತು ಸಮಿತಿ ವರದಿ ಬೆನ್ನಲ್ಲೇ ಕಠಿಣ ಕ್ರಮ

ಈ ಹಿಂದೆ ಪಕ್ಷ ವಿರೋದಿ ಚಟುವಟಿಕೆ ಹಿನ್ನಲೆಯಲ್ಲಿ ಶಾಸಕರಾದ ಎಸ್.ಟಿ. ಸೋಮಶೇಖರ್ ಮತ್ತು ಶಿವರಾಮ ಹೆಬ್ಬಾರ್ ಅವರನ್ನು ಪಕ್ಷದಿಂದ ಉಚ್ಚಾಟಿಸುವಂತೆ ಕೇಂದ್ರ ಸಮಿತಿಗೆ ಬಿಜೆಪಿ ಶಿಸ್ತು ಸಮಿತಿ ವರದಿ ನೀಡಿತ್ತು.

ಈ ಕುರಿತು ಮಾತನಾಡಿದ್ದ ಬಿಜೆಪಿ ರಾಜ್ಯ ಘಟಕದ ಶಿಸ್ತು ಸಮಿತಿ ಅಧ್ಯಕ್ಷ ಲಿಂಗರಾಜ ಪಾಟೀಲ ಅವರು, 'ಶಾಸಕರಾದ ಎಸ್.ಟಿ. ಸೋಮಶೇಖರ್ ಮತ್ತು ಶಿವರಾಮ ಹೆಬ್ಬಾರ್ ಅವರನ್ನು ಪಕ್ಷದಿಂದ ಉಚ್ಚಾಟಿಸುವಂತೆ ಕೇಂದ್ರ ಸಮಿತಿಗೆ ವರದಿ ನೀಡಿದ್ದೇನೆ. ರಾಷ್ಟ್ರ ಮತ್ತು ರಾಜ್ಯ ನಾಯಕರು ಈ ತಿಂಗಳ ಅಂತ್ಯದೊಳಗೆ ಎಲ್ಲ ಗೊಂದಲಕ್ಕೂ ಅಂತ್ಯ ಹಾಡಲಿದ್ದಾರೆ ಎಂದು ಹೇಳಿದ್ದರು.'ಭಿನ್ನಮತೀಯ ಚಟುವಟಿಕೆ ನಡೆಸುತ್ತಿದ್ದ ಮುಖಂಡರ ಕುರಿತು ವರದಿ ನೀಡುವಂತೆ ಪಕ್ಷದ ಕೇಂದ್ರ ಸಮಿತಿ ಸೂಚಿಸಿತ್ತು. ಮಂಡಳ ಅಧ್ಯಕ್ಷರ ಮತ್ತು ಜಿಲ್ಲಾ ಘಟಕದ ಅಧ್ಯಕರ ವರದಿಯಾಧರಿಸಿ, ಇಬ್ಬರು ಶಾಸಕರನ್ನು ಪಕ್ಷದಿಂದ ಹೊರಗೆ ಹಾಕುವಂತೆ ಒಂದು ವರ್ಷದ ಹಿಂದೆಯೇ ವರದಿ ನೀಡಿದ್ದೇನೆ. ಆದರೆ, ಯಾವುದೇ ಸಂಸದರ, ಶಾಸಕರ ವಿರುದ್ಧ ಕ್ರಮಕೈಗೊಳ್ಳಲು ನನಗೆ ಅಧಿಕಾರವಿಲ್ಲ.

ವರದಿ ನೀಡುವುದಷ್ಟೇ ನನ್ನ ಕಾರ್ಯವ್ಯಾಪ್ತಿ. ಶಿಸ್ತು ಸಮಿತಿ ಅಧ್ಯಕ್ಷನಾದ ನಂತರ ಸಾಕಷ್ಟು ಪ್ರಕರಣಗಳು ಬಂದಿದ್ದವು. ಬಹುತೇಕ ಪ್ರಕರಣಗಳನ್ನು ಪಕ್ಷದ ವರಿಷ್ಠರ ಎದುರು ಕೂತು ಚರ್ಚಿಸಿ ಪರಿಹಾರಕಂಡುಕೊಳ್ಳಲಾಗಿದೆ. ಕೆಲವಷ್ಟು ಪ್ರಕರಣದ ಕುರಿತು ವರದಿ ನೀಡಿದ್ದೇನೆ. ಪಕ್ಷದ ತತ್ವ ಸಿದ್ಧಾಂತ ಮತ್ತು ನಿಯಮಗಳ ಅಡಿಯಲ್ಲಿ ಶಿಸ್ತುಕ್ರಮದ ವರದಿ ಸಿದ್ಧಪಡಿಸಲಾಗುತ್ತದೆ ಎಂದು ಲಿಂಗರಾಜ ಪಾಟೀಲ ಹೇಳಿದ್ದರು.

## ಉಚಿತ ಆರೋಗ್ಯ ಶಿಬಿರಗಳಿಂದ ಬಡವರಿಗೆ ಹೆಚ್ಚು ಅನುಕೂಲ

ಮಲ್ಲಮ್ಮ ನುಡಿ ವಾರ್ತೆ

ತಾಳಿಕೋಟಿ:ಮೇ.27: ಸಮಾಜದಲ್ಲಿರುವ ಬಡವರಿಗೆ ಅದರಲ್ಲೂ ಗ್ರಾಮೀಣ ಭಾಗದ ಜನರಿಗೆ ಆರ್ಥಿಕಕಾರಣದಿಂದಾಗಿ ನಗರ ಆಸ್ಪತ್ರೆಗಳಿಗೆ ಹೋಗಲು ಸಾಧ್ಯವಾಗುವುದಿಲ್ಲ ಇಂಥವರಿಗೆ ಅನುಕೂಲವಾಗಲೆಂದೇ ಅನುಗ್ರಹ ಆಸ್ಪತ್ರೆಯು ಗ್ರಾಮೀಣ ಭಾಗದಲ್ಲಿ ಉಚಿತ ಆರೋಗ್ಯ ತಪಾಸಣಾ ಶಿಬಿರಗಳನ್ನು ಹಮ್ಮಿಕೊಳ್ಳುತ್ತಿದೆ ನಮ್ಮ ಈ ಕಾರ್ಯದಲ್ಲಿ ಬಿಎಲ್‌ಡಿಇ ಸಂಸ್ಥೆಯ ಬಿ.ಎಂ.ಪಾಟೀಲ ವೈದ್ಯಕೀಯ ಶಿಕ್ಷಣ ಮಹಾವಿದ್ಯಾಲಯದ ಆಸ್ಪತ್ರೆಯವರು ನಮ್ಮೊಂದಿಗೆ ಕೈ ಜೋಡಿಸಿರುವುದರಿಂದ ನಮಗೆ ಇನ್ನು ಹೆಚ್ಚಿನ ಬಲ ಸಿಕ್ಕಂತಾಗಿದೆ ಎಂದು ಅನುಗ್ರಹ ಕಣ್ಣಿನ ಆಸ್ಪತ್ರೆಯ ಮುಖ್ಯಸ್ಥ ಖ್ಯಾತ ನೇತ್ರ ತಜ್ಞ ಡಾ.ಪ್ರಭುಗೌಡ ಲಿಂಗದಳ್ಳಿ ಹೇಳಿದರು. ಮಂಗಳವಾರ ತಾಲೂಕಿನ ಚಬನೂರ ಗ್ರಾಮದ ಶ್ರೀ ಅಮೋಘಸಿದ್ದೇಶ್ವರ ಜಾತ್ರೋತ್ಸವ ಅಂಗವಾಗಿ ಅನುಗ್ರಹ ಕಣ್ಣಿನ ಆಸ್ಪತ್ರೆಯ ಆರೋಗ್ಯ ಅಭಿಯಾನದಡಿ ಹಾಗೂ ಬಿ ಎಲ್ ಡಿ ಇ ಸಂಸ್ಥೆಯ ಬಿ.ಎಂ.ಪಾಟೀಲ ಮಹಾವಿದ್ಯಾಲಯ ಆಸ್ಪತ್ರೆಯ ಸಹಯೋಗದಲ್ಲಿ ಹಮ್ಮಿಕೊಂಡ ಉಚಿತ ಆರೋಗ್ಯ ಶಿಬಿರ-ಕ್ಕೆ ಚಾಲನೆ ನೀಡಿ ಅವರು



ಮಾತನಾಡಿದರು. ಅನುಗ್ರಹ ಆಸ್ಪತ್ರೆ ನೇತೃತ್ವದಲ್ಲಿ ಗ್ರಾಮೀಣ ಭಾಗದಲ್ಲಿ ಇಂತಹ ಸಾವಿರಾರು ಉಚಿತ ಆರೋಗ್ಯ ತಪಾಸಣೆ ಹಾಗೂ ಶಸ್ತ್ರ ಚಿಕಿತ್ಸಾ ಶಿಬಿರಗಳನ್ನು ನಡೆಸುತ್ತಾ ಬರಲಾಗುತ್ತಿದೆ ಕಳೆದ 25 ವರ್ಷಗಳಿಂದ ಈ ಗ್ರಾಮದ ಶ್ರೀ ಅಮೋಘಸಿದ್ದೇಶ್ವರ ಜಾತ್ರೆಯ ಸಂದರ್ಭದಲ್ಲಿ ಇಂಥ ಶಿಬಿರಗಳನ್ನು ಹಮ್ಮಿಕೊಳ್ಳುತ್ತಿದ್ದೇವೆ ಈ ಶಿಬಿರಗಳಿಂದ ಗ್ರಾಮೀಣ ಭಾಗದ ಜನರಿಗೆ ಹೆಚ್ಚು ಅನುಕೂಲವಾಗಿದೆ ಎಂದರು. ಅನುಗ್ರಹ ಕಣ್ಣಿನ ಆಸ್ಪತ್ರೆ ಮತ್ತು ಬಿ ಎಲ್ ಡಿ ಇ ವೈದ್ಯಕೀಯ ಶಿಕ್ಷಣ ಮಹಾವಿದ್ಯಾಲಯದ ನೇತೃತ್ವದಲ್ಲಿ ನಡೆದ ನೇತ್ರ ತಪಾಸಣೆಯಲ್ಲಿ 1800 ಜನರ ನೇತ್ರ ತಪಾಸಣೆ ಮಾಡಲಾಗಿದ್ದು ಅದರಲ್ಲಿ 450 ಜನರನ್ನು ಶಸ್ತ್ರ ಚಿಕಿತ್ಸೆಗೆ ಆಯ್ಕೆ ಮಾಡಲಾಗಿದೆ. ಇನ್ನುಳಿದ ವಿವಿಧ ರೋಗಗಳಿಗೆ ಸಂಬಂಧಿಸಿದ 700 ಜನ ರೋಗಿಗಳ ತಪಾಸಣೆ ನಡೆಸಲಾಗಿದೆ. ಈ ಉಚಿತ ಆರೋಗ್ಯ ಶಿಬಿರದಲ್ಲಿ ನೇತ್ರ ತಜ್ಞವೈದ್ಯರು, ಚಿಕ್ಕ ಮಕ್ಕಳ ತಜ್ಞ ವೈದ್ಯರು, ಎಲಬು ಕೀಲು ತಜ್ಞ ವೈದ್ಯರು, ಕಿವಿ ಮತ್ತು ಮೂಗು ಗಂಟಲು ತಜ್ಞವೈದ್ಯರು, ಸಕ್ಕರೆ ಕಾಯಿಲೆ, ಹೃದಯ ರೋಗ, ಸ್ತ್ರೀ ರೋಗಕ್ಕೆ ಸಂಬಂಧಿಸಿದ ಹಾಗೂ ಚರ್ಮರೋಗ ತಜ್ಞ ವೈದ್ಯರು ಪಾಲ್ಗೊಂಡು ವಿವಿಧ ರೋಗಗಳಿಗೆ ಸಂಬಂಧಿಸಿದ ತಪಾಸಣೆ ಕೈಗೊಂಡು ಬಿ ಎಲ್ ಡಿ ಇ ಸಂಸ್ಥೆಯಿಂದ ಉಚಿತ ಔಷದೋಪಚಾರ ನೀಡಿದರು. ಉಚಿತ ಆರೋಗ್ಯ ತಪಾಸಣೆ ಮತ್ತು ಶಸ್ತ್ರಚಿಕಿತ್ಸಾ ಶಿಬಿರದಲ್ಲಿ ಅನುಗ್ರಹ ಆಸ್ಪತ್ರೆಯ ತಜ್ಞ ವೈದ್ಯರಾದ ಡಾ.ಪ್ರಭುಗೌಡ ಲಿಂಗದಳ್ಳಿ, ಡಾ.ವಾಲಿನಿ ಪ್ರಭುಗೌಡ, ಡಾ. ಸಂತೋಷ ಪಾಟೀಲ, ಡಾ.ರೋಹಿಣಿ ಪಾಟೀಲ, ಡಾ.ಆನಂದಗಣ್ಣೂರ, ಡಾ.ಮಧುಗನ್ನೂರ, ದತ್ತಾತ್ರೇಯ ಹೊಸಮಠ, ಬಿ.ಎಂ.ಪಾಟೀಲ ವೈದ್ಯಕೀಯ ಶಿಕ್ಷಣ ಮಹಾವಿದ್ಯಾಲಯದ ವೈದ್ಯರಾದ ಡಾ. ವಿಶ್ವನಾಥ ಜಾಲವಾದಿ, ಡಾ.ಸನ್ಮಿತ್ರ ಐಹೊಳ್ಳಿ, ಡಾ.ಪವನಕುಮಾರ ಬಿರಾದಾರ, ಡಾ.ಆರ್.ಎನ್. ಕರಡಿ, ಗ್ರಾಮದ ಗಣ್ಯರಾದ ಬಸನಗೌಡ ಬ. ಪಾಟೀಲ, ಸಂಗನಗೌಡ ಪಾಟೀಲ, ಮಶಾಕಸಾಬ ದೊಡ್ಡಮನಿ, ಅನುಗ್ರಹ ಆಸ್ಪತ್ರೆ ಸಿಬ್ಬಂದಿಗಳಾದ ಸುನಿಲ್ ಕೊಡಗಾನೂರ, ಮಲ್ಲು ಗಡೇದ, ರೇಣುಕಾ ಗಡೇದ, ಸಿದ್ದು ಯಾಳವಾರ, ವಿನೋದ, ಆನಂದ ನಾವಿ, ಶರಣು ಕೊಂಡಗೂಳಿ, ಹನುಮಂತ ಕೊಂಡಗೂಳಿ, ಶಿವು ಕಲ್ಕೇರಿ, ಸಂಗಮೇಶ ಪಾಟೀಲ ಹಾಗೂ ಬಿ ಎಲ್ ಡಿ ಇ ವೈದ್ಯಕೀಯ ಶಿಕ್ಷಣ ಮಹಾವಿದ್ಯಾಲಯದ ಸಿಬ್ಬಂದಿಗಳು ಹಾಗೂ ಶಿಬಿರಾರ್ಥಿಗಳು ಇದ್ದರು.



ತಾಳಿಕೋಟಿ:ಪಟ್ಟಣದಲ್ಲಿ ನೂತನವಾಗಿ ನಿರ್ಮಾಣಗೊಂಡಿರುವ ಇಂದಿರಾ ಕ್ಯಾಂಟೀನ್ ವನ್ನು ಕರ್ನಾಟಕ ಸಾಬೂನು ಮತ್ತು ಮಾರ್ಜಕ ನಿಗಮದ ಅಧ್ಯಕ್ಷ ಶಾಸಕ ಅಪ್ಪಾಜಿ ನಾಡಗೌಡರು ಮಂಗಳವಾರ ಲೋಕಾರ್ಪಣೆ ಗೊಳಿಸಿದರು. ಈ ವೇಳೆ ತಹಸಿಲ್ದಾರ ಡಾ.ವಿನಯಾ ಹೂಗಾರ, ಪುರಸಭೆ ಅಧ್ಯಕ್ಷೆ ಜುಬೇದಾಬೇಗಂ ಹುಸೇನ ಭಾಷಾ ಜಮಾದಾರ, ಉಪಾಧ್ಯಕ್ಷೆ ಗೌರಮ್ಮ ಕುಂಬಾರ, ಪುರಸಭೆ ಮುಖ್ಯಾ ಧಿಕಾರಿ ಮೋಹನ ಜಾಧವ, ಪುರಸಭೆ ಸದಸ್ಯರು ಕಾಂಗ್ರೆಸ್ ಪಕ್ಷದ ಮುಖಂಡರು ಪಟ್ಟಣದ ಗಣ್ಯರು ಉಪಸ್ಥಿತರಿದ್ದರು.

## 18 ಜನರಿಗೆ ಹುಚ್ಚು ನಾಯಿ ಕಡಿತ

ಇಂಡಿ:ಮೇ.27:ಪಟ್ಟಣದ ವಿವಿಧ ಕಡೆಗೆ ಒಂದೇ ಹುಚ್ಚು ನಾಯಿ 18 ಜನರಿಗೆ ಕಡಿದಿದೆ. ಟಿಪ್ಪು ಸುಲ್ತಾನ ವೃತ್ತದಲ್ಲಿ 4 ಜನರಿಗೆ, ಸಿಂದಗಿ ರಸ್ತೆಯಲ್ಲಿ 9 ಜನರಿಗೆ, ಅಗರಖೇಡ ರಸ್ತೆಯಲ್ಲಿ 5 ಜನರಿಗೆ ಕಡಿದ ಘಟನೆ ಇಂಡಿ ಪಟ್ಟಣದಲ್ಲಿ ನಡೆದಿದೆ. ಪಟ್ಟಣದ ಸರಕಾರಿ ಆಸ್ಪತ್ರೆಯಲ್ಲಿ ಅಂಟಿರೇಬಿಸ್ ವ್ಯಾಕ್ಸಿನ್ ನೀಡಲಾಗಿದೆ. ಜೊತೆಗೆ ಟಿಟಿಚುಚ್ಚುಮದ್ದು ನೀಡಲಾಗಿದೆ. ಡಾ॥ ರಾಜೇಶ ಕೋಳೆಕರ, ಡಾ॥ ಪ್ರೀತಿ ಕೋಳೆಕರ, ಡಾ॥



ಸಂತೋಷ ಪವಾರ, ಡಾ॥ ರವಿ ಅಂಬೇವಾಡಿ, ಡಾ॥ ವಿಪುಲ್ ಕೋಳೆಕರ ನಾಯಿ ಕಡಿತದ ಜನರಿಗೆ ಆರೈಕೆ ಮಾಡಿದರು. ಹುಚ್ಚು ನಾಯಿಯನ್ನು ಸಾರ್ವಜನಿಕರು ಬಸ್ ನಿಲ್ದಾಣ ಹತ್ತಿರ ಹೊಡೆದು ಸಾಯಿಸಿದ್ದು,.ಸಾರ್ವಜನಿಕರು ಭಯ ಪಡುವ ಅವಶ್ಯಕತೆಯಿಲ್ಲ ಎನ್ನಲಾಗಿದೆ.

## ಡಿ.ಸಿ. ಬಗ್ಗೆ ಅವಹೇಳನಕಾರಿ ಹೇಳಿಕೆಗೆ ನೌಕರರ ಸಂಘ ಖಂಡನೆ

ಕಲಬುರಗಿ,ಮೇ.27:ಕಲಬುರಗಿ ಜಿಲ್ಲೆಯ ದಕ್ಷ ಜಿಲ್ಲಾಧಿಕಾರಿ ಬಿ.ಫೌಜಿಯಾ ತರನ್ನುಮ್ ಅವರ ಬಗ್ಗೆ ಇತ್ತೀಚೆಗೆ ವಿಧಾನ ಪರಿಷತ್ ಶಾಸಕ ಎನ್.ರವಿಕುಮಾರ ಅವರ ಅವಹೇಳನಕಾರಿ ಹೇಳಿಕೆಗೆ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಕಲಬುರಗಿ ಜಿಲ್ಲಾ ಘಟಕ ತೀವ್ರವಾಗಿ



ಖಂಡಿಸಿದೆ.ಈ ರೀತಿಯ ಹೇಳಿಕೆಯಿಂದ ಸರ್ಕಾರಿ ಅಧಿಕಾರಿ-ನೌಕರರ ಆತ್ಮಸ್ಥೈರ್ಯಕುಸಿಯುವಂತಾಗುತ್ತದೆ. ಡಿ.ಸಿ.ಬಿ.ಫೌಜಿಯಾ ತರನ್ನುಮ್ ಅವರು ಜಿಲ್ಲೆಯ ಅಭಿವೃದ್ಧಿಗೆ ಹಗಲಿರುಳು ಶ್ರಮಿಸುತ್ತಿದ್ದಾರೆ ಎಂದು ಜಿಲ್ಲಾಧ್ಯಕ್ಷ ಬಸವರಾಜ ಬಳೂಂಡಗಿ ತಿಳಿಸಿದ್ದಾರೆ.

## ಬಿತ್ತನೆ ಬೀಜ ಕೊರತೆ ಆಗದಂತೆ ಕ್ರಮಕೈಗೊಳ್ಳಿ:ಡಾ.ಬೆಲ್ದಾಳೆ

ಮಲ್ಲಮ್ಮ ನುಡಿ ವಾರ್ತೆ

ಬೀದರ್:ಮೇ.27: ದಕ್ಷಿಣ ಕ್ಷೇತ್ರದ ವ್ಯಾಪ್ತಿಗೆ ಬರುವ ಚಿಟ್ಟಗುಪ್ಪ ತಾಲ್ಲೂಕಿನ 9 ಗ್ರಾಮಪಂಚಾಯಿತಿಯ ಯಾವ ಗ್ರಾಮದ ರೈತರಿಗೂ

ಬಿತ್ತನೆ ಬೀಜ ಹಾಗೂ ಗೊಬ್ಬರ ಕೊರತೆ ಆಗದಂತೆ ಕೃಷಿ ಇಲಾಖೆ ಕ್ರಮ ಕೈಗೊಳ್ಳಬೇಕು ಎಂದು ಬೀದರ್ ದಕ್ಷಿಣ ಕ್ಷೇತ್ರದ ಶಾಸಕರಾದ ಡಾ. ಶೈಲೇಂದ್ರ ಬೆಲ್ದಾಳೆ ಹೇಳಿದರು.

ಬೀದರ್ ದಕ್ಷಿಣ ಕ್ಷೇತ್ರದ ಬೇಮಳಖೇಡಾ ಗ್ರಾಮದಲ್ಲಿ ರೈತ ಸಂಪರ್ಕ ಕೇಂದ್ರದ ವತಿಯಿಂದ ಗ್ರಾಮ ಪಂಚಾಯಿತಿ ಆವರಣದಲ್ಲಿ ನಡೆದ 2025–26ನೇ ಸಾಲಿನ ಮುಂಗಾರು ಹಂಗಾಮಿನ ಬಿತ್ತನೆ ಬೀಜ ವಿತರಣೆ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಮುಂಗಾರು ಹಂಗಾಮು ಪ್ರಾರಂಭವಾಗಿದ್ದು, ಬಿತ್ತನೆ ಕಾರ್ಯ ಚುರುಕುಗೊಳ್ಳುವ ಮುನ್ನ. ಕೃಷಿ ಇಲಾಖೆಯಲ್ಲಿ ರಿಯಾಯಿತಿ ದರದಲ್ಲಿ ಸೋಯಾಬಿನ್, ತೊಗರಿ, ಹೆಸರು ಗೊಬ್ಬರ ಬಿತ್ತನೆ ಬೀಜಗಳು ದೊರೆಯುತ್ತಿದ್ದು, ರೈತರು ಇದರ ಸದುಪಯೋಗ ಪಡೆದುಕೊಳ್ಳಬೇಕು' ಎಂದು ತಿಳಿಸಿದರು.

ಕೃಷಿ ಇಲಾಖೆಯ ರೈತ ಸಂಪರ್ಕ ಕೇಂದ್ರಗಳಲ್ಲಿ ರೈತರು



ಆದ್ಯತೆ ಮೇರೆಗೆ ಬಿತ್ತನೆ ಬೀಜ ಖರೀದಿಸುವುದು ಉತ್ತಮ. ಬಿತ್ತನೆ ಬೀಜ ಖರೀದಿಸಿ ರಸೀದಿಯನ್ನು ಜೋಪಾನವಾಗಿ ಇಟ್ಟುಕೊಳ್ಳಬೇಕು. ರಸೀದಿಯಲ್ಲಿ ಲಾಟ್ ಸಂಖ್ಯೆ ಹಾಗೂ ಮಾರಾಟ ದರದ ವಿವರ ನಮೂದಿಸಿರುವುದನ್ನು ಖಾತರಿಪಡಿಸಿಕೊಳ್ಳಬೇಕು ಕಳಪೆ ಗುಣಮಟ್ಟದ ಬೀಜ ವಿತರಣೆಯಾದರೆ ಅಧಿಕಾರಿಗಳಿಗೆ ಪ್ರಶ್ನಿಸಬಹುದು ಖಾಸಗಿ ವ್ಯಕ್ತಿಗಳು ಕಡಿಮೆ ದರದಲ್ಲಿ ಬೀಜ ವಿತರಣೆ ಮಾಡಲಾಗುವುದು ಎಂದು ಬಂದರೆ ಅಂತವರ ಮಾತಿಗೆ ಮರುಳಾಗಬೇಡಿ ಸರ್ಕಾರದಿಂದ ನೀಡುತ್ತಿರುವ ಬಿತ್ತನೆ ಬೀಜ ಖರೀದಿಸಿ.

ವಿತರಣೆ ಕೇಂದ್ರದಲ್ಲಿ ನಿಗದಿತ ದರಕ್ಕಿಂತ ಹೆಚ್ಚಿನ ದರಕ್ಕೆ ಬಿತ್ತನೆ ಬೀಜಗಳನ್ನು ಮಾರಾಟ ಮಾಡಬಾರದು ಇಂತಹದ್ದು ಕಂಡುಬಂದರೆ ತಕ್ಷಣ ಕ್ರಮ ಕೈಗೊಳ್ಳಲಾಗುವುದು ಕೇಂದ್ರದೊಂದಿಗೆ ಉಪಕೇಂದ್ರಗಳಲ್ಲೂ ಬಿತ್ತನೆ ಬೀಜ ವಿತರಣೆ ಮಾಡಲಾಗುವುದು ರೈತರು ಹೆದರುವ ಅವಶ್ಯಕತೆ ಇಲ್ಲ ಎಂದು ತಿಳಿಸಿದರು.

ರೈತರು ಶಾಂತಿಯುತವಾಗಿ ಬಿತ್ತನೆ ಬೀಜ ಪಡೆಯಬೇಕು ಬೇಡಿಕೆಗೆ ಅನುಗುಣವಾಗಿ ಬೀಜ ವಿತರಣೆ ಮಾಡಲಾಗುವುದು ರೈತರು ಉತ್ತಮವಾಗಿ ಬೆಳೆ ಬೆಳೆದರೆ ಮಾತ್ರ ಸಮಾಜದಲ್ಲಿ ಜನರು ಉತ್ತಮ ಜೀವನ ನಡೆಸಲು ಸಾಧ್ಯ ಅದಕ್ಕೆ ನಮ್ಮ ಭಾರತ ದೇಶದಲ್ಲಿ ರೈತ ದೇವೋಭವ ಸರ್ವೇ ಜನ ಸುಖಿನೋ ಭವಂತು ಎನ್ನುತ್ತಾರೆ.

ತುತ್ತು ಅನ್ನ ತಿನ್ನುವ ಮೊದಲು ರೈತನ ನೆನೆಯಬೇಕು. ನಾವಿವತ್ತು ತುತ್ತು ಅನ್ನ ತಿನ್ನೋ ಮೊದಲು ನಿಸ್ವಾರ್ಥ ಜೀವ ರೈತನನ್ನೇ ನೆನೆಯಲೇಬೇಕು. ಅನ್ನದಾತನ ಕೈ ಕೆಸರಾದ್ರೆ ಮಾತ್ರ ನಮ್ಮ ಬಾಯಿ ಮೊಸರಾಗೋಕೆ ಸಾಧ್ಯ ಎಂದರು.

ಕೃಷಿಯಲ್ಲಿ ಮಾತ್ರವಲ್ಲ ಯಾವುದೇ ಕ್ಷೇತ್ರದಲ್ಲೂ ಏರಿಳಿತ ಇದ್ದೇ ಇರುತ್ತೆ. ಕಷ್ಟ–ಸುಖ, ಸಮಸ್ಯೆ, ಸವಾಲುಗಳು ಇರುತ್ತವೆ. ನಾವು ಆ ಸವಾಲುಗಳನ್ನ ಎಷ್ಟು ಬುದ್ಧಿವಂತಿಕೆಯಿಂದ ಆ ಸವಾಲುಗಳನ್ನ ಸ್ವೀಕಾರ ಮಾಡುತ್ತೇವೆ. ಎಷ್ಟು ಬುದ್ಧಿವಂತಿಕೆಯಿಂದ ಆ ಸವಾಲುಗಳನ್ನ ಬಗೆಹರಿಸುವ ಪ್ರಯತ್ನ ಮಾಡುತ್ತೇವೆ ಅದರ ಮೇಲೆ ಸಕ್ಸಸ್ ಇರುತ್ತೆ.

ರೈತರು ಸಹ ಸವಾಲುಗಳನ್ನ ಪಾಸಿಟಿವ್ ಆಗಿ ಬಗೆಹರಿಸೋ ಪ್ರಯತ್ನ ಮಾಡಿದ್ರೆ ಮಾತ್ರ ಯಶಸ್ಸು ಸಿಗುತ್ತದೆ.

ಒಬ್ಬ ಕೃಷಿಕ ಸಕ್ಸಸ್ ಆದ್ರೆ ಕೇವಲ ಅವರ ಕುಟುಂಬ ಮಾತ್ರ ಸಕ್ಸಸ್ ಆಗಲ್ಲ. ಅದರ ಹಿಂದೆ ಕನಿಷ್ಠ 10 ರಿಂದ 50 ಜನರ ಬದುಕು ಹಸನವಾಗುತ್ತದೆ ಕೆಲವರು ರೈತರು ಆತ್ಮಹತ್ಯೆ ಮಾಡಿಕೊಳ್ಳುತ್ತಿದ್ದಾರೆ ಇಂತಹ ನಿರ್ಧಾರ ನೋವಿನ ಸಂಗತಿ ಯಾರು ದುಡುಕಬಾರದು ಎಂದು ಮನವಿ ಮಾಡಿದರು. ರೈತ ಸಂವೃದ್ಧಿಯಿಂದ ಇದ್ರೆ ಎಲ್ಲರೂ ಸಂವೃದ್ಧಿಯಾಗಿರುತ್ತೆ ಎಂದರು.

ಈ ಸಂದರ್ಭದಲ್ಲಿ ಕೃಷಿ ಇಲಾಖೆ ಎಡಿ ಶರಣಕುಮಾರ, ಗ್ರಾಪಂ ಅಧ್ಯಕ್ಷ ಮಂಜುನಾಥ ಸುಣಗಾರ, ಪಿಕೆಪಿಎಸ್ ಅಧ್ಯಕ್ಷರಾದ ಬಸವರಾಜ ಚಟ್ನಳ್ಳಿ, ಪಿಕೆಪಿಎಸ್ ಉಪಾಧ್ಯಕ್ಷರಾದ ಶಿವಕುಮಾರ,

ಉಡಬನಳ್ಳಿ ಪಿಕೆಪಿಎಸ್ ಅಧ್ಯಕ್ಷ ಅಶೋಕ ರೆಡ್ಡಿ, ಪಿಡಿಒ ಸುಶಾಂತ, ಕೃಷಿ ಅಧಿಕಾರಿ ಭುವನೇಶ್ವರಿ, ಮುಖಂಡರಾದ ವೀರಶೆಟ್ಟಿ ಬಸಲಾಪುರ, ಲಾಲಪ್ಪ ಪೋಲಕಪಳ್ಳಿ, ಶಣ್ಮುಕಪ್ಪ ಕಾರಕಂಪಳ್ಳಿ, ರೈತರು, ಗ್ರಾಪಂ ಸದಸ್ಯರು, ಪಿಕೆಪಿಎಸ್ ಸದಸ್ಯರು ಮತ್ತಿತರರು ಉಪಸ್ಥಿತರಿದ್ದರು.

# ಮಲ್ಲಮ್ಮ ನುಡಿ ವರದಿಗೆ ಎಚ್ಚೆತ್ತುಕೊಂಡ ಪಡಿತರ ಧಾನ್ಯ ವಿತರಕರು

ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:- ಇತ್ತೀಚೆಗೆ ಕೆಲ ದಿನಗಳಿಂದ ಪುರಸಭೆ ವ್ಯಾಪ್ತಿಯ ವಾರ್ಡ್ 23ನೇ ಫಾತ್ಮಪುರ್ ಬಡಾವಣೆಯಲ್ಲಿ ಪಡಿತರ ಆಹಾರ ಧಾನ್ಯ ವಿತರಣೆ ಮಾಡದೇ ಇರುವ ಹಿನ್ನೆಲೆಯಲ್ಲಿ ಮಲ್ಲಮ್ಮ ನುಡಿ ಪತ್ರಿಕೆಯಲ್ಲಿ ಆಹಾರ ಧಾನ್ಯ ವಿತರಣೆ ಕುರಿತು ಪ್ರಕಟವಾದ ವರದಿಗೆ ಸ್ಪಂದಿಸಿ ಆಹಾರ ನಿರೀಕ್ಷಕ ಶೇಖರ್ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಬಳಿಕ ಪಡಿತರ ಆಹಾರ ಧಾನ್ಯಗಳು ಏಕೆ ವಿತರಣೆ ಮಾಡುತ್ತಿಲ್ಲ ಎಂದು



**ಫಲ ಶೃತಿ**

ನ್ಯಾಯ ಬೆಲೆ ಅಂಗಡಿಯ ಪಡಿತರ ಆಹಾರ ಧಾನ್ಯ ವಿತರಕರಿಗೆ ಪ್ರಶ್ನೆಸಿದ ಅವರು ಸರ್ಕಾರದ ಸುತ್ತೋಲೆಯಂತೆ ಸರಿಯಾದ ಸಮಯಕ್ಕೆ ಪಡಿತರ ಆಹಾರ ಧಾನ್ಯ ವಿತರಿಸಬೇಕು ಇಲ್ಲದಿದ್ದರೆ ಆಹಾರ ಧಾನ್ಯ ವಿತರಣೆ ಪರವಾನಿಗೆ ರದ್ದು ಪಡಿಸಬೇಕಾಗುತ್ತದೆ ಎಂದು ಎಚ್ಚರಿಸಿ ಪಡಿತರ ಆಹಾರ ಧಾನ್ಯ ವಿತರಿಸುವಂತೆ ಸೂಚನೆ ನೀಡಿದರು.

# ಪೌರ ನೌಕರರ ಸಂಘದಿಂದ ಅನಿರ್ದಿಷ್ಟಕಾಲ ಮುಷ್ಕರ

# ವಿವಿಧ ಬೇಡಿಕೆಗಳ ಈಡೇರಿಕೆಗೆ ಒತ್ತಾಯ

ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ್ : ಪೌರ ನೌಕರರ ವಿವಿಧ ಬೇಡಿಕೆಗಳನ್ನು ಈಡೇರಿಕೆಗೆ ಒತ್ತಾಯಿಸಿ, ಪಟ್ಟಣದ ಪುರಸಭೆ ಕಚೇರಿ ಆವರಣದಲ್ಲಿ ಕರ್ನಾಟಕ ರಾಜ್ಯ ಪೌರ ನೌಕರರ ಸಂಘದವತಿಯಿಂದ ಮಂಗಳವಾರ ಅನಿರ್ಧಿಷ್ಟ ಮುಷ್ಕರ ನಡೆಸಿ ವಿಧಾನ ಪರಿಷತ್ ಸದಸ್ಯ ಡಾ. ಚಂದ್ರಶೇಖರ ಪಾಟೀಲಗೆ ಮನವಿ ಪತ್ರ ಸಲ್ಲಿಸಿದರು.

ಕರ್ನಾಟಕ ರಾಜ್ಯ ಪೌರ ನೌಕರರ ಸಂಘದ ಅಧ್ಯಕ್ಷ ಸಲೀಂಮಿಯ ಮಾತನಾಡಿ, ರಾಜ್ಯ ವ್ಯಾಪ್ತಿಯ ಮಹಾನಗರ ಪಾಲಿಕೆ, ನಗರ ಸಭೆ, ಪುರಸಭೆ ಸೇರಿ ಸ್ಥಳೀಯ ಸಂಸ್ಥೆಗಳಲ್ಲಿ ನೀರು ಸರಬರಾಜ ಸಹಾಯಕರು, ವಾಹನ ಚಾಲಕರು, ಬೀದಿ ದೀಪ ಸಹಾಯಕರು ಸೇರಿ ವಿವಿಧ ವೃಂದದಲ್ಲಿ ಹೊರಗುತ್ತಿಗೆ ಆಧಾರದ ಮೇಲೆ ಕೆಲಸ ಮಾಡುತ್ತಿರುವ ನೌಕರರನ್ನು ನೇರ ಪಾವತಿಗೆ ಒಳಪಡಿಸಬೇಕು ಎಂದು ಮನವಿ ಮಾಡಿದರು.

ದಿನಗೂಲಿ ಕ್ಷೇಮಾಭಿವೃದ್ಧಿ ಸಮಾನ ಕೆಲಸಕ್ಕೆ ಸಮಾನ ವೇತನ ನೀಡಬೇಕು. ಟೈಮ್



ವಿವಿಧ ಬೇಡಿಕೆ ಈಡೇರಿಕೆಗೆ ಒತ್ತಾಯಿಸಿ, ಹುಮನಾಬಾದ್ ಪಟ್ಟಣದ ಪುರಸಭೆ ಆವರಣದಲ್ಲಿ ಪೌರ ನೌಕರರ ಸಂಘದ ವತಿಯಿಂದ ಅನಿರ್ಧಿಷ್ಟಕಾಲ ಮುಷ್ಕರ ನಡೆಸಿ ಎಂಎಲ್ಸಿ ಡಾ. ಚಂದ್ರಶೇಖರ ಪಾಟೀಲಗೆ ಮನವಿ ಪತ್ರ ಸಲ್ಲಿಸಿದರು.

ಸ್ಕೇಲ್ ನೌಕರರನ್ನು ಖಾಲಿ ಇರುವ ಹುದ್ದೆಗಳಿಗೆ ವಿಲಿನ ಮಾಡಬೇಕು. 7ನೇ ವೇತನ ಹಾಗೂ 2023-24ನೇ ಸಾಲಿನಲ್ಲಿ ನೇಮಕಗೊಂಡ ಪೌರಕಾರ್ಮಿಕರ ವೇತನವನ್ನು .ಎಫ್.ಸಿ. ಅನುದಾನದಡಿ ವೇತನ ಪಾವತಿ ಸೇರಿ ಪೌರ ನೌಕರರ ಎಲ್ಲ ಬೇಡಿಕೆಗಳನ್ನು ಈಡೇರಿಸಬೇಕು. ಬೇಡಿಕೆ ಈಡೇರಿಸದೇ ಕಾಲ ಹರಣ ಮಾಡಿದರೆ ಕಾನೂನು ಚೌಕಟ್ಟಿನಲ್ಲಿ ಮುಷ್ಕರ ಹೀಗೆ ಮುಂದು ವರೆಯುತ್ತದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಪುರಸಭೆ ಉಪಾಧ್ಯಕ್ಷ ಮುಕ್ರಂಜಾ, ಪುರಸಭೆ ಸದಸ್ಯ ಸೈಯದ್ ಬಾಷೀದ್, ಪೌರ ನೌಕರರ ಸಂಘದ ಉಪಾಧ್ಯಕ್ಷ ರೇವಣಸಿದ್ದಪ್ಪ ಮಾಲಿ, ಪೌರ ನೌಕರರ ಸಂಘದ ಕಾರ್ಯದರ್ಶಿ ರೇಣುಕಾ ಮುಂಗಡೆ, ಪೌರ ನೌಕರರ ಸಂಘದ ಉಪಾಧ್ಯಕ್ಷ ಶರಣಪ್ಪ, ಸಂಘದ ಪ್ರಧಾನ ಕಾರ್ಯದರ್ಶಿ ಶಾಮದಾಸ್, ಜಾವೀದ್ ಹುಸೇನ್, ಬಬೀತಾ, ದಿಲೀಪ, ಚಂದ್ರಕಾಂತ, ವಿಶ್ವಪ್ರತಾಪ, ಬಸವರಾಜ ಶಿವಪೂಜಿ, ಭಾಗ್ಯವಂತಿ ಸೇರಿ ಕರ್ನಾಟಕ ರಾಜ್ಯ ಪೌರ ನೌಕರರ ಸಂಘದ ಪದಾಧಿಕಾರಿಗಳು ಉಪಸ್ಥಿತರಿದ್ದರು.



"ಕರ್ನಾಟಕ ರಾಜ್ಯ ಪೌರ ನೌಕರರ ಸಂಘದ ಪದಾಧಿಕಾರಿಗಳು ಒಗ್ಗೂಡಿ ಅನಿರ್ಧಿಷ್ಟ ಮುಷ್ಕರ ಕೈಗೊಂಡು ತಮ್ಮ ಬೇಡಿಕೆಗಳನ್ನು ಈಡೇರಿಕೆಗೆ ಮಾಡಿರುವ ಮನವಿಯನ್ನು ಮುಖ್ಯಮಂತ್ರಿ ಹಾಗೂ ಪೌರಾಡಳಿತ ಸಚಿವರ ಗಮನಕ್ಕೆ ತರುವ ಮೂಲಕ ತಮ್ಮ ಎಲ್ಲ ಬೇಡಿಕೆಗಳನ್ನು ಹಂತ ಹಂತವಾಗಿ ಈಡೇರಿಸುವ ಪ್ರಾಮಾಣಿಕ ಪ್ರಯತ್ನ ಮಾಡುತ್ತೇನೆ.

**-ಡಾ. ಚಂದ್ರಶೇಖರ ಪಾಟೀಲ್**
**ವಿಧಾನ ಪರಿಷತ್ ಸದಸ್ಯ**

# ಸಾಮಾಜಿಕ ಬದಲಾವಣೆಗೆ ಮಾಧ್ಯಮಗಳು ದಾರಿ: ಭೀಮಾಶಂಕರ ಬಿರಾದಾರ




(ಡಿ. ಕೆ. ಪ್ರಹ್ಲಾದ)

ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ: – ಮೆ 27 ಸಾಮಾಜಿಕ ಹಾಗೂ ಸಾಂಸ್ಕೃತಿಕ ಬದಲಾವಣೆಗಳಲ್ಲಿ ಮಾಧ್ಯಮಗಳು ಮಹತ್ವದ ಪಾತ್ರ ವಹಿಸುತ್ತದೆ. ಶ್ರೀ ಸಾಮಾನ್ಯನ ದನಿಯಾಗಿ ಎಂದಿಗೂ ಮಾಧ್ಯಮಗಳು ಶ್ರಮಿಸುತ್ತಿವೆ ಎಂದು ಶ್ರೀ ಬಸವೇಶ್ವರ ಪದವಿ ಕಾಲೇಜು ಪ್ರಾಚಾರ್ಯ ಡಾ. ಭೀಮಾಶಂಕರ ಬಿರಾದಾರ ಹೇಳಿದರು.

ಇಲ್ಲಿನ ಶ್ರೀ ಬಸವೇಶ್ವರ ಪದವಿ ಕಾಲೇಜಿನಲ್ಲಿ 'ಮಾಧ್ಯಮಗಳು ಮತ್ತು ಸಮಕಾಲೀನ ಸ್ಪಂದನೆ ಕುರಿತು ಹಮ್ಮಿಕೊಂಡಿದ್ದ ಉಪನ್ಯಾಸ ಹಾಗೂ ಸಂವಾದ ಸಮಾರಂಭದ ಅಧ್ಯಕ್ಷತೆ ವಹಿಸಿ ಮಾತನಾಡಿ ಸಮಕಾಲೀನ ಸವಾಲು ಹಾಗೂ ಬಿಕ್ಕಟ್ಟುಗಳನ್ನು ಸ್ಪಂದಿಸುವ ಮೂಲಕ ಮಾಧ್ಯಮಗಳು ಹೊಣೆಗಾರಿಕೆ ನಿಭಾಯಿಸಬೇಕು ಎಂದರು.

ಮಾಧ್ಯಮಗಳು ತಮ್ಮ ಸಾಂಸ್ಕೃತಿಕ ಹೊಣೆಗಾರಿಕೆಯಿಂದ ಪ್ರಜಾಪ್ರಭುತ್ವ, ಮಾನವೀಯತೆಯ ಜೀವಂತಿಕೆಯನ್ನು ಕಾಪಾಡಿವೆ. ಲೋಕ ಬದಲಾವಣೆ ಮಾಧ್ಯಮಗಳ ದೊಡ್ಡ ಜವಾಬ್ದಾರಿಯಾಗಿದೆ ಎಂದರು.

ಸಮಕಾಲೀನ ಸ್ಪಂದನೆಯ ಗುಣವಿರುವ ಮಾಧ್ಯಮಗಳು ಎಂದಿಗೂ ಜನರ ಹೃದಯದಲ್ಲಿ ನೆಲೆಸುತ್ತವೆ. ಸಾಮಾಜಿಕ ಸಂಕೀರ್ಣತೆ, ಸಮಸ್ಯೆಗಳು ತೆ-ೂಡೆದು ಹಾಕುವ ಪ್ರಾಮಾಣಿಕ ಕೆಲಸ ಮಾಧ್ಯಮಗಳು ನಿರಂತರ ಮಾಡುತ್ತಿವೆ. ಮಾಧ್ಯಮಗಳು ಇಲ್ಲದ ಲೋಕ ಊಹಿಸಲು ಸಾಧ್ಯವಿಲ್ಲ. ಪತ್ರಿಕೆಗಳು ಇಲ್ಲದಿದ್ದರೆ ಜಡ ಜಗತ್ತು ರೂಪುಗೊಳ್ಳುವ ಸಾಧ್ಯತೆ ಇತ್ತು. ಪ್ರಭುತ್ವ , ರಾಜಕಾರಣ, ಸಮಾಜ, ಕೃಷಿ, ಪರಿಸರ , ವಿಜ್ಞಾನ, ತಂತ್ರಜ್ಞಾನ ಹೀಗೆ ಅಗಾಧ ಸಂಗತಿಗಳು ಜನರಿಗೆ ತಲುಪಿಸುವ ಮೂಲಕ ಮಾಧ್ಯಮಗಳು ಸಮಾಜವನ್ನು ಬೆಳೆಸುತ್ತಿವೆ ಎಂದರು.

ಬೀದರಿನ ಪತ್ರಕರ್ತ ಬಾಲಾಜಿ ಕುಂಬಾರ ಮಾತನಾಡಿ, ಸಾಹಿತ್ಯ ಕೃತಿಗಳ ಅನುಸಂಧಾನ, ಪತ್ರಿಕೆಗಳ ಓದು, ಮಾಧ್ಯಮಗಳ ಅಧ್ಯಯನದಿಂದ ಪ್ರತಿಯೊಬ್ಬರಲ್ಲಿ ಸಾಮಾಜಿಕ ಹೊಣೆಗಾರಿಕೆ ಬರುತ್ತದೆ. ಹೊಸ ಅರಿವಿಗೆ ಮಾಧ್ಯಮಗಳು ದಾರಿಯಾಗಿವೆ ಎಂದು ಹೇಳಿದರು.

ನಮ್ಮ ಸುತ್ತಲಿನ ಆಗು ಹೋಗುಗಳ ಬಗೆಗೆ ಪ್ರಜ್ಞೆ ಮೂಡಿಸುವ ಕೆಲಸ ಮಾಧ್ಯಮಗಳಿಂದ ಸಾಧ್ಯವಾಗುತ್ತದೆ.

ಹಳ್ಳಿ, ನಗರ ಸೇರಿದಂತೆ ಎಲ್ಲಡೆ ಸಮಸ್ಯೆ ಇದ್ದೇ ಇರುತ್ತವೆ. ಆ ಸಮಸ್ಯೆಗಳನ್ನು ಮಾಧ್ಯಮಗಳು ಪ್ರಭುತ್ವಕ್ಕೆ , ಆಳುವವರಿಗೆ, ಅಧಿಕಾರದಲ್ಲಿರುವವರಿಗೆ ತಲುಪಿಸುವ ಕೆಲಸ ಮಾಡುತ್ತವೆ. ಆಡಳಿತಾತ್ಮಕ ಸುಧಾರಣೆಗೆ, ಜನತೆಯ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳಲು ಮಾಧ್ಯಮಗಳ ಶ್ರಮಿಸುತ್ತವೆ ಎಂದರು.

ಸತ್ಯಾಸತ್ಯತೆ ಕುರಿತು ಹಿಂದೆಂದಿಗಿಂತಲೂ ಇಂದು ಹೆಚ್ಚು ಒರೆಗೆ ಹಚ್ಚಬೇಕಿದೆ. ಸಾಮಾಜಿಕ ಜಾಲತಾಣಗಳಲ್ಲಿ ಬರುವ ಎಲ್ಲ ಮಾಹಿತಿಗಳ ನಿಖರತೆ, ಅಧಿಕೃತತೆ ಗಮನಿಸುವ ಅಗತ್ಯವಿದೆ ಎಂದರು. ಶ್ರೀ ಬಸವೇಶ್ವರ ಸ್ನಾತಕೋತ್ತರ ಕಾಲೇಜು ಪ್ರಾಚಾರ್ಯೆ ಡಾ. ಶಾಂತಲಾ ಪಾಟೀಲ, ಸಂದೀಪ ಮುಚಳಂಬ, ಶ್ರೀನಿವಾಸ ಉಮಾಪುರೆ, ಪ್ರಭಾಕರ ನವಗಿರೆ, ಪವನ ಪಾಟೀಲ , ವೀರೇಶ ಸ್ವಾಮಿ, ಚೆನ್ನಬಸಪ್ಪ ಗೌರ, ಪ್ರವೀಣ ಬಿರಾದಾರ, ನಾಗರಾಜ ನಾಸೆ, ಕೃಷ್ಣ ಗೌಳಿ ಸಸ್ತಾಪುರ, ನಾಗವೇಣಿ ವಟಗೆ, ಗುರುದೇವಿ ಕಿಚಡೆ, ಶೃತಿ ಮಠಪತಿ, ಡಾ. ಬಸವರಾಜ ಖಂಡಾಳೆ, ಸುಜಾವುದ್ದಿನ್, ಎಂಡಿ ಜಬಿ , ಸಂಗೀತಾ ಮಹಾಗಾವೆ, ಜಗದೇವಿ ಜವಳಗೆ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

ಈ ಸಂದರ್ಭದಲ್ಲಿ ಈ ದಿನ ಡಾಟ್ ಕಾಮ್ ಪ್ರಕಟಿಸಿದ 'ಅರಿವೇ ಅಂಬೇಡ್ಕರ್ ' ಕೃತಿಯನ್ನು ಶ್ರೀ ಬಸವೇಶ್ವರ ಪದವಿ ಕಾಲೇಜಿಗೆ ಕಾಣಿಕೆ ರೂಪದಲ್ಲಿ ನೀಡಲಾಯಿತು. ಸಚಿನ ಬಿಡವೆ ಸ್ವಾಗತಿಸಿದರು. ಗಂಗಾಧರ ಸಾಲಿಮಠ ನಿರೂಪಿಸಿದರು. ರೋಶನ್ ಬೀ ಯದಲಾಪುರ ವಂದಿಸಿದರು.

# ರಾಯಕೋಡ ಗ್ರಾಮದಲ್ಲಿ ಹೇಮರೆಡ್ಡಿ ಮಲ್ಲಮ್ಮ ತಾಯಿಯ ಜಯಂತಿ



ಮಲ್ಲಮ್ಮ ನುಡಿ ವಾರ್ತೆ

ಸೇಡಂ, ಮೇ. 27. ವಿಧಾನಸಭಾ ಕ್ಷೇತ್ರದ ರಾಯಕೋಡ ಗ್ರಾಮದಲ್ಲಿ ಮಹಾ ಸಾಧ್ವಿ ಶಿವಶರಣೆ ಹೇಮರೆಡ್ಡಿ ಮಲ್ಲಮ್ಮ ತಾಯಿಯ ಜಯಂತೋತ್ಸವ ಕಾರ್ಯಕ್ರಮವನ್ನು ರಾಯಕೋಡ ಗ್ರಾಮದ ಶ್ರೀ ಶಿವಲಿಂಗೇಶ್ವರ್ ಕಟ್ಟಿ ಮಠದ ಶ್ರೀ ಚಿಕ್ಕಶಿವಲಿಂಗೇಶ್ವರ ಸ್ವಾಮಿಜಿ ಯವರು ಹೇಮರೆಡ್ಡಿ ಮಲ್ಲಮ್ಮ ತಾಯಿಯ ಭಾವಚಿತ್ರಕ್ಕೆ ಪೂಜೆ ಮಾಡುವ ಮೂಲಕ ಜಯಂತಿ ಕಾರ್ಯಕ್ರಮವನ್ನು ಆಚರಣೆ ಮಾಡಲಾಯಿತು.

ಈ ಕಾರ್ಯಕ್ರಮದಲ್ಲಿ ಪ್ರಭುಲಿಂಗರೆಡ್ಡಿ ಜಗನಾಥರೆಡ್ಡಿ. ರಾಮರೆಡ್ಡಿ, ಬ್ರಹ್ಮಾನಂದರೆಡ್ಡಿ ಗೋಟೂರ, ಪ್ರಭುಲಿಂಗರೆಡ್ಡಿ , ಬಕ್ಕಾರೆಡ್ಡಿ, ಸಂಗಾರೆಡ್ಡಿ, ಜೈಪಾಲರೆಡ್ಡಿ,

ಚಂದ್ರಶೇಖರರೆಡ್ಡಿ, ಭೀಮರೆಡ್ಡಿ, ವೀರರೆಡ್ಡಿ, ಪರಶುರಾಮರೆಡ್ಡಿ, ಬಸವರಾಜ ಬಿರಾದಾರ, ನಾರಾಯಣರೆಡ್ಡಿ, ಗುಂಡಾರೆಡ್ಡಿ, ಹಣಮಂತರೆಡ್ಡಿ, ಭಗವಂತರೆಡ್ಡಿ, ಶಿವಶೇರಣರೆಡ್ಡಿ, ಸಿದ್ದರಾಮರೆಡ್ಡಿ ಕೃಷ್ಣಾರೆಡ್ಡಿ, ಶ್ರೀಶೈಲರೆಡ್ಡಿ, ಪ್ರವೀಣರೆಡ್ಡಿ, ಜಗನಾಥರೆಡ್ಡಿ. ಅನೇಕ ಯುವಕರು ಹಿರಿಯರು ಈ ಕಾರ್ಯಕ್ರಮದಲ್ಲಿ ಭಾಗವಹಿಸಿದರು.

# ಮಂದಿರ ಆರಾಧನೆಯ ಸ್ಫೂರ್ತಿ ಕೇಂದ್ರ – ಹಾರಕೂಡ ಶ್ರೀ.

ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ :- ಮೆ 27 ಈಶ್ವರಾರಾಧನೆಗೆ, ಆಧ್ಯಾತ್ಮ ಸಾಧನೆಗೆ ಮಂದಿರಗಳು ಸ್ಫೂರ್ತಿಯ ಕೇಂದ್ರವಾಗಿ ವಿಶಿಷ್ಟ ಪಾತ್ರ ನಿಭಾಯಿಸುತ್ತವೆ ಎಂದು ಹಾರಕೂಡದ ಡಾ. ಚನ್ನವೀರ ಶಿವಾಚಾರ್ಯರು ನುಡಿದರು.

ತಾಲೂಕಿನ ಹಾರಕೂಡ ಗ್ರಾಮದ ಹೊರವಲಯದಲ್ಲಿ ಶ್ರೀ ರಾಮಲಿಂಗೇಶ್ವರ ದೇವಸ್ಥಾನ ಕಟ್ಟಡ ಕಾಮಗಾರಿಯ ಭೂಮಿ ಪೂಜೆ ಸಮಾರಂಭದ ಸಾನಿಧ್ಯ ವಹಿಸಿ ಮಾತನಾಡಿದ ಶ್ರೀಗಳು, ಭಾವವಿಲ್ಲದ ನಾಮಸ್ಮರಣೆ ವ್ಯರ್ಥ, ಭಗವಂತನ ಅನುಗ್ರಹ ಪರಿಶುದ್ಧ ಭಾವನೆಯನ್ನು ಹುಡುಕಿಕೊಂಡು ಬರುತ್ತದೆಯೇ ವಿನ: ಕೇವಲ ಆಡಂಬರದ ನಾಮಸ್ಮರಣೆಗೆ ಅಲ್ಲ.

ನಾಮ ಸ್ಮರಣೆ ಭಾವಸ್ಮರಣೆ ಒಂದಾದಾಗ ದೈವ ಕೃಪೆ ಸಾಧ್ಯವಾಗುತ್ತದೆ.

ಭಾವನೆ ಶುದ್ಧವಿದ್ದರೆ ಭಾಗ್ಯದ ರಾಶಿ ಮನೆಯಂಗಳದಲ್ಲಿ



ಎನ್ನುವ ಮಾತಿನಂತೆ, ದೇವರು ಯಾವತ್ತೂ ಭಕ್ತಿ, ಶ್ರದ್ಧೆ, ಭಾವಗಳ ಪ್ರಿಯನಾಗಿರುತ್ತಾನೆ.

ಹಾರಕೂಡ ಗ್ರಾಮದಲ್ಲಿ ನೂತನವಾಗಿ ನಿರ್ಮಿಸಲು ಉದ್ದೇಶಿಸಿರುವ ರಾಮಲಿಂಗೇಶ್ವರ ಮಂದಿರ ಬಲು ಬೇಗನೆ ಪೂರ್ಣಗೊಂಡು ಜನತೆಯ ಶ್ರದ್ಧಾ ಕೇಂದ್ರವಾಗಿ ರೂಪುಗೊಳ್ಳಲಿ ಮತ್ತು ಸತ್ಕಾರ್ಯದಲ್ಲಿ ಪ್ರತ್ಯಕ್ಷ ಪರೋಕ್ಷವಾಗಿ ಶ್ರಮಿಸಲಿರುವ ಸರ್ವರಿಗೂ ಹಾರಕೂಡಧೀಶ ಹೆಚ್ಚಿನ ಶಕ್ತಿ ಸಾಮರ್ಥ್ಯ ನೀಡಲಿ ಎಂದು ಶುಭ ಹಾರೈಸಿದರು.

ಈ ಸಂದರ್ಭದಲ್ಲಿ ಆನಂದರಾವ ಝುಳಕೆ, ಅಯ್ಯಪ್ಪ ಸಜ್ಜನ, ಸೂರ್ಯಕಾಂತ ಬೆಳಮಗೆ, ಶರಣಬಸಪ್ಪ ಹತ್ತೆ, ಬಾಲಾಜಿ ಬಿರಾದಾರ, ಅಪ್ಪಾರಾವ ಬಿರಾದಾರ, ಸುಭಾಷ ದೇಗಾಂವ, ಮಾರುತಿ ಪಾಟೀಲ, ವಿಜಯಕುಮಾರ ಸಾಮದೆ ಸೇರಿದಂತೆ ಅನೇಕರು ಉಪಸ್ಥಿತರಿದ್ದರು. ಮೇಘರಾಜ ನಾಗರಳೆ ಸ್ವಾಗತಿಸಿದರು.

ಮಂಜುನಾಥ ಪೀರಜೆ ನಿರೂಪಿಸಿದರು.

ಮಲ್ಲಪ್ಪ ಖೇಲ್ಡೆ ವಂದಿಸಿದರು.

# ಪ್ರತಿಭಾ ಪುರಸ್ಕಾರ; ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ :- ಮೆ 27 ಹುಲಸೂರ ತಾಲೂಕಿನ ಸರಕಾರಿ ನೌಕರರ ಮಕ್ಕಳಿಗೆ ಪ್ರತಿಭಾ ಪುರಸ್ಕಾರಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ ಎಂದು ತಾಲೂಕು ಸರಕಾರಿ ನೌಕರರ ಸಂಘದ ಅಧ್ಯಕ್ಷ ನಾಗರಾಜ ಹಾವಣ್ಣಾ ತಿಳಿಸಿದ್ದಾರೆ. ರಾಜ್ಯ ಸರಕಾರಿ ನೌಕರರ ಸಂಘದ ವತಿಯಿಂದ 2024-25ನೆಯ ಸಾಲಿನಲ್ಲಿ ಎಸ್ಸೆಸ್ಸೆಲ್ಸಿ ಮತ್ತು ದ್ವಿತೀಯ ಪಿಯುಸಿಯಲ್ಲಿ ಶೇ.90ಕ್ಕಿಂತ ಅಧಿಕ ಅಂಕಗಳಿಸಿದ ಸರಕಾರಿ ನೌಕರರ ಮಕ್ಕಳಿಗೆ ಪ್ರತಿಭಾ ಪುರಸ್ಕಾರ ನೀಡಲಾಗುತ್ತಿದ್ದು, ಅರ್ಜಿ ಸಲ್ಲಿಸಲು ಇದೇ ಮೇ.31 ಕೊನೆಯ



ದಿನವಾಗಿದ್ದು ಅರ್ಹ ಮಕ್ಕಳು ಅಗತ್ಯ ದಾಖಲಾತಿಯೊಂದಿಗೆ ನಿಗದಿತ ದಿನದೊಳಗೆ ಅರ್ಜಿ ಸಲ್ಲಿಸಬಹುದಾಗಿದೆ. https://ksgeanews.blogspot.com ಲಿಂಕ್ ಮೂಲಕ ಅರ್ಜಿ ಸಲ್ಲಿಸಲು ಪ್ರಕಟಣೆಯಲ್ಲಿ ಕೋರಿದ್ದಾರೆ.

# ಬಿತ್ತನೆ ಬೀಜ, ಗೊಬ್ಬರ ಪೂರೈಕೆಗೆ ಕ್ರಮ ವಹಿಸಿ:ಪಾಟೀಲ್

ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:- ಮುಂಗಾರು ಹಂಗಾಮಿನ ಬಿತ್ತನೆ ಪ್ರಕ್ರಿಯೆಗೆ ಸಂಬಂಧಿಸಿದಂತೆ ಅನ್ನದಾತ ರೈತರಿಗೆ ಸೂಕ್ತ ಸಮಯಕ್ಕೆ ಬಿತ್ತನೆ ಬೀಜ ಹಾಗೂ ಗೊಬ್ಬರ ಪೂರೈಕೆ ಮಾಡಬೇಕು ಎಂದು ಕೃಷಿಕ ಸಮಾಜದ ಅಧ್ಯಕ್ಷ ಬಸವರಾಜ ಪಾಟೀಲ ನುಡಿದರು. ಪಟ್ಟಣದ ರೈತ ಸಂಪರ್ಕ ಕೇಂದ್ರದಲ್ಲಿ 2025-26ನೇ ಸಾಲಿನ ಮುಂಗಾರು ಹಂಗಾಮಿನ ಬೀಜ ವಿತರಣೆಗೆ ಚಾಲನೆ ನೀಡಿ ಮಾತನಾಡಿದರು. ರೈತ ಸಂಪರ್ಕ ಕೇಂದ್ರದಲ್ಲಿ ಬಿತ್ತನೆ ಬೀಜ ಮತ್ತು ಗೊಬ್ಬರ ಕೊರತೆ-ಯಾಗದಂತೆ ಕೃಷಿ ಇಲಾಖೆ ಅಧಿಕಾರಿಗಳು ನೋಡಿಕೊಳ್ಳಬೇಕು. ಜೊತೆಗೆ



ರೈತರೂ ಕೂಡ ಕೃಷಿ ತಜ್ಞರ ಸಲಹೆ ಪಡೆದು ಭೂಮಿಯ ತೇವಾಂಶವನ್ನು ಖಚಿತಪಡಿಸಿಕೊಂಡು ಬಿತ್ತನೆ ಪ್ರಕ್ರಿಯೆಯಲ್ಲಿ ತೊಡಗಬೇಕು ಎಂದು ಸಲಹೆ ನೀಡಿದರು. ರೈತ ಸಂಪರ್ಕ ಕೇಂದ್ರದ ಕೃಷಿ ಅಧಿಕಾರಿ ಕೃಷ್ಣರೆಡ್ಡಿ ಮಾತನಾಡಿ, ಚಿಟಗುಪ್ಪ ರೈತ ಸಂಪರ್ಕ ಕೇಂದ್ರದ ವ್ಯಾಪ್ತಿಯಲ್ಲಿ 1300 ಹೆಕ್ಟರ್ ಮುಂಗಾರು ಬೀಜ ಬಿತ್ತನೆಯ ಗುರಿ ಇದೆ. ರೈತ ಸಂಪರ್ಕ ಕೇಂದ್ರದಲ್ಲಿ ತೊಗರಿ, ಸೋಯಾಬಿನ್, ಹೆಸರು, ಉದ್ದು, ಇತ್ಯಾದಿ ಬೀಜಗಳು ರಿಯಾಯಿತಿ ದರದಲ್ಲಿ ಮಾರಾಟಕ್ಕೆ ಲಭ್ಯವಿದೆ ರೈತರು ಇದರ ಸದುಪಯೋಗ ಪಡೆದುಕೊಳ್ಳಲು ಮನವಿ ಮಾಡಿದರು. ಉಪಾಧ್ಯಕ್ಷ ಸೂರ್ಯಕಾಂತ ಮಠಪತಿ, ಸದಸ್ಯರಾದ ನಾಗೇಂದ್ರ ಪಾಟೀಲ, ಮಹಾದೇವ ಪಾಸ, ವಿಜಯಕುಮಾರ, ಮೇಘವೇಂದ್ರ, ಎಂಡಿ ಇಲಾಯಿ, ಬಾಬು, ಶೇಷಪ್ಪಾ, ಬಸವರಾಜ ಸೇರಿದಂತೆ ರೈತರು ಉಪಸ್ಥಿತರಿದ್ದರು.

# ಪೌರನೌಕರರ ಸಮಸ್ಯೆ ಕುರಿತು ಪರಿಷತ್ತಿನಲ್ಲಿ ಚರ್ಚೆ–ಪೂಜಾರ




ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ, ಮೇ.27-ರಾಜ್ಯ ಸರಕಾರ ನಗರ, ಸ್ಥಳೀಯ ಸಂಸ್ಥೆಗಳ ಪೌರನೌಕರರ ಬೇಡಿಕೆಗಳಿಗೆ ಸ್ಪಂದಿಸಿ ಕಾರ್ಯಗತಗೊಳಿಸಬೇಕು ಎಂದು ವಿಧಾನ ಪರಿಷತ್ ಸದಸ್ಯ ಪಿ.ಎಚ್.ಪೂಜಾರ ಹೇಳಿದ್ದಾರೆ.

ಸರ್ಕಾರಿ ನೌಕರರಂತೆ ತಮಗೂ ವೇತನ ನೀಡಬೇಕು. ಜಿಪಿಎಫ್, ಕೆಜಿಐಡಿ ಸೌಲಭ್ಯಗಳನ್ನು ನೀಡಬೇಕು. ಹಲವಾರು ವರ್ಷಗಳಿಂದ ಹೊರಗುತ್ತಿಗೆ ನೌಕರರಾಗಿ ಕಾರ್ಯನಿರ್ವಹಿಸುತ್ತಿರುವವರಿಗೂ ಸರ್ಕಾರಿ ಸೌಲಭ್ಯಗಳನ್ನು ನೀಡಬೇಕೆಂದು ಆಗ್ರಹಿಸಿ ನಗರಸಭೆಯ ಪೌರನೌಕರರು ಪ್ರಾರಂಭಿಸಿರುವ ಮುಷ್ಕರದ ಸ್ಥಳಕ್ಕೆ ಭೇಟಿ ನೀಡಿದ ಪಿ.ಎಚ್.ಪೂಜಾರ, ಬೇಡಿಕೆ ಆಲಿಸಿ ತಮ್ಮ ಬೇಡಿಕೆಗಳ ಕುರಿತಾಗಿ ವಿಧಾನ ಪರಿಷತ್ತಿನಲ್ಲಿ ಚರ್ಚೆ ನಡೆಸಿ ಸರಕಾರದ ಗಮನ ಸೆಳೆಯುವುದಾಗಿ ತಿಳಿಸಿದರು.

ಪೌರಕಾರ್ಮಿಕರ ಸಮಾನ ಕೆಲಸಕ್ಕೆ ಸಮಾನ ವೇತನ ದೊರಕಬೇಕು. ಈ ಹಿನ್ನೆಲೆಯಲ್ಲಿ ಬರುವ ವಿಧಾನ ಪರಿಷತ್ ಸಭೆಯಲ್ಲಿ ಪೌರಕಾರ್ಮಿಕರ ಸಮಸ್ಯೆ ಕುರಿತು ಧ್ವನಿ ಎತ್ತಿ, ಪರಿಹಾರಕ್ಕೆ ಆಗ್ರಹಿಸುವೆ ಎಂದು ಅವರು ಭರವಸೆ ನೀಡಿದರು.

ನಗರಸಭೆ ಮಾಜಿ ಸದಸ್ಯ ಹನಮಂತ ರಾಕುಂಪಿ, ರಾಜು ಗೌಳಿ, ರಾಜು ಶ್ರೀರಾಮ, ಅಶೋಕ ನಾರಾಯಣಿ, ಆರ್.ಆರ್. ಕುಲಕರ್ಣಿ, ಸಿ.ಎಸ್ .ಬೀಳಗಿ, ಬಿ.ಪಿ.ನಿರುಗ್ಗಿ, ನಿಜಪ್ಪ ಕಟ್ಟಿಮನಿ, ಪಾದನಕಟ್ಟಿ ಸೇರಿದಂತೆ ಕರ್ನಾಟಕ ರಾಜ್ಯ ಪೌರಸೇವಾ ನೌಕರರ ಸೇವಾ ಸಂಘದ ಪದಾಧಿಕಾರಿಗಳು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.

# ವಚನ....

ಎಲ್ಲ ಉತ್ಪತ್ತಿಗೂ ನೀನೆ ಕಾರಣ.
ಎಲ್ಲ ಸ್ಥಿತ್ ಸಂಚಾಲನೆಗೂ ನೀನೆ ಆಧಾರ.
ಎಲ್ಲ ಲಯಕ್ಕೂ ನೀನೆ ಕಾರಣ.
ಅಸ್ತಿತ್ವಕ್ಕೆ ರೂಪ ಕೊಟ್ಟು ರೂಪದಲ್ಲಿ ವ್ಯಕ್ತಿತ್ವದ ಗುಣವನಿಟ್ಟು
ತತ್ವ ಸಿದ್ಧಾಂತ ಮಾತ್ರ ಶಾಸ್ವತವನಿಟ್ಟು ಕರ್ಮದ ಕಟ್ಟಳೆಗೆ ಆಯುಷ್ಯದ ಕಡಿವಾಣ ಹಾಕಿ
ಆದಿ ತಾನಾಗಿ ಪರಿವರ್ತನೆಯೇ ಅಂತ್ಯವೆಂದನಯ್ಯಾ ಮುಕ್ತೇಶ್ವರ.




**– ವಿಶ್ವನಾಥ ಮುಕ್ತಾ ಬಸವಕಲ್ಯಾಣ.**

# ಅನಧಿಕೃತ ಕೋಚಿಂಗ್ ಕೇಂದ್ರಗಳ ವಿರುದ್ಧ ಕ್ರಮಕ್ಕೆ ಆಗ್ರಹ

ಮಲ್ಲಮ್ಮ ನುಡಿ ವಾರ್ತೆ

ಬೀದರ. ಮೇ. 27 : ನಗರದಲ್ಲಿ ನಡೆಯುತ್ತಿರುವ ಅನಧಿಕೃತಕೋಚಿಂಗ್‌ಕೇಂದ್ರಗಳ ವಿರುದ್ಧ ಕ್ರಮ ಕೈಗೊಳ್ಳಬೇಕು ಎಂದು ಕರ್ನಾಟಕ ರಕ್ಷಣಾ ವೇದಿಕೆ ಆಗ್ರಹಿಸಿದೆ.

ವೇದಿಕೆಯ ಜಿಲ್ಲಾ ಘಟಕದ ಅಧ್ಯಕ್ಷಸೋಮನಾಥಮುಧೋಳ ಬೆಂಗಳೂರಿನಲ್ಲಿಮಂಗಳವಾರ ಈ ಕುರಿತು ಪದವಿಪೂರ್ವ ಶಿಕ್ಷಣ ಇಲಾಖೆಯ ನಿರ್ದೇಶಕಿ ಸಿಂಧು ಬಿ. ರೂಪೇಶ್ ಅವರಿಗೆ ದೂರು ಸಲ್ಲಿಸಿದ್ದಾರೆ.

ಫಿಜಿಕ್ಸ್‌ವಾಲಾ ವಿದ್ಯಾಪೀಠ ಪಾಠಶಾಲಾ ಕೋಚಿಂಗ್ ಕೇಂದ್ರದ ಹೆಸರಲ್ಲಿ ಹಣ ಪಡೆದು ಅನಧಿಕೃತವಾಗಿ ಬೇರೆ ಬೇರೆ ಕಾಲೇಜುಗಳಲ್ಲಿ ವಿದ್ಯಾರ್ಥಿಗಳ ದಾಖಲಾತಿ ಮಾಡಿಸಿ, ಆನ್‌ಲೈನ್, ಆಫ್‌ಲೈನ್ ತರಗತಿಗಳನ್ನು



ನಡೆಸಲಾಗುತ್ತಿದೆ. ಬನ್ಸಾಲ್ ಹಾಗೂ ಆಕಾಶ್ ಕೋಚಿಂಗ್ ಕೇಂದ್ರಗಳಿಂದಲೂವಿದ್ಯಾರ್ಥಿಗಳನ್ನು ವಂಚಿಸಲಾಗುತ್ತಿದೆ ಎಂದು ಆರೋಪಿಸಿದ್ದಾರೆ.

ಅಧಿಕೃತ ಕಾಲೇಜುಗಳಲ್ಲೂ ನೀಟ್,ಜೆಇಇ,ಕೆಸಿಇಟಿ ಹೆಸರಲ್ಲಿ ವಿದ್ಯಾರ್ಥಿಗಳಿಂದದುಬಾರಿ ಶುಲ್ಕ ಪಡೆಯಲಾಗುತ್ತಿದೆ. ಹೀಗಾಗಿ ಪಾಲಕರಿಗೆ ಮಕ್ಕಳ ಕಾಲೇಜು ಶಿಕ್ಷಣ ಹೊರೆಯಾಗಿದೆ ಎಂದು ಹೇಳಿದ್ದಾರೆ. ಕೋಚಿಂಗ್ ಕೇಂದ್ರಗಳ ಬಗ್ಗೆ ಉಪ ನಿರ್ದೇಶಕರಿಗೆ ಮನವಿ ಪತ್ರ ಸಲ್ಲಿಸಿದರೂ ಕ್ರಮ ಕೈಗೊಂಡಿಲ್ಲ. ಅಧಿಕಾರಿಗಳೂ ಕೋಚಿಂಗ್ ಕೇಂದ್ರಗಳ ಜತೆ ಕೈಜೋಡಿಸಿದ್ದಾರೆ ಎಂದು ಆಪಾದಿಸಿದ್ದಾರೆ. ಕೂಡಲೇ ಅನಧಿಕೃತ ಕೋಚಿಂಗ್ ಕೇಂದ್ರಗಳನ್ನು ಮುಚ್ಚಿಸಬೇಕು. ವಿದ್ಯಾರ್ಥಿಗಳು ಅಧಿಕೃತ ಕಾಲೇಜುಗಳಲ್ಲಿ ಪ್ರವೇಶ ಪಡೆಯುವಂತೆ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದ್ದಾರೆ.

# ಎಂಜಿನಿಯರ್ಸ್‌ಗಳ ಪರಿಷತ್‌ಗೆ ನೇಮಕ: ಸನ್ಮಾನ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಮೇ. 27 :ರಾಜ್ಯ ಸರ್ಕಾರದ ಕರ್ನಾಟಕ ವೃತ್ತಿಪರ ಸಿವಿಲ್ ಎಂಜಿನಿಯರ್ಸ್‌ಗಳ ಪರಿಷತ್ ಸದಸ್ಯರಾಗಿ ನೇಮಕಗೊಂಡ ಹಿರಿಯ ಸಿವಿಲ್ ಎಂಜಿನಿಯರ್ ಹಾವಶೆಟ್ಟಿ ಪಾಟೀಲ ಅವರನ್ನು ನಾಟ್ಯಶ್ರೀ ನೃತ್ಯಾಲಯ ಹಾಗೂ ಗೆಳೆಯರ ಬಳಗದ ವತಿಯಿಂದ ನಗರದಲ್ಲಿ ಮಂಗಳವಾರ ಸನ್ಮಾನಿಸಲಾಯಿತು. ಶಾಲು ಹೊದಿಸಿ, ಮೈಸೂರು ಪೇಟ ತೊಡಿಸಿ ಗೌರವಿಸಲಾಯಿತು.

ಜಿಲ್ಲೆಯ ಸಿವಿಲ್ ಎಂಜಿನಿಯರಿಂಗ್ ಕ್ಷೇತ್ರಕ್ಕೆ ಹಾವಶೆಟ್ಟಿ ಪಾಟೀಲ ಅವರ ಕೊಡುಗೆ ಅಪಾರವಾಗಿದೆ. ಅವರನ್ನು ಪರಿಷತ್ ಸದಸ್ಯರಾಗಿ ನೇಮಕ ಮಾಡಿರುವ ಸರ್ಕಾರದ ಕ್ರಮ ಸೂಕ್ತವಾಗಿದೆ ಎಂದು ನೃತ್ಯಾಲಯದ ನಿರ್ದೇಶಕ ಕೆ. ಸತ್ಯಮೂರ್ತಿ ಹೇಳಿದರು.

ಹಿರಿಯ ಪತ್ರಕರ್ತ ಸದಾನಂದ ಜೋಶಿ ಮಾತನಾಡಿ, ಹಾವಶೆಟ್ಟಿ ಪಾಟೀಲ ಅವರು ಮೂರು ದಶಕಗಳಿಂದ ಸಿವಿಲ್ ಎಂಜಿನಿಯರಿಂಗ್ ಕ್ಷೇತ್ರದಲ್ಲಿ ಕಾರ್ಯ ನಿರ್ವಹಿಸುತ್ತಿದ್ದಾರೆ. ಅವರಿಗೆ ಪರಿಷತ್ ಸದಸ್ಯ ಸ್ಥಾನ ಒಲಿದು ಬಂದಿರುವುದು ಸಂತಸ ಉಂಟು ಮಾಡಿದೆ ಎಂದು ತಿಳಿಸಿದರು. ನಾಟ್ಯಶ್ರೀ ನೃತ್ಯಾಲಯದ ಅಧ್ಯಕ್ಷೆ ರಾಣಿ ಸತ್ಯಮೂರ್ತಿ, ಜಿಲ್ಲಾ ಬ್ರಾಹ್ಮಣ ಮಹಾಸಂಘದ ಅಧ್ಯಕ್ಷ ರಮೇಶ ಕುಲಕರ್ಣಿ, ಪ್ರಮುಖರಾದ ಓಂಪ್ರಕಾಶ ದಡ್ಡೆ, ಉಮಾಕಾಂತ ಮೀಸೆ, ಸಂತೋಷಕುಮಾರ ಮಂಗಳೂರೆ, ಕಿರಣ ಮೂರ್ತಿ, ರವಿಚಂದ್ರಮೂರ್ತಿ, ರಾಘವೇಂದ್ರ ಮೂರ್ತಿ ಮತ್ತಿತರರು ಇದ್ದರು.

# ಇಡಿ ದಾಳಿ, ಖರ್ಗೆ ವಿರುದ್ಧದ ಹೇಳಿಕೆಗೆ ಖಂಡನೆ

## ದಲಿತ ನಾಯಕರ ಏಳಿಗೆ ಸಹಿಸದ ಬಿಜೆಪಿ: ಆರೋಪ

ಬೀದರ. ಮೇ. 27: ಬಿಜೆಪಿಗೆ ದಲಿತ ನಾಯಕರ ಏಳಿಗೆ ಸಹಿಸಲಾಗುತ್ತಿಲ್ಲ ಎಂದು ಕಾಂಗ್ರೆಸ್ ಜಿಲ್ಲಾ ಘಟಕದ ಪ್ರಧಾನ ಕಾರ್ಯದರ್ಶಿ ವಿನೋದಕುಮಾರ ಅಪ್ಪೆ ಆರೋಪಿಸಿದ್ದಾರೆ.

ಗೃಹ ಸಚಿವ ಡಾ. ಜಿ. ಪರಮೇಶ್ವರ್ ಮುಖ್ಯಸ್ಥರಾಗಿರುವ ಸಿದ್ಧಾರ್ಥ ಶಿಕ್ಷಣ ಸಂಸ್ಥೆಗಳ ಮೇಲಿನ ಇಡಿ ದಾಳಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವ ಪ್ರಿಯಾಂಕ್ ಖರ್ಗೆ ವಿರುದ್ಧದ ಟೀಕೆ–ಟಿಪ್ಪಣಿಗಳು ದಲಿತ ನಾಯಕರನ್ನು ದುರ್ಬಲಗೊಳಿಸುವ ಹುನ್ನಾರದ ಭಾಗವಾಗಿವೆ ಎಂದು ಆಪಾದಿಸಿದ್ದಾರೆ.

ಡಾ. ಜಿ. ಪರಮೇಶ್ವರ್ ಮುಖ್ಯಮಂತ್ರಿ ಹುದ್ದೆಗೆ ಅರ್ಹರಾದ ನಾಯಕರಾಗಿದ್ದಾರೆ. ರಾಜ್ಯ ಹಾಗೂ ರಾಷ್ಟ್ರಮಟ್ಟದಲ್ಲಿ



ವರ್ಚಸ್ಸು ಹೊಂದಿದ್ದಾರೆ. ಅವರಿಗೆ ಕಳಂಕ ತರಲು ಹಾಗೂ ಅವರ ಜನಪ್ರಿಯತೆ ಕುಗ್ಗಿಸಲು ಇಡಿ ದಾಳಿ ನಡೆಸಲಾಗಿದೆ ಎಂದು ದೂರಿದ್ದಾರೆ.

ಬಿಜೆಪಿಯವರು ಖರ್ಗೆ ಕುಟುಂಬದ ವಿರುದ್ಧ ಹೇಳಿಕೆ ಕೊಡುವುದಕ್ಕಾಗಿಯೇ ಛಲವಾದಿ ನಾರಾಯಣಸ್ವಾಮಿ ಅವರನ್ನು ವಿಧಾನ ಪರಿಷತ್ ಸದಸ್ಯರನ್ನಾಗಿ ನೇಮಕ ಮಾಡಿದ್ದಾರೆ. ಛಲವಾದಿ ನಾರಾಯಣಸ್ವಾಮಿ ಅವರು ಪ್ರಿಯಾಂಕ್ ಖರ್ಗೆ ಅವರನ್ನು ನಾಯಿಗೆ ಹೋಲಿಸಿರುವುದು ಆ ಪಕ್ಷದವರ ಕೀಳು ಮನಸ್ಥಿತಿಯನ್ನು ತೋರಿಸುತ್ತದೆ ಎಂದು ಟೀಕಿಸಿದ್ದಾರೆ.

ದಲಿತ ನಾಯಕರನ್ನು ಹತ್ತಿಕ್ಕುವ ಚಟುವಟಿಕೆಗಳನ್ನು ನಿಲ್ಲಿಸದಿದ್ದರೆ ಮುಂದಿನ ದಿನಗಳಲ್ಲಿ ಬಿಜೆಪಿಗೆ ಜನ ತಕ್ಕ ಪಾಠ ಕಲಿಸಲಿದ್ದಾರೆ ಎಂದು ಎಚ್ಚರಿಕೆ ನೀಡಿದ್ದಾರೆ.

# ಕೋವಿಡ್-19: ಜಿಲ್ಲೆಯ ಸಾರ್ವಜನಿಕರು ಮುಂಜಾಗ್ರತಾ ಕ್ರಮಕೈಗೊಳ್ಳಲು ಸೂಚನೆ

ಕಲಬುರಗಿ,ಮೇ.27:2025ನೇ ಸಾಲಿನಲ್ಲಿ ಕಲಬುರಗಿ ಜಿಲ್ಲೆಯಲ್ಲಿ ಕೋವಿಡ್–19ಗೆ ಸಂಬಂಧಿಸಿದಂತೆ ಯಾವುದೇ ಪ್ರಕರಣ ವರದಿಯಾಗಿರುವುದಿಲ್ಲ. ಸಾರ್ವಜನಿಕರು ಭಯಪಡುವ ಅವಶ್ಯಕತೆಯಿಲ್ಲ. ಈ ಕುರಿತು ಆರೋಗ್ಯ ಇಲಾಖೆಯಿಂದ ನೀಡಲಾದ ಕೆಳಕಂಡ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಬೇಕೆಂದು ಕಲಬುರಗಿ ಜಿಲ್ಲಾಧಿಕಾರಿ ಬಿ. ಫೌಜಿಯಾ ತರನ್ನುಮ್ ಅವರು ತಿಳಿಸಿದ್ದಾರೆ.

ರಾಜ್ಯದಲ್ಲಿ 2025ರ ಜನವರಿಯಿಂದ ಮೇ 26ರವರೆಗೆ ಒಟ್ಟು 135 ಕೋವಿಡ್–19 ಪ್ರಕರಣಗಳು ವರದಿಯಾಗಿದ್ದು, ಅದರಲ್ಲಿ 80 ಪ್ರಕರಣಗಳು ಸಕ್ರೀಯವಾಗಿರುತ್ತವೆ ಹಾಗೂ ಒಂದು ಮರಣದ ಪ್ರಕರಣ ವರದಿಯಾಗಿರುತ್ತದೆ. ಈಗಾಗಲೇ ಕಲಬುರಗಿ ಜಿಮ್ಸ್ ಆಸ್ಪತ್ರೆಯಲ್ಲಿ ಒಟ್ಟು 20 ಹಾಸಿಗೆಗಳ ವ್ಯವಸ್ಥೆ ಮಾಡಲಾಗಿದೆ. ಅದರಲ್ಲಿ 10 ಸಾಮಾನ್ಯ ಹಾಸಿಗೆಗಳು, 05 ಹೆಚ್.ಡಿ.ಯು ಮತ್ತು 05 ಐ.ಸಿ.ಯು ಹಾಸಿಗೆಗಳ ವ್ಯವಸ್ಥೆ ಮಾಡಲಾಗಿದೆ. ಖಚಿತ ಪ್ರಕರಣಗಳಲ್ಲಿ ಅಲ್ಪಪ್ರಮಾಣದ ಲಕ್ಷಣಗಳುಳ್ಳ ರೋಗಿಗಳಿಗೆ ಹೋಮ ಐಸೋಲೇಷನ ಮಾಡಲಾಗುವುದು ಹಾಗೂ



ತೀವ್ರತರದ ರೋಗಲಕ್ಷಣಗಳುಳ್ಳ ರೋಗಿಗಳಿಗೆ ಕಲಬುರಗಿ ಜಿಮ್ಸ್ ಆಸ್ಪತ್ರೆಯಲ್ಲಿ ಉಚಿತವಾಗಿ ಚಿಕಿತ್ಸೆ ನೀಡಲಾಗುತ್ತದೆ.

ಶೀತ, ನೆಗಡಿ, ಜ್ವರ ಇರುವ ತಮ್ಮ ಮಕ್ಕಳನ್ನು ಪೋಷಕರು ಶಾಲೆಗೆ ಕಳುಹಿಸದಿರುವುದು ಉತ್ತಮ. ಸಾರ್ವಜನಿಕರು ಆಗಾಗೆ ಸಾಬೂನಿನಿಂದ ಅಥವಾ ಸೈನಿಟೈಸರ್‌ನಿಂದ ಕೈತೊಳೆಯಬೇಕು. ಕೆಮ್ಮುವಾಗ ಅಥವಾ ಸೀನುವಾಗ ಕರವಸ್ತ್ರ ಉಪಯೋಗಿಸಬೇಕು. ಯಾವುದೇ ತರಹದ ಕೆಮ್ಮು, ನೆಗಡಿ, ಗಂಟಲು ನೋವು, ಜ್ವರ ಕಂಡುಬಂದಲ್ಲಿ ಹತ್ತಿರದ ಸರಕಾರಿ ಆಸ್ಪತ್ರೆಗೆ ಹೋಗಿ ಚಿಕಿತ್ಸೆ ಪಡೆಯಬೇಕು. ವಿಶೇಷವಾಗಿ ಮಕ್ಕಳು, ವೃದ್ಧರು, ಗರ್ಭಿಣಿ ಸ್ತ್ರೀಯರಲ್ಲಿ ರೋಗಲಕ್ಷಣಗಳು ಕಂಡುಬಂದಲ್ಲಿ ಹೆಚ್ಚಿನ ನಿಗಾ ವಹಿಸಬೇಕು.

ರಾಜ್ಯದ ಮಾರ್ಗಸೂಚಿಯಂತೆ ತೀವ್ರ ಉಸಿರಾಟದ ತೊಂದರೆ ಇರುವವರಿಗೆ ಹಾಗೂ ಗರ್ಭಿಣಿಯರು, ಮಕ್ಕಳು, ವೃದ್ಧರಲ್ಲಿ ಲಕ್ಷಣಗಳು ಕಂಡುಬಂದಲ್ಲಿ ವೈದ್ಯರ ಸಲಹೆ ಮೇರೆಗೆ ಕೋವಿಡ್–19 ನ ಪರೀಕ್ಷೆ ಮಾಡಲಾಗುತ್ತದೆ. ಕೋವಿಡ್–19 ಸೋಂಕನ್ನು ದೃಢಪಡಿಸಿಕೊಳ್ಳಲು RT-PCR ಪರೀಕ್ಷೆಗೆ ಕಲಬುರಗಿ (VRDLGIMS) ಜಿಮ್ಸ್‌ನ ಪ್ರಯೋಗಾಶಾಲೆನಿಗದಿಪಡಿಸಿದ್ದು, ಆದ್ದರಿಂದ ಜಿಲ್ಲೆಯ ಎಲ್ಲಾ ಮಾದರಿಗಳು ಅಲ್ಲಿಯೇ ಪರೀಕ್ಷೆಗೆ ಒಳಪಡಿಸಲಾಗುತ್ತದೆ ಎಂದು ಅವರು ತಿಳಿಸಿದ್ದಾರೆ.

# ಮುಂದಿನ ದಿನಗಳಲ್ಲಿ ಜಿಲ್ಲೆಯಲ್ಲಿ ಭಾರಿ ಮಳೆಯಾಗುವ ಸಾಧ್ಯತೆ: ಅಧಿಕಾರಿಗಳು ಮುನ್ನೆಚ್ಚರಿಕೆ ಕ್ರಮ ಕೈಗೊಳ್ಳಲು ಸೂಚನೆ

ಕಲಬುರಗಿ,ಮೇ.27:ಕಲಬುರಗಿ ಜಿಲ್ಲೆಯಲ್ಲಿ ಮುಂದಿನ ದಿನಗಳಲ್ಲಿ ಭಾರಿ ಮಳೆಯಾಗುವ ಸಾಧ್ಯತೆ ಇರುವುದಾಗಿ ಹವಾಮಾನ ಇಲಾಖೆಯು ಮುನ್ಸೂಚನೆ ನೀಡಿದೆ. ಜಿಲ್ಲೆಯಲ್ಲಿ ಭಾರಿ ಮಳೆ/ಪ್ರವಾಹ ಕುರಿತು ಜಿಲ್ಲಾ/ತಾಲೂಕು/ಹೋಬಳಿ/ಗ್ರಾಮ ಪಂಚಾಯತ್‌ಮಟ್ಟದ ಅಧಿಕಾರಿಗಳು ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದಿಂದ ನೀಡಲಾದ ಈ ಕೆಳಕಂಡ ಮುನ್ನೆಚ್ಚರಿಕೆ ಕ್ರಮಕೈಗೊಳ್ಳಬೇಕೆಂದು ಕಲಬುರಗಿ ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಅಧ್ಯಕ್ಷರಾದ ಬಿ. ಫೌಜಿಯಾ ತರನ್ನುಮ್ ಅವರು ಸೂಚಿಸಿದ್ದಾರೆ.

ಹವಾಮಾನ ಇಲಾಖೆಯ ವರದಿಯನ್ವಯ ದಿನಾಂಕ: 24–05–2025ರಂದು ನೈರುತ್ಯ ಮಾನ್ಸೂನ್ (ಮುಂಗಾರು ಹಂಗಾಮು) ಕೇರಳ ಪ್ರವೇಶಿಸಿದ್ದು, ಈ ವರ್ಷ ವಾಡಿಕೆಗಿಂತ 8 ದಿನಗಳ ಮುಂಚಿತವಾಗಿ ಕೇರಳ ಪ್ರವೇಶಿಸಿದೆ. ಜಿಲ್ಲೆಯಲ್ಲಿ ಭಾರಿ ಮಳೆ/ಪ್ರವಾಹ ಕುರಿತು ಮುಂಜಾಗ್ರತೆ ತೆಗೆದುಕೊಳ್ಳುವುದು ಅವಶ್ಯಕತೆಯಿದ್ದು, ಜಿಲ್ಲಾ/ತಾಲೂಕು/ ಹೋಬಳಿ/ ಗ್ರಾಮ ಪಂಚಾಯತ್ ಮಟ್ಟದ ಅಧಿಕಾರಿ/ಸಿಬ್ಬಂದಿಗಳು ಕೇಂದ್ರ ಸ್ಥಾನದಲ್ಲಿದ್ದು, ಪ್ರವಾಹ/ಭಾರಿ ಮಳೆಯಿಂದ ಜಿಲ್ಲೆಯಲ್ಲಿ ಯಾವುದೇ ಅಹಿತಕರ ಘಟನೆಯಾಗದಂತೆ ಮುನ್ನೆಚ್ಚರಿಕೆ ವಹಿಸಬೇಕು.

ಸಾರ್ವಜನಿಕರು ನದಿ, ಹಳ್ಳ, ಕೆರೆ ದಡದಲ್ಲಿ ಬಟ್ಟೆ ತೊಳೆಯಬಾರದು, ಈಜಾಡಬಾರದು, ಧನ/ಕರುಗಳನ್ನು ಮೇಯಿಸಬಾರದು ಹಾಗೂ ಅಪಾಯವಿರುವ ಸೇತುವೆಗಳಲ್ಲಿ



ಸಂಚರಿಸಬಾರದು ಹಾಗೂ ಇತರೆ ಚಟುವಟಿಕೆಗಳು ನಡೆಸದಂತೆ ಕ್ರಮವಹಿಸಬೇಕು. ನಿರಂತರ ಮಳೆಯಿಂದ ಅಪಾಯವಿರುವ ಮನೆ ಗೋಡೆ, ಶಾಲೆಗಳು ಹಾಗೂ ಇತರೆ ಕಟ್ಟಡಗಳ ಕುಸಿಯುವ ಸಾಧ್ಯತೆ ಇದ್ದು, ಇದರಿಂದ ಸಾವು ನೋವುಗಳು ಸಂಭವಿಸುವ ಸಂದರ್ಭವಿದ್ದು, ಆದ್ದರಿಂದ ಸಾರ್ವಜನಿಕರಿಗೆ ಸುರಕ್ಷತೆಯ ಮುನ್ನೆಚ್ಚರಿಕೆಯ ಕ್ರಮ ತೆಗೆದುಕೊಳ್ಳಲು ತಿಳಿಸಲಾಗಿದೆ.

ಭಾರಿ ಮಳೆ/ಪ್ರವಾಹದಿಂದ ಯಾವುದೇ ಅಹಿತಕರ ಘಟನೆಯಾಗದಂತೆ ಪ್ರತಿ ಗ್ರಾಮಗಳಲ್ಲಿ ಡಂಗೂರ ಸಾರುವುದು/ಮೈಕ್ ಮೂಲಕ ಜಾಗೃತಿ ಮುಡಿಸಬೇಕು. ಭಾರಿ ಮಳೆ/ಪ್ರವಾಹದಿಂದ ಹಾನಿಯಾದ ಬಗ್ಗೆ ಪ್ರಾಥಮಿಕ ವರದಿಯನ್ನು ಪ್ರತಿ ದಿನ ಜಿಲ್ಲಾಡಳಿತಕ್ಕೆ ಸಲ್ಲಿಸಬೇಕು. ಕಲಬುರಗಿ ಜಿಲ್ಲೆಯ ಜಿಲ್ಲಾ/ತಾಲೂಕು ಮಟ್ಟದ ಅಧಿಕಾರಿ/ಸಿಬ್ಬಂಧಿಗಳಿಗೆ ಪ್ರವಾಹ/ಭಾರಿ ಮಳೆಯಿಂದ ಯಾವುದೇ ಅಹಿತಕರ ಘಟನೆಯಾಗದಂತೆ ಮುನ್ನೆಚ್ಚರಿಕೆ ಕ್ರಮ ತೆಗೆದುಕೊಳ್ಳಲು ಸೂಚಿಸಲಾಗಿದೆ.

ಇತರೆ ಸಮಸ್ಯೆ ಹಾಗೂ ತುರ್ತು ಪರಿಹಾರಕ್ಕಾಗಿ ಜಿಲ್ಲಾ ಮತ್ತು ತಾಲ್ಲೂಕು ಮಟ್ಟದಲ್ಲಿ ಈ ಕೆಳಕಂಡಂತೆ ಸಹಾಯವಾಣಿ ಕೇಂದ್ರವನ್ನು ತೆರೆಯಲಾಗಿದೆ. ಈ ಸಹಾಯವಾಣಿ ಕೇಂದ್ರದ ಸಂಖ್ಯೆಗೆ ಪ್ರತಿದಿನ ಬೆಳಿಗ್ಗೆ 10 ರಿಂದ ಸಂಜೆ 5.30 ಗಂಟೆಯವರೆಗೆ ಸಂಪರ್ಕಿಸಬೇಕು.

ಜಿಲ್ಲಾ ವಿಪತ್ತು ತುರ್ತು ನಿರ್ವಹಣಾ ಕೇಂದ್ರದ ದೂರವಾಣಿ ಸಂಖ್ಯೆ 08472–278677 ಅಥವಾ 1077 (ಕಲಬುರಗಿ ಜಿಲ್ಲಾಧಿಕಾರಿಗಳ ಕಛೇರಿ) ಹಾಗೂ ಕಲಬುರಗಿ ಮಹಾನಗರಪಾಲಿಕೆ ಸಹಾಯವಾಣಿ ಸಂಖ್ಯೆ 08472–241364, 6363544601 ಗಳಿಗೆ ಸಂಪರ್ಕಿಸಬೇಕು.

ತಾಲೂಕುವಾರು ಸ್ಥಾಪಿಸಲಾದ ಸಹಾಯವಾಣಿ ಸಂಖ್ಯೆಯ ವಿವರ ಇಂತಿದೆ.

# ವಿದ್ಯಾರ್ಥಿಗಳ ಕಲಿಕೆಯಲ್ಲಿ ಶಿಕ್ಷಕರ ಪಾತ್ರ ಮಹತ್ವದ್ದು:ಬಿಇಓ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಮೇ.27: ಶಾಲಾ ಪ್ರಾರಂಭದ ದಿನದಿಂದಲೇ ವಿದ್ಯಾರ್ಥಿಗಳ ಕಲಿಕೆಗೆ ಒತ್ತುನೀಡಬೇಕು ಎಂದು ಕ್ಷೇತ್ರ ಶಿಕ್ಷಣಾಧಿಕಾರಿ ಸಿ.ಜಿ.ಹಳ್ಳದ್ ಹೇಳಿದರು.

ಪಟ್ಟಣದ ಪುರಭವನದಲ್ಲಿ ನಡೆದ ಶಾಲಾ ಪ್ರಾರಂಭೋತ್ಸವದ ಪೂರ್ವಭಾವಿ ಸಭೆಯನ್ನುದ್ದೇಶಿಸಿ ಅವರು ಮಾತನಾಡಿದರು. ಮುಖ್ಯಶಿಕ್ಷಕರು ಆಡಳಿತ ವಿಷಯಕ್ಕೆ ಹಚ್ಚು ಗಮನ ಹರಿಸಬೇಕು. ಶಾಲಾ ವಿದ್ಯಾರ್ಥಿಗಳ ಶೈಕ್ಷಣಿಕ ಗುಣಮಟ್ಟಸುಧಾರಿಸುವುದರೊಂದಿಗೆ ಆಡಳಿತ ವಿಷಯಗಳಾದ ಹಾಜರಾತಿ, ದಾಖಲಾತಿ, ಸರ್ಕಾರದಿಂದ ಕೊಡುವ ಎಲ್ಲಾ ಸೌಲಭ್ಯಗಳ ಬಗ್ಗೆ ಸಮರ್ಪಕವಾಗಿ ಮಾಹಿತಿ ಪಡೆದು ಕಾರ್ಯನಿರ್ವಹಿಸಬೇಕು. ಸಮಯಪಾಲನೆಗೆ ಹೆಚ್ಚಿನ ಗಮನ ಹರಿಸಬೇಕು. ಸ್ವಚ್ಛತೆಗೆ ಆದ್ಯತೆ ನೀಡಬೇಕು ಎಂದು ಹೇಳಿದರು.

ಕ್ಷೇತ್ರ ಸಮನ್ವಯಾಧಿಕಾರಿ ಮನೋಹರ ಹೊಳಕರ ಮಾತನಾಡಿ, ಮುಖ್ಯಶಿಕ್ಷಕರು ಶಾಲೆಯಲ್ಲಿ ನಿರ್ವಹಿಸಬೇಕಾದ ಎಲ್ಲಾ ದಾಖಲೆಗಳನ್ನು ಸಮರ್ಪಕವಾಗಿ ನಿರ್ವಹಿಸಬೇಕು. ಇಲಖೆಯ ಯೋಜನೆಗಳನ್ನು ಸರಿಯಾಗಿ ಅನುಷ್ಠಾನಗೊಳಿಸಬೇಕು. ಶಾಲಾ ಅನುದಾನ ಸರಿಯಾಗಿ ಬಳಸಬೇಕು ಎಂದು ಹೇಳಿದರು.

ಅಕ್ಷರದಾಸೋಹ ಯೋಜನೆಯ ಸಹಾಯಕ ನಿರ್ದೇಶಕ ಮಲ್ಲಿನಾಥ ಸಜ್ಜನ ಮಾತನಾಡಿ, ಶಿಕ್ಷಕರು ಮದ್ಯಾನ್ಹದ ಉಪಹಾರ ಯೋಜನೆಯನ್ನು ಸರಿಯಾಗಿ ಅನುಷ್ಠಾನ ಮಾಡಬೇಕು. ವಿದ್ಯಾರ್ಥಿಗಳಿಗೆ ಬಿಸಿಯೂಟದ ಜೊತೆಗೆ ಮೊಟ್ಟೆ, ಬಾಳೆಹಣ್ಣು ನೀಡಬೇಕು. ಅಲ್ಲದೇ ಪ್ರತಿನಿತ್ಯ ಉತ್ತಮವಾದ ಹಾಲನ್ನು ಕುಡಿಸಬೇಕು. ಯಾವುದೇ ಕಾರಣಕ್ಕೂ ಬಿಸಿಯೂಟ ಯೋಜನೆಯಲ್ಲಿ ಲೋಪ ಬರದಂತೆ ನೋಡಿಕೊಳ್ಳಬೇಕು ಎಂದು ಹೇಳಿದರು.

ದೈಹಿಕ ಶಿಕ್ಷಣಾಧಿಕಾರಿ ರೋಹಿದಾಸ ರಾಠೋಡ ಮಾತನಾಡಿ, ಶಿಕ್ಷಕರಲ್ಲಿ ಶಿಸ್ತುಪಾಲನೆ ಅತಿ ಮುಖ್ಯವಾಗಿದೆ. ಶಿಕ್ಷಕರು ಶಿಸ್ತಿನಿಂದಿದ್ದರೆ ವಿದ್ಯಾರ್ಥಿಗಳಲ್ಲಿ ಶಿಸ್ತು ತಾನಾಗಿಯೇ ಬರುವುದು ಎಂದು ಹೇಳಿದರು. ಕ್ರೀಡಾ–ಕೂಟದ ಬಗ್ಗೆ ಮಾಹಿತಿ ನೀಡಿದರು.

ಇಸಿಓ ಮಲ್ಲಿಕಾರ್ಜುನ ಕನ್ನಾಳೆ ಎನ್‌ಎಮ್‌ಎಮ್‌ಎಸ್ ಪರೀಕ್ಷೆಯ ಬಗ್ಗೆ ಮಾಹಿತಿ ನೀಡಿದರು. ಇಸಿಓ ಸಹದೇವ ಗೌಡಗಾವೆ ಪಠ್ಯಪುಸ್ತಕ ಮತ್ತು ಸಮವಸ್ತ್ರಗಳ ಸ್ವೀಕೃತಿ ಮತ್ತು ವಿತರಣೆಯ ಬಗ್ಗೆ ಮಾಹಿತಿ ನೀಡಿದರು. ಪ್ರೌಢಶಿಕ್ಷಣ ಬಿಆರ್‌ಪಿ ಸಂಬಣ್ಣ ಕಟ್ಟಿಮನಿ, ಪ್ರಾಥಮಿಕ ಶಿಕ್ಷಣ ಇಸಿಓ ಕುಸುಮಾಕುಮಾರಿ ರೆಡ್ಡಿ, ಪ್ರಾಥಮಿಕ ಶಿಕ್ಷಣ ಬಿಆರ್‌ಪಿ ಸಂತೋಷ ಮುಧೋಳೆ, ಮಹೇಂದ್ರಕುಮಾರ, ಚೇತನಾ ಚನಶೆಟ್ಟಿ, ಶಾಂತಾ ಮೋರೆ, ಬಸವರಾಜ, ಶ್ರೀದೇವಿ ಕಟ್ಟಿಮನಿ ಶಾಲಾ ಶಿಕ್ಷಣದ ವಾರ್ಷಿಕ ಕಾರ್ಯಯೋಜನೆಗಳ ಬಗ್ಗೆ ಸಮರ್ಪಕ ಮಾಹಿತಿ ನೀಡಿದರು.

ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ತಾಲೂಕು ಅಧ್ಯಕ್ಷ ಸೂರ್ಯಕಾಂತ ಸುಂಟೆ ವಿದ್ಯಾರ್ಥಿಗಳ ಕಲಿಕೆಯಲ್ಲಿ ಶಿಕ್ಷಕರ ಪಾತ್ರದ ಬಗ್ಗೆ ವಿವರಣೆ ನೀಡಿದರು.

# ನ್ಯಾಯಸಮ್ಮತ ಬೇಡಿಕೆ ಈಡೇರುವವರೆಗೆ ಮುಷ್ಕರ ನಿಲ್ಲಲ್ಲ : ಅವಿನಾಶ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ: ಮೇ.27:ಸರ್ಕಾರದ ಮುಂದಿರುವ ಪೌರಕಾರ್ಮಿಕರ ನ್ಯಾಯಸಮ್ಮತವಾದ ಬೇಡಿಕೆಗಳು ಈಡೇರುವವರೆಗೆ ನಮ್ಮ ಮುಷ್ಕರ ನಿಲ್ಲಲ್ಲ ಎಂದು ಕರ್ನಾಟಕ ರಾಜ್ಯ ಪೌರಕಾರ್ಮಿಕ ನೌಕರರ ಸಂಘದ ತಾಲೂಕು ಘಟಕದ ಅಧ್ಯಕ್ಷ ಅವಿನಾಶ ಗಾಯಕವಾಡ ಹೇಳಿದರು. ಪಟ್ಟಣದ ಪುರಸಭೆಯ ಮುಂಭಾಗದಲ್ಲಿ ಮಂಗಳವಾರ ಆಯೋಜಿಸಿದ್ದ ಪೌರಕಾರ್ಮಿಕರ ಅನಿರ್ದಿಷ್ಟಾವಧಿ ಮುಷ್ಕರದಲ್ಲಿ ಅವರು ಮಾತನಾಡಿದರು.

ಪೌರಕಾರ್ಮಿಕರು ಈ ಹಿಂದೆ ಹಲವಾರು ಬಾರಿ ಮುಷ್ಕರ ನಡೆಸಿದರೂ ಸರ್ಕಾರ ನಮ್ಮ ಬೇಡಿಕೆಗಳು ಈಡೇರಿಸಿಲ್ಲ. ಹೀಗಾಗಿ ರಾಜ್ಯಾದ್ಯಂತ ಕೆಲಸ ಸ್ಥಗಿತಗೊಳಿಸಿ ಇಂದು ಮುಷ್ಕರ ನಡೆಸುತ್ತಿದ್ದೇವೆ. ಸರ್ಕಾರ ನಮ್ಮ ಬೇಡಿಕೆ ಈಡೇರಿಸುವವರೆಗೆ ನಮ್ಮ ಮುಷ್ಕರ ನಿಲ್ಲಲ್ಲ. ನಮ್ಮ ಪ್ರಮುಖ ಬೇಡಿಕೆಗಳಾದ ಪೌರ ಕಾರ್ಮಿಕರಿಗೆ ರಾಜ್ಯ ಸರ್ಕಾರಿ ನೌಕರರೆಂದು ಪರಿಗಣಿಸಿ, ಜ್ಯೋತಿ ಸಂಜಿವಿನಿ, ಕೆ–ಜಿಐಡಿ ಸೇರಿಂದತೆ ಸರ್ಕಾರಿ ನೌಕರರು ಪಡೆಯುವ ಎಲ್ಲಾ ಸೌಲಭ್ಯಗಳನ್ನು ನೀಡಬೇಕು. ಇಲ್ಲದಿದ್ದರೆ ಪಟ್ಟಣದ ಎಲ್ಲಾ ಕಾರ್ಯಗಳನ್ನು ಸ್ಥಗಿ–ತಗೊಳಿಸಿ ಮುಷ್ಕರ ಮುಂದುವರೆಸಲಾಗುವುದು ಎಂದು ಹೇಳಿದರು. ಈ ಸಂದರ್ಭದಲ್ಲಿ ಪ್ರಮುಖರಾದ ಸಂತೋಷ, ವಿಶ್ವನಾಥ, ಬಾಲಾಜಿ ಕಂದಾಯ, ಸುಶೀಲಕುಮಾರ, ವಿಯಕುಮಾರ, ವಿದ್ಯಾವತಿ, ಶ್ರೀದೇವಿ, ಉತ್ತಮ್ಮಾ, ಸಂತೋಷ ಪಾಂಚಾಳ, ಧನಾಜಿ ಸೂರ್ಯವಂಶಿ, ಜಯಶ್ರೀ, ಶಕುಂತಲಾ, ಚಂದ್ರಕಲಾ, ಮಂಗಲಾಬಾಯಿ, ಉತ್ತಮಬಾಯಿ ಸೇರಿದಂತೆ ಹಲವರು ಇದ್ದರು.

# ಬಸವಣ್ಣನವರ ಜಯಂತಿ ಒಂದು ದಿನಕ್ಕೆ ಸೀಮಿತವಾಗದಿರಲಿ: ಶಾಸಕ ಪ್ರಭು ಚವ್ಹಾಣ

ಔರಾದ:ಮೇ.27:ವಿಶ್ವಗುರು ಬಸವಣ್ಣನವರ ಜಯಂತಿಯನ್ನು ನೆಪ ಮಾತ್ರಕ್ಕೆ ಆಚರಿಸದೇ ಅವರ ವಿಚಾರಧಾರೆ ಬದುಕಿನಲ್ಲಿ ಅಳವಡಿಸಿಕೊಳ್ಳಬೇಕೆಂದು ಮಾಜಿ ಸಚಿವರು ಹಾಗೂ ಔರಾದ(ಬಿ) ಶಾಸಕರಾದ ಪ್ರಭು ಬಿ.ಚವ್ಹಾಣ ಅವರು ತಿಳಿಸಿದರು. ಔರಾದ ತಾಲ್ಲೂಕಿನ ಗಡಿಕುಶನೂರ ಗ್ರಾಮದಲ್ಲಿ ಬಸವ ಜಯಂತಿ ಉತ್ಸವ ಸಮಿತಿ ವತಿಯಿಂದ ಇತ್ತೀಚೆಗೆ ಆಯೋಜಿಸಿದ್ದ ವಿಶ್ವಗುರು ಬಸವಣ್ಣನವರ ಜಯಂತ್ಯುತ್ಸವ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು. ಸಮಾನತೆಯ ಹರಿಕಾರ ಮತ್ತು ಮಹಾನ್ ಮಾನವತಾವಾದಿ ಬಸವಣ್ಣನವರ ಆದರ್ಶ ಸಾರ್ವಕಾಲಿಕ. 12ನೇ ಶತಮಾನದಲ್ಲೇ ಸಮಾಜದಲ್ಲಿನ ಓರೆಕೋರೆಗಳನ್ನು ಸರಿಪಡಿಸಲು ಮುಂದಾದ ಮೇರು ಸಮಾಜ ಸುಧಾರಕರು. ಕಾಯಕದ ಮಹತ್ವ ಸಾರುವ ಅವರ ವಚನಗಳು



ಎಲ್ಲಾ ಕಾಲಕ್ಕೂ ಪ್ರಸ್ತುತ ಎಂದರು. ಅವರು ಸ್ಥಾಪಿಸಿದ ಅನುಭವ ಮಂಟಪ ಸಂಸದೀಯ ವ್ಯವಸ್ಥೆಯ ಮೂಲ. ಅನುಭವ ಮಂಟಪದಲ್ಲಿ ಸಾಮಾನ್ಯರು ಕೂಡ ತಮ್ಮ ಅನುಭವ ಮತ್ತು ಅನುಭಾವ ಹಂಚಿಕೊಳ್ಳಲು ಅವಕಾಶವಿತ್ತು. ನಾನು ಸಚಿವನಾಗಿದ್ದ ಸಂದರ್ಭದಲ್ಲಿ ಬಸವಕಲ್ಯಾಣದಲ್ಲಿ ನೂತನ ಅನುಭವ ಮಂಟಪಕ್ಕೆ ಅನುದಾನ ಮಂಜೂರು ಮಾಡಿಸಿ ಮುಖ್ಯಮಂತ್ರಿಯವರಿಂದ ಭೂಮಿಪೂಜೆನೆರವೇರಿಸಿರುವುದು ಅವಿಸ್ಮರಣೀಯ ಘಳಿಗೆಯಾಗಿದೆ. ಗಡಿಕುಶನೂರನಲ್ಲಿ ಸುಂದರ ಮತ್ತು ಭವ್ಯ ಅನುಭವ ಮಂಟಪ ನಿರ್ಮಿಸಲಾಗಿದೆ. ಬಾಕಿ ಉಳಿದ ಕೆಲಸಗಳನ್ನು ಪೂರ್ಣಗೊಳಿಸಲು ಅಗತ್ಯ ಸಹಕಾರ ನೀಡುವೆ ಎಂದು ಹೇಳಿದರು. ಪ್ರಮುಖರಾದ ಹಣಮಂತರಾವ ಪಾಟೀಲ, ಚಂದ್ರಕಾಂತಪಟ್ನೆ ಮಾತನಾಡಿದರು. ಮುಖಂಡರಾದ ರಾಮಶೆಟ್ಟಿ ಪನ್ನಾಳೆ, ಧೊಂಡಿಬಾ ನರೋಟೆ, ಶಿವಾಜಿರಾವ ಪಾಟೀಲ ಮುಂಗನಾಳ, ಶಿವರಾಜ ಅಲ್ಮಾಜೆ, ದಯಾನಂದ ಘೂಳೆ, ಕೇರಬಾ ಪವಾರ, ಕಂಟೆಪ್ಪ ಗಂದಿಗೂಡೆ, ಪ್ರದೀಪ ಯನಗುಂದೆ, ಸುಧಾಕರ ಬಚರೆ, ಅಶೋಕ ಮಾಶೆಟ್ಟಿ, ಬಾಬುರಾವ ಶೇರಿಕಾರ, ವಿಜಯಕುಮಾರ ಪಟ್ನೆ, ಅಡವೆಪ್ಪ ಪಟ್ನೆ, ಸುಭಾಷ ಹುಲಸೂರೆ, ಮಲ್ಲಿಕಾರ್ಜುನ ಕೋಟೆ ಸೇರಿದಂತೆ ಇತರರು ಇದ್ದರು.

# ಪರಿಶಿಷ್ಟ ಜಾತಿಗಳ ಸಮಗ್ರ ಸಮೀಕ್ಷೆ –2025 ಅವಧಿ ವಿಸ್ತರಣೆ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ, ಮೇ 27 : ಸರ್ಕಾರದ ಆದೇಶ ದಿನಾಂಕ 2024 ನೇ ನವೆಂಬರ್ 12 ರಲ್ಲಿ ರಾಜ್ಯದಲ್ಲಿ ಶಿಕ್ಷಣ ಮತ್ತು ಸರ್ಕಾರಿ ಸೇವೆಗಳಲ್ಲಿ ಪರಿಶಿಷ್ಟ ಜಾತಿಯ ವಿವಿಧ ಉಪಜಾತಿಗಳಿಗೆ ಸೇರಿದವರ ಪ್ರಾತಿನಿಧ್ಯತೆ ಕುರಿತು ಇಟರಿಜಡಿಬಿಭಿಚಿಟ ಆಚಿಣಚಿ ಪಡೆದು ಪರಿಶಿಷ್ಟ ಜಾತಿಯಲ್ಲಿ ಒಳ ಮೀಸಲಾತಿ ಬಗ್ಗೆ ಸೂಕ್ತ ಶಿಫಾರಸ್ಸಿನೊಂದಿಗೆ ವರದಿ ಸಲ್ಲಿಸಲು ಕರ್ನಾಟಕ ಉಚ್ಚನ್ಯಾಯಾಲಯದ ನಿವೃತ್ತ ನ್ಯಾಯಾಧೀಶರಾದ ಡಾ: ಹೆಚ್.ಎನ್. ನಾಗಮೋಹನ್ ದಾಸ್ ಇವರ ಅಧ್ಯಕ್ಷತೆಯಲ್ಲಿ ಏಕ ಸದಸ್ಯ ಆಯೋಗವನ್ನು ರಚಿಸಲಾಗಿರುತ್ತದೆ.

ಪರಿಶಿಷ್ಟ ಜಾತಿಯಲ್ಲಿನ 101 ಜಾತಿಗಳ ವೈಜ್ಞಾನಿಕ ವರ್ಗೀಕರಣ ಮಾಡಲು ದತ್ತಾಂಶವನ್ನು (ಇಟರಿಜಡಿಬಿಭಿಚಿಟ ಆಚಿಣಚಿ) ಸಂಗ್ರಹಿಸಲು ಹೊಸದಾದ ಸಮೀಕ್ಷೆಯನ್ನು ನಡೆಸಲು ದಿನಾಂಕ: 27–03–2025 ರ ಆಯೋಗದ ಮಧ್ಯಂತರ ವರದಿಯಲ್ಲಿ ಸರ್ಕಾರ–ಕ್ಕೆ ಶಿಫಾರಸ್ಸು ಮಾಡಲಾದ ಹಿನ್ನೆಲೆಯಲ್ಲಿ ಸಮೀಕ್ಷೆಯನ್ನು ದಿನಾಂಕ: 05–05–2025 ರಿಂದ ಗಣತಿದಾರರು ಮನೆ–ಮನೆಗೆ ಭೇಟಿ ನೀಡಿ ಮಾಹಿತಿ ಸಂಗ್ರಹಿಸುವುದರ ಮೂಲಕ ರಾಜ್ಯಾದ್ಯಂತ ಈಗಾಗಲೇ ಪ್ರಾರಂಭಿಸಲಾಗಿರುತ್ತದೆ.

ಬಿಬಿಎಂಪಿ ವ್ಯಾಪ್ತಿಯ ವಲಯಗಳಲ್ಲಿ ಪರಿಶಿಷ್ಟ ಜಾತಿ ಜನಾಂಗದ ಸಮೀಕ್ಷೆ ಕಾರ್ಯವು ಇನ್ನೂ ಪ್ರಗತಿಯಾಗಬೇಕಾಗಿರುವುದರಿಂದ, ಮಳೆ/ಹವಾಮಾನ ವೈಪರೀತ್ಯ ಕಾರಣಗಳಿಂದಾಗಿ, ಅನೇಕ ಪರಿಶಿಷ್ಟ ಜಾತಿ ಸಂಘಗಳಿಂದ ಮತ್ತು ಬೆಂಗಳೂರು ಮಹಾನಗರ ಪಾಲಿಕೆ ವತಿಯಿಂದ ಕೋರಿಕೆಯ ಮೇರೆಗೆ ಸಮೀಕ್ಷಾ ಕಾರ್ಯವನ್ನು ಪೂರ್ಣಗೊಳಿಸಲು ಅನುವಾಗುವಂತೆ ದಿನಾಂಕವನ್ನು ವಿಸ್ತರಿಸಲು ನಿರ್ಣಯಿಸಲಾಗಿದೆ.

ಮನೆ–ಮನೆ ಭೇಟಿ ನೀಡಿ ಸಮೀಕ್ಷೆಯು ದಿನಾಂಕ:26–05–2025 ರಿಂದ 29–05–2025 ರವರೆಗೆ ವಿಸ್ತರಿಸಲಾಗಿದೆ. ವಿಶೇಷ ಶಿಬಿರ (ಸಮೀಕ್ಷಾ ಬ್ಲಾಕ್ ವ್ಯಾಪ್ತಿಯಲ್ಲಿ) – 03 ದಿನಗಳ ಕಾಲ – ಮೇ 30, 31 ಹಾಗೂ 01ನೇ ಜೂನ್ –2025 ರವರೆಗೆ ಮರು ನಿಗದಿಪಡಿಸಲಾಗಿದೆ ಮತ್ತು ಆನ್ ಲೈನ್ ಮೂಲಕ ಸ್ವಯಂ ಘೋಷಣೆ–ದಿನಾಂಕ: 01–06–2025 ರವರೆಗೆ ಮುಂದುವರೆಯಲಿದೆ ಎಂದು ಏಕ ಸದಸ್ಯ ಆಯೋಗದ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

2025–26ನೇ ಸಾಲಿನ ಮುಂಗಾರು ಬಿತ್ತನೆ ಬೀಜ ವಿತರಣೆಗೆ ಚಾಲನೆ

# ಬಿತ್ತನೆ ಬೀಜ ಕೊರತೆ ಆಗದಂತೆ ಕ್ರಮಕೈಗೊಳ್ಳಿ : ಶಾಸಕ ಬೆಲ್ದಾಳೆ



ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:– ತಾಲ್ಲೂಕಿನ 9 ಗ್ರಾಮ ಪಂಚಾಯತ ವ್ಯಾಪ್ತಿಯ ರೈತರಿಗೆ ಬಿತ್ತನೆ ಬೀಜ ಹಾಗೂ ಗೊಬ್ಬರ ಕೊರತೆ ಆಗದಂತೆ ಕೃಷಿ ಇಲಾಖೆ ಕ್ರಮ ಕೈಗೊಳ್ಳಬೇಕು ಎಂದು ಶಾಸಕ ಡಾ. ಶೈಲೇಂದ್ರ ಬೆಲ್ದಾಳೆ ಹೇಳಿದರು. ತಾಲೂಕಿನ ಬೇಮಳಖೇಡಾ ಗ್ರಾಮದಲ್ಲಿ ರೈತ ಸಂಪರ್ಕ ಕೇಂದ್ರದ ವತಿಯಿಂದ ಗ್ರಾಮ ಪಂಚಾಯತ ಆವರಣದಲ್ಲಿ ನಡೆದ 2025–26ನೇ ಸಾಲಿನ ಮುಂಗಾರು ಹಂಗಾಮಿನ ಬಿತ್ತನೆ ಬೀಜ ವಿತರಣೆ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು. ಮುಂಗಾರು ಹಂಗಾಮು ಪ್ರಾರಂಭವಾಗಿದ್ದು, ಬಿತ್ತನೆ ಕಾರ್ಯ ಚುರುಕುಗೊಳ್ಳುವ ಮುನ್ನ . ಕೃಷಿ ಇಲಾಖೆಯಲ್ಲಿ ರಿಯಾಯಿತಿ ದರದಲ್ಲಿ ಸೋಯಾಬಿನ್, ತೆ–ೂಗರಿ, ಹೆಸರು ಗೊಬ್ಬರ ಬಿತ್ತನೆ ಬೀಜಗಳು ದೊರೆಯುತ್ತಿದ್ದು, ರೈತರು ಇದರ ಸದುಪಯೋಗ ಪಡೆದುಕೊಳ್ಳಬೇಕು' ಎಂದು ತಿಳಿಸಿದರು. ಕೃಷಿ ಇಲಾಖೆ ರೈತ ಸಂಪರ್ಕ ಕೇಂದ್ರಗಳಲ್ಲಿ ರೈತರು ಆದ್ಯತೆ ಮೇರೆಗೆ ಬಿತ್ತನೆ ಬೀಜ ಖರೀದಿಸುವುದು ಉತ್ತಮ. ಬಿತ್ತನೆ ಬೀಜ ಖರೀದಿಸಿ ರಸೀದಿಯನ್ನು ಜೋಪಾನವಾಗಿ ಇಟ್ಟುಕೊಳ್ಳಬೇಕು. ರಸೀದಿಯಲ್ಲಿ ಲಾಟ್ ಸಂಖ್ಯೆ ಹಾಗೂ ಮಾರಾಟ ದರದ ವಿವರ ನಮೂದಿಸಿರುವುದನ್ನು ಖಾತರಿ ಪಡಿಸಿಕೊಳ್ಳಬೇಕು ಕಳಪೆ ಗುಣಮಟ್ಟದ ಬೀಜ ವಿತರಣೆಯಾದರೆ ಅಧಿಕಾರಿಗಳಿಗೆ ಪ್ರಶ್ನಿಸಬಹುದು ಖಾಸಗಿ ವ್ಯಕ್ತಿಗಳು ಕಡಿಮೆ ದರದಲ್ಲಿ ಬೀಜ ವಿತರಣೆ ಮಾಡಲಾಗುವುದು ಎಂದು ಬಂದರೆ ಅಂತವರ ಮಾತಿಗೆ ಮರುಳಾಗಬೇಡಿ ಸರ್ಕಾರದಿಂದ ನೀಡುತ್ತಿರುವ ಬಿತ್ತನೆ ಬೀಜ ಖರೀದಿಸಿ. ವಿತರಣೆ ಕೇಂದ್ರದಲ್ಲಿ ನಿಗದಿತ ದರಕ್ಕಿಂತ ಹೆಚ್ಚಿನ ದರಕ್ಕೆ ಬಿತ್ತನೆ ಬೀಜಗಳನ್ನು ಮಾರಾಟ ಮಾಡಬಾರದು ಇಂತಹದ್ದು ಕಂಡುಬಂದರೆ ತಕ್ಷಣ ಕ್ರಮ ಕೈಗೊಳ್ಳಲಾಗುವುದು ಕೇಂದ್ರದೊಂದಿಗೆ ಉಪ ಕೇಂದ್ರಗಳಲ್ಲೂ ಬಿತ್ತನೆ ಬೀಜ ವಿತರಣೆ ಮಾಡಲಾಗುವುದು ರೈತರು ಹೆದರುವ ಅವಶ್ಯಕತೆ ಇಲ್ಲ ಎಂದು ತಿಳಿಸಿದರು. ರೈತರು ಶಾಂತಿಯುತವಾಗಿ ಬಿತ್ತನೆ ಬೀಜ ಪಡೆಯಬೇಕು ಬೇಡಿಕೆಗೆ ಅನುಗುಣವಾಗಿ ಬೀಜ ವಿತರಣೆ ಮಾಡಲಾಗುವುದು ರೈತರು ಉತ್ತಮವಾಗಿ ಬೆಳೆ ಬೆಳೆದರೆ ಮಾತ್ರ ಸಮಾಜದಲ್ಲಿ ಜನರು ಉತ್ತಮ ಜೀವನ ನಡೆಸಲು ಸಾಧ್ಯ ಅದಕ್ಕೆ ನಮ್ಮ ಭಾರತ ದೇಶದಲ್ಲಿ ರೈತ ದೇವೋಭವ ಸರ್ವೇ ಜನ ಸುಖಿನೋ ಭವಂತು ಎನ್ನುತ್ತಾರೆ. ತುತ್ತು ಅನ್ನ ತಿನ್ನುವ ಮೊದಲು ರೈತನ ನೆನೆಯಬೇಕು. ನಾವಿವತ್ತು ತುತ್ತು ಅನ್ನ ತಿನ್ನೋ ಮೊದಲು ನಿಸ್ವಾರ್ಥ ಜೀವ ರೈತನನ್ನೇ ನೆನೆಯಲೇಬೇಕು. ಅನ್ನದಾತನ ಕೈ ಕೆಸರಾದ್ರೆ ಮಾತ್ರ ನಮ್ಮ ಬಾಯಿ ಮೊಸರಾಗೋಕೆ ಸಾಧ್ಯ ಎಂದರು. ಕೃಷಿಯಲ್ಲಿ ಮಾತ್ರವಲ್ಲ ಯಾವುದೇ ಕ್ಷೇತ್ರದಲ್ಲೂ ಏರಿಳಿತ ಇದ್ದೇ ಇರುತ್ತೆ. ಕಷ್ಟ–ಸುಖ, ಸಮಸ್ಯೆ, ಸವಾಲುಗಳು ಇರುತ್ತವೆ. ನಾವು ಆ ಸವಾಲುಗಳನ್ನ ಎಷ್ಟು ಬುದ್ಧಿವಂತಿಕೆಯಿಂದ ಆ ಸವಾಲುಗಳನ್ನ ಸ್ವೀಕಾರ ಮಾಡುತ್ತೇವೆ. ಎಷ್ಟು ಬುದ್ಧಿವಂತಿಕೆಯಿಂದ ಆ ಸವಾಲುಗಳನ್ನ ಬಗೆಹರಿಸುವ ಪ್ರಯತ್ನ ಮಾಡುತ್ತೇವೆ ಅದರ ಮೇಲೆ ಸಕ್ಸಸ್ ಇರುತ್ತೆ. ರೈತರು ಸಹ ಸವಾಲುಗಳನ್ನ ಪಾಸಿಟಿವ್ ಆಗಿ ಬಗೆಹರಿಸೋ ಪ್ರಯತ್ನ ಮಾಡಿದ್ರೆ ಮಾತ್ರ ಯಶಸ್ಸು ಸಿಗುತ್ತದೆ. ಒಬ್ಬ ಕೃಷಿಕ ಸಕ್ಸಸ್ ಆದ್ರೆ ಕೇವಲ ಅವರ ಕುಟುಂಬ ಮಾತ್ರ ಸಕ್ಸಸ್ ಆಗಲ್ಲ. ಅದರ ಹಿಂದೆ ಕನಿಷ್ಠ 10 ರಿಂದ 50 ಜನರ ಬದುಕು ಹಸನವಾಗುತ್ತದೆ ಕೆಲವರು ರೈತರು ಆತ್ಮಹತ್ಯೆ ಮಾಡಿಕೊಳ್ಳುತ್ತಿದ್ದಾರೆ ಇಂತಹ ನಿರ್ಧಾರ ನೋವಿನ ಸಂಗತಿ ಯಾರು ದುಡುಕಬಾರದು ಎಂದು ಮನವಿ ಮಾಡಿದರು. ರೈತ ಸಂವೃದ್ಧಿಯಿಂದ ಇದ್ರೆ ಎಲ್ಲರೂ ಸಂವೃದ್ಧಿಯಾಗಿರುತ್ತೆ ಎಂದರು. ಈ ಸಂದರ್ಭದಲ್ಲಿ ಕೃಷಿ ಇಲಾಖೆ ಸಹಾಯಕ ನಿರ್ದೇಶಕ ಶರಣಕುಮಾರ, ಗ್ರಾಪಂ ಅಧ್ಯಕ್ಷ ಮಂಜುನಾಥ ಸುಣಗಾರ, ಪಿಕೆಪಿಎಸ್ ಅಧ್ಯಕ್ಷ ಬಸವರಾಜ ಚಟ್ನಳ್ಳಿ, ಪಿಕೆಪಿಎಸ್ ಉಪಾಧ್ಯಕ್ಷ ಶಿವಕುಮಾರ, ಉಡಮನಳ್ಳಿ ಪಿಕೆಪಿಎಸ್ ಅಧ್ಯಕ್ಷ ಅಶೋಕ ರೆಡ್ಡಿ, ಪಿಡಿಒ ಸುಶಾಂತಕುಮಾರ್, ಕೃಷಿ ಅಧಿಕಾರಿ ಭುವನೇಶ್ವರಿ, ಮುಖಂಡರಾದ ವೀರಶೆಟ್ಟಿ ಬಸಲಾಪುರ, ಲಾಲಪ್ಪ ಪೋಲಕಪಳ್ಳಿ, ಶಣ್ಮುಕಪ್ಪ ಕಾರಕಾಂಪಳ್ಳಿ, ಸೇರಿದಂತೆ ಗ್ರಾಪಂ ಸದಸ್ಯರು, ಪಿಕೆಪಿಎಸ್ ಸದಸ್ಯರು ಹಾಗೂ ರೈತರು ಉಪಸ್ಥಿತರಿದ್ದರು.

# ನೇರ ಸಂದರ್ಶನಕ್ಕೆ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಮೇ 27 : ಯಾದಗಿರಿ ಜಿಲ್ಲಾ ಉದ್ಯೋಗ ವಿನಿಮಯ ಕಛೇರಿ ವತಿಯಿಂದ 2025ರ ಮೇ 31ರ ಶನಿವಾರ ರಂದು ಬೆಳಿಗ್ಗೆ 10 ರಿಂದ ಮಧ್ಯಾಹ್ನ 1 ಗಂಟೆಯ ವರೆಗೆ ಚೈತನ್ಯ ಇಂಡಿಯಾ ಫೀನ್ ಕ್ರೇಡಿಟ್ ಪ್ರೈ.ಲಿ ಯಾದಗಿರಿದಲ್ಲಿ ನೇರ ಸಂದರ್ಶನವನ್ನು ಆಯೋಜಿಸಲಾಗಿದೆ ಎಂದು ಉದ್ಯೋಗಾಧಿಕಾರಿ ಬಸವರಾಜ ಅವರು ತಿಳಿಸಿದ್ದಾರೆ.

ಯಾದಗಿರಿ ಸ್ವತಂತ್ರ ಫೀಲ್ಡ್ ಆಫೀಸರ್ 50 ಹುದ್ದೆಗಳು ಖಾಲಿ ಇದ್ದು, ಹುದ್ದೆಗೆ ಅರ್ಹತೆ 10ನೇ, ಪಿ.ಯು.ಸಿ ಪಾಸ್ ಹೊಂದಿರಬೇಕು, ಯಾದಗಿರಿ, ಶಹಾಪೂರ, ಸುರಪುರ, ಗುರುಮಠಕಲ್, ಸೈದಾಪೂರ, ಕೆಂಭಾವಿ, ಜೇವರ್ಗಿ, ಯಡ್ರಾಮಿ, ಹುಣಸಗಿ, ದೇವದುರ್ಗ, ಉದ್ಯೋಗ ಸ್ಥಳವಾಗಿದೆ, ಪುರುಷ ಮತ್ತು ಮಹಿಳಾ ಅಭ್ಯರ್ಥಿಗಳು ಭಾಗವಹಿಸಬೇಕು, ಇ.ಎಸ್.ಐ, ಪಿ.ಎಫ್, ಮತ್ತು ಉಚಿತ ವಸತಿ ಸೌಲಭ್ಯ ಲಭ್ಯ ಬೈಕ್ ಮತ್ತು ಡಿ.ಎಲ್ ಹೊಂದಿದವರಿಗೆ ಮೊದಲ ಆಧ್ಯತೆ ಮೇಲಿನ ಹುದ್ದೆಗಳಿಗೆ 18 ರಿಂದ 28 ವರ್ಷ ಒಳಗಿರಬೇಕು, ನಿರುದ್ಯೋಗಿ ಅಭ್ಯರ್ಥಿಗಳು ನೇರ ಸಂದರ್ಶನಕ್ಕೆ ಹಾಜರಾಗಲು ತಿಳಿಸಿದೆ. ಈ ನೇರ ಸಂದರ್ಶನಕ್ಕೆ ಬರುವ ಅಭ್ಯರ್ಥಿಗಳು ತಮ್ಮ ದಾಖಲಾತಿಗಳೊಂದಿಗೆ ವ್ಯಕ್ತಿ ಪರಿಚಯ ರಿಸ್ಯೂಮ್, ಬಯೋಡಾಟಾದೊಂದಿಗೆ ನೇರ ಸಂದರ್ಶನಕ್ಕೆ ಹಾಜರಾಗಲು ತಿಳಿಸಿದೆ. ಹಾಗೂ ನೇರ ಸಂದರ್ಶನಕ್ಕೆ ಹಾಜರಾದ ಅಭ್ಯರ್ಥಿಗಳಿಗೆ ಯಾವುದೇ ತರಹದ ಭತ್ಯೆ ನೀಡಲಾಗುವುದಿಲ್ಲ.

ಹೆಚ್ಚಿನ ಮಾಹಿತಿಗಾಗಿ ನೇರ ಸಂದರ್ಶನಕ್ಕೆ ನಡೆಯಲಿರುವ ಸ್ಥಳ ಚಿತ್ತಾಪೂರ ರಸ್ತೆ (ಮಿನಿ ವಿಧಾನಸೌಧ) ಜಿಲ್ಲಾಡಳಿತ ಭವನ, ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ ಬಿ–ಬ್ಲಾಕ್ ರೂ.ನಂ.ಬಿ1, ಬಿ2, 2ನೇ ಮಹಡಿ ಯಾದಗಿರಿ ದೂ.ಸಂ.08473, 253718, ಮೊ.ನಂ.9448566765, 8050970267ಗೆ ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಿಶ್ವದಲ್ಲಿ ಏಕತೆ ಮತ್ತು ವಿಶ್ವಾಸ ಸಾಧಿಸಲು ಧ್ಯಾನವೊಂದೇ ಏಕೈಕ ಮಾರ್ಗ: ಸುದೇಶ್ ದಿದಿಜಿ ಕರೆ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಅಧ್ಯಾತ್ಮ ಜ್ಞಾನ ಮತ್ತು ಧ್ಯಾನದಿಂದಲೇ ವಿಶ್ವದಲ್ಲಿ ಏಕತೆ, ಶಾಂತಿ, ಪರಸ್ಪರರಲ್ಲಿ ವಿಶ್ವಾಸ ಮೂಡಲು ಸಾಧ್ಯ ಎಂದು ಸುದೇಶ್ ದೀದಿಜಿ ಕರೆ ನೀಡಿದರು.

ಒತ್ತಡ ಮುಕ್ತ ಜೀವನಕ್ಕಾಗಿ ರಾಜಯೋಗ ಧ್ಯಾನ ಪ್ರೇರಣಾದಾಯಿ ಸಂದೇಶ ಹಾಗೂ ವಿಶ್ವ ಏಕತೆ ಮತ್ತು ವಿಶ್ವಾಸಕ್ಕಾಗಿ ಧ್ಯಾನ ಕಾರ್ಯಕ್ರಮ ಬ್ರಹ್ಮಕುಮಾರಿ ಸಭಾಭವನದಲ್ಲಿ ಅತ್ಯಂತ ವಿಜೃಂಭಣೆಯಿಂದ ನೆರವೇರಿತು. ಕಾರ್ಯಕ್ರಮವನ್ನು ಪೂಜ್ಯನೀಯ ರಾಜಯೋಗಿನಿ ಬಿಕೆ ಸುದೇಶ್ ದೀದಿಜಿ ಸಹ ಮುಖ್ಯ ಆಡಳಿತಾಧಿಕಾರಿಣಿ ಬ್ರಹ್ಮಕುಮಾರೀಸ್ ಅಬು ಪರ್ವತ ಇವರು ಉದ್ಘಾಟಿಸಿದರು. ವಸುಧೈವ ಕುಟುಂಬಕಂ ಜಗತ್ತೇ ಒಂದು ಕುಟುಂಬ ಎಂಬ ಪ್ರಾಚೀನ ಭಾರತೀಯ ಆದರ್ಶದಿಂದ ಪ್ರೇರಿತರಾಗಿ ಬ್ರಹ್ಮಕುಮಾರಿ ಸಂಸ್ಥೆ ವರ್ತಮಾನ ಸಮಯದಲ್ಲಿ ಜಗತ್ತಿಗೆ ಬೇಕಾಗಿರುವುದು ವಿಶ್ವದಲ್ಲಿ ಏಕತೆ ಮತ್ತು ವಿಶ್ವಾಸ ಇದನ್ನು ಸಾಧಿಸಲು ಧ್ಯಾನವೊಂದೇ ಏಕೈಕ ಮಾರ್ಗ ಎಂದರು. ಜಾಗತಿಕ ಮಟ್ಟದಲ್ಲಿ ಏಕತೆ ಮತ್ತು ಪರಸ್ಪರರಲ್ಲಿ ವಿಶ್ವಾಸ ಜಾಗೃತವಾಗಲು ವ್ಯಕ್ತಿಯ ಆಂತರಿಕ ಪರಿವರ್ತನೆ ಬಹಳ ಮುಖ್ಯ ವಿಚಾರಗಳ ಪರಿವರ್ತನೆ ಅತ್ಯಗತ್ಯ ಈ ಶರೀರ ವಿನಾಶಿ ಈ ಶರೀರದೊಳಗಿರುವ ಆತ್ಮ ಅವಿನಾಶಿ ನಾವೆಲ್ಲ ಆತ್ಮ ಜ್ಯೋತಿಗಳು ಯಾವ ಜಾತಿ ವರ್ಣ, ಲಿಂಗ, ಪ್ರಾಂತ್ಯ, ಭೇದವಿಲ್ಲದೆ ನಾವೆಲ್ಲ ಆತ್ಮ ಜ್ಯೋತಿಗಳು ಪರಮಾತ್ಮನ ಮಕ್ಕಳು ವಿಶ್ವ ಪಿತನ ಸಂತಾನರು ಎಂಬ ಅರಿವು ಆತ್ಮ ಜಾಗೃತಿ ಆದಾಗ ವಿಶ್ವದಲ್ಲಿ ಪರಸ್ಪರರಲ್ಲಿರುವ ದ್ವೇಷ ಈರ್ಷೆ ಅಸೂಯೆ ಭಾವನೆಗಳು ದೂರವಾಗಿ ಪರಸ್ಪರರಲ್ಲಿ ಸ್ನೇಹ, ಪ್ರೀತಿ, ಸದ್ಭಾವನೆ ಸೋದರತ್ವದ ಭಾವನೆ ಮೂಡಿ ವಿಶ್ವದಲ್ಲಿ ಏಕತೆ ಮತ್ತು ವಿಶ್ವಾಸ ಸ್ಥಾಪನೆಯಾಗುತ್ತದೆ ಎಂದರು.

ದಿವ್ಯ ಸಾನಿಧ್ಯವನ್ನು ವಹಿಸಿದ ರಾಜಯೋಗಿ ಡಾ. ಬಿ.ಕೆ ಬಸವರಾಜ್ ರಾಜಋಷಿಗಳು ಈಶ್ವರೀಯ ವಿಶ್ವ ವಿದ್ಯಾಲಯದ ಹುಬ್ಬಳ್ಳಿ ವಲಯದ ನಿರ್ದೇಶಕರು ಇವರು ಮಾತನಾಡುತ್ತಾ ವರ್ತಮಾನ ಸಮಯದಲ್ಲಿ ಜಗತ್ತಿನಾದ್ಯಂತ ವ್ಯಕ್ತಿ ವ್ಯಕ್ತಿಗಳಲ್ಲಿ ದೇಶ ದೇಶಗಳಲ್ಲಿ ಮಾತ್ರವಲ್ಲ ಒಂದು ಮನೆಯಲ್ಲಿ ಏಕತೆ ಇಲ್ಲ ಪರಸ್ಪರ ಅಪನಂಬಿಕೆ ಸ್ವಾರ್ಥ ಮದ ಮತ್ಸರ ದಿನೇ ದಿನೇ ವೃದ್ಧಿ ಆಗುತ್ತಿದೆ.

ಇಂತಹ ಪ್ರಕ್ಷುಬ್ಧ ವಾತಾವರಣದಲ್ಲಿ ವಿಶ್ವದಲ್ಲಿ ಬೇಕಾಗಿರುವುದು ಶಾಂತಿ, ಏಕತೆ ವಿಶ್ವಾಸ ಇದು ಜಗತ್ತಿನಲ್ಲಿ ಸ್ಥಾಪನೆ ಆಧ್ಯಾತ್ಮ ಶಿಕ್ಷಣದಿಂದ ಮತ್ತು ಧ್ಯಾನದಿಂದ ಮಾತ್ರ ಸಾಧ್ಯ ಎಂದರು. ವ್ಯಕ್ತಿಯ ಸಂಸ್ಕಾರ ಪರಿವರ್ತನೆಯಿಂದಲೇ ವಿಶ್ವ ಪರಿವರ್ತನೆ ಸಾಧ್ಯ ಸಂಸ್ಕಾರ ಪರಿವರ್ತನೆಗೆ ಈಶ್ವರೀಯ ವಿಶ್ವ ವಿದ್ಯಾಲಯ ಆಧ್ಯಾತ್ಮ ಶಿಕ್ಷಣ ನೀಡುತ್ತಿದೆ ಎಂದರು.

ಮಾನ್ಯ ಸಂಸದರಾದ ರಾಜಶೇಖರ ಹಿಟ್ನಾಳ್ ಮಾತನಾಡುತ್ತಾ ಜಗತ್ತಿನ ವಾತಾವರಣ ನೋಡಿದಾಗ ಮನುಷ್ಯ ಶಾಂತಿ ನೆಮ್ಮದಿಯನ್ನು ಪಡೆಯುವ ಸ್ಥಾನವನ್ನು ಹುಡುಕುವ ಪರಿಸ್ಥಿತಿ ಬಂದಿದೆ ಈ ನಿಟ್ಟಿನಲ್ಲಿ ಈಶ್ವರಿಯ ವಿಶ್ವವಿದ್ಯಾಲಯ ಜಗತ್ತಿನಾದ್ಯಂತ 140 ದೇಶಗಳಲ್ಲಿ ಸುಖ ಶಾಂತಿ ಪಡೆಯುವ ಸಹಜ ಮಾರ್ಗವನ್ನು ತೋರಿಸುವ ಇದರ ಸೇವೆ ಶ್ಲಾಘನೀಯ ಎಂದರು.

ಮಾನ್ಯ ವಿಧಾನ ಪರಿಷತ್ ಸದಸ್ಯರಾದ ಹೇಮಲತಾ ನಾಯಕ್ ಮಾತನಾಡಿ ಮನುಷ್ಯನಿಗೆ ಹಣ, ಆಸ್ತಿ, ಅಂತಸ್ತು, ಸ್ಥಾನ, ಅಧಿಕಾರ ಎಷ್ಟು ಮುಖ್ಯವೋ ಜೀವನದಲ್ಲಿ ಶಾಂತಿ ನೆಮ್ಮದಿಯು ಅಷ್ಟೇ ಮುಖ್ಯ ಎಂದರು.

ದಿನಾಂಕ 25/05/25 ರಿಂದ 31/5/25ರ ವರೆಗೆ ಒತ್ತಡ ಮುಕ್ತತೆಗಾಗಿ ರಾಜಯೋಗ ಮೆಡಿಟೇಶನ್ ತರಬೇತಿ ಕಾರ್ಯಕ್ರಮ ಬ್ರಹ್ಮಕುಮಾರೀಸ್ ಸಭಾಭವನದಲ್ಲಿ ಏರ್ಪಡಿಸಲಾಗಿದೆ ಸಾರ್ವಜನಿಕರು ಇದರ ಲಾಭ ಪಡೆಯಬೇಕೆಂದು ಯೋಗಿನಿ ಅಕ್ಕ ತಿಳಿಸಿದರು.

ಅಪರ ಜಿಲ್ಲಾಧಿಕಾರಿ ಸಿದ್ರಾಮೇಶ್ವರ ಮಾತನಾಡುತ್ತಾ ಮನುಷ್ಯನಿಗೆ ಎಲ್ಲಾ ತಿಳುವಳಿಕೆ ಇದೆ ಆದರೆ ಅದನ್ನು ಜೀವನದಲ್ಲಿ ಅಳವಡಿಸಿಕೊಳ್ಳಲು ಶಕ್ತಿ ಬೇಕು ಅದು ಧ್ಯಾನದಿಂದ ಮಾತ್ರ ಸಿಗುತ್ತದೆ ಎಂದು ತಿಳಿಸಿದರು.

ಜಿಲ್ಲಾ ಪಂಚಾಯಿತ ಉಪ ನಿರ್ದೇಶಕರಾದ ಮಲ್ಲಿಕಾರ್ಜುನ ತೊದಲಭಾಗಿ ಮಾತನಾಡುತ್ತ ಶ್ರೇಷ್ಠ ಸಂಕಲ್ಪ ಶಕ್ತಿ ಮಹಾನ ಕಾರ್ಯವನ್ನು ನಮ್ಮಿಂದ ಮಾಡಿಸುತ್ತದೆ ನಮ್ಮ ಸಂಕಲ್ಪಗಳು ಸಕಾರಾತ್ಮಕತೆಯ ಕಡೆಗೆ ಸಾಗಬೇಕು ಎಂದರು. ಬಿಕೆ ಜಯಂತಿ ಅಕ್ಕನವರು ಪ್ರಾಯೋಗಿಕ ಧ್ಯಾನ ಮಾಡಿಸಿದರು ವೇದಿಕೆ ಮೇಲೆ ತಹಶೀಲ್ದಾರ ವಿಠಲ ಚೌಗುಲೆ, ಸಿವಿ ಚಂದ್ರಶೇಖರ, ಉಪಸ್ಥಿತರಿದ್ದರು. ಬಿಕೆ ರಶ್ಮಿ ಅಕ್ಕ ಕಾರ್ಯಕ್ರಮ ನಿರೂಪಿಸಿದರು.

# ಪದ್ಮ ಶ್ರೇಣಿಯ ಪ್ರಶಸ್ತಿಗಳಿಗೆ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಮೇ 27 : 2026ನೇ ಪದ್ಮ ಶ್ರೇಣಿಯ ಪ್ರಶಸ್ತಿಗಳಿಗೆ ಅರ್ಜಿ ಆಹ್ವಾನಿಸಲಾಗಿದೆ ಎಂದು ಯಾದಗಿರಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕಿ ಉತ್ತರಾದೇವಿ ಮಠಪತಿ ಅವರು ತಿಳಿಸಿದ್ದಾರೆ. ಸಮಾಜದ ಯಾವುದೇ ಕ್ಷೇತ್ರದಲ್ಲಿ ಅತ್ಯುತ್ತಮ ಸೇವೆ ಸಲ್ಲಿಸಿರುವ ವ್ಯಕ್ತಿಗಳಿಗೆ 2026ನೇ ಸಾಲಿನ ಪದ್ಮಶ್ರೇಣಿಯ ಪ್ರಶಸ್ತಿಗಳಾದ ಪದ್ಮವಿಭೂಷಣ, ಪದ್ಮಭೂಷಣ ಮತ್ತು ಪದ್ಮಶ್ರೀ ಪ್ರಶಸ್ತಿಗಳನ್ನು ಗಣರಾಜ್ಯೋತ್ಸವದ ಹಿಂದಿನ ದಿನದಂದು ಕೇಂದ್ರಸರ್ಕಾರದಿಂದ ಪ್ರಕಟಿಸಲಾಗುವುದು. ಕ್ಷೇತ್ರಗಳಲ್ಲಿ ಶ್ರೇಷ್ಠತೆಗೊಳಿಸಿ ಅಸಾಧರಣ ಕೊಡುಗೆ ನೀಡಿರುವ ವ್ಯಕ್ತಿಗಳಿಗೆ ಪ್ರಶಸ್ತಿಯನ್ನು ನೀಡಲಾಗುತ್ತದೆ, ಕಲೆ, ಜನಪ್ರಿಯ ಕಲೆ, ಸಂಗೀತ, ಚಿತ್ರಕಲೆ, ವಾಸ್ತುಶಿಲ್ಪಾ, ಶಿಲ್ಪಕಲೆ, ಚಲನ ಚಿತ್ರ, ಛಾಯಾಗ್ರಹಣ ಮತ್ತಿತರ, ಸಮಾಜ ಕಾರ್ಯ, ಸಮಾಜ ಸೇವೆ, ಧರ್ಮಾರ್ಥ ಸೇವೆ, ಸಮುದಾಯ ಯೋಜನೆಯ ನಿಮಿತ್ತದ ಕೊಡುಗೆ ಒಳಗೊಂಡಂತೆ, ಸಾರ್ವಜನಿಕ ವ್ಯವಹಾರ, ಕಾನೂನು ಮತ್ತು ಸಾರ್ವಜನಿಕ ಜೀವನ, ರಾಜಕೀಯ ಇತ್ಯಾದಿ, ವಿಜ್ಞಾನ ತಾಂತ್ರಿಕ, ತಂತ್ರಜ್ಞಾನ ಮತ್ತು ಇತರೆ ಗೌರವಾನ್ವಿತ ವೃತ್ತಿ, ಬಾಹ್ಯಾಕಾಶ, ಇಂಜಿನೀಯರಿಂಗ್, ಅಣುವಿಜ್ಞಾನ, ಮಾಹಿತಿ ತಂತ್ರಾಜ್ಞಾನ, ಸಂಶೋದನೆ ಇತ್ಯಾದಿ, ವ್ಯಾಪರ ಮತ್ತು ಕೈಗಾರಿಕೆ, ಬ್ಯಾಂಕಿಂಗ್ ಆರ್ಥಿಕ ಚಟುವಟಿಕೆ, ಮ್ಯಾನೇಜಮೆಂಟ್, ಪ್ರವಾಸೋದ್ಯಮ ಅಭಿವೃದ್ಧಿ ಮತ್ತು ವಾಣಿಜ್ಯ ಒಳಗೊಂಡಂತೆ.

ವೈದ್ಯಕೀಯ ಸಂಶೋದನೆ, ಆಯುರ್ವೇದದಲ್ಲಿ ಕುಶಲತೆ, ಹೋಮಿಯೋಪತಿ, ಸಿದ್ಧ, ಅಲೋಪತಿ, ನ್ಯಾಚುರೋಪತಿ ಇತ್ಯಾದಿ. ಸಾಹಿತ್ಯ ಮತ್ತು ಶಿಕ್ಷಣ ಪತ್ರಿಕೋದ್ಯಮ, ಭೋಚನೆ, ಪುಸ್ತಕ ಬರೆಯುವಿಕೆ, ಸಾಹಿತ್ಯ, ವೈದ್ಯ, ಶಿಕ್ಷಣ, ಅಭಿವೃದ್ಧಿ, ಶಿಕ್ಷಣ ಸುಧಾರಣೆ ಇತ್ಯಾದಿ. ನಾಗರೀಕ ಸೇವೆ, ಆಡಳಿತದಲ್ಲಿ ಸರ್ಕಾರಿ ನೌಕರರು ಸಾಧಿಸಿರುವ ಶ್ರೇಷ್ಠತೆ. ಕ್ರೀಡೆ, ಅಥ್ಲೆಟಿಕ್ಸ್ ಸಾಹಸ ಕ್ರೀಡೆ ಮತ್ತು ಯೋಗ, ಇತರೆ ಕ್ಷೇತ್ರಗಳು ಮಾನವ ಹಕ್ಕುಗಳ ಭಾರತದ ಸಂಸ್ಕೃತಿಯ ಪ್ರಚಾರ, ಪರಿಸರ ಸಂರಕ್ಷಣೆ ಮತ್ತು ವನ್ಯಮೃಗ ಸಂರಕ್ಷಣೆ ಒಳಗೊಂಡಂತೆ ಈ ಮೇಲೆ ಸೂಚಿಸಿರುವ ಕ್ಷೇತ್ರಗಳಲ್ಲಿ ನೀಡಬಹುದಾದ ಪದ್ಮಶ್ರೇಣಿಯ ಪ್ರಶಸ್ತಿಗಳಿಗೆ ಸಂಬಂಧಿಸಿ ಪ್ರಸ್ತಾವನೆಗಳನ್ನು 2025ರ ಮೇ 31ರ ಸಂಜೆ 5.30 ಗಂಟೆಯ ಒಳಗೆ ಲಗತ್ತಿಸಬೇಕು, ನಮೂನೆಯಲ್ಲಿ ವಿವರವಾದ ವರದಿಯನ್ನು ಸಾಫ್ಟ್ ಪ್ರತಿಯನ್ನು ಇ–ಮೇಲ್ dkc.yadagiri@gmail.com ನಲ್ಲಿ ಮತ್ತು ಹಾರ್ಡ್ ಪ್ರತಿಯನ್ನು ಸಹಾಯಕ ನಿರ್ದೇಶಕರು ಕಛೇರಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಜಿಲ್ಲಾಡಳಿತ ಭವನ, ಯಾದಗಿರಿ ಇಲ್ಲಿಗೆ ಸಲ್ಲಿಸಬೇಕು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಶಾಂತಿಯುತವಾಗಿ ಜರುಗಿದ ಎಸ್ಎಸ್ಎಲ್ಸಿ ಪೂರಕ ಪರೀಕ್ಷೆ : ಬಿಇ ಓ ಸೋಮಶೇಖರ ಗೌಡ

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ರಾಜ್ಯಾದ್ಯಂತ ಎಸ್ ಎಸ್ ಎಲ್ ಸಿ ಪೂರಕ ಪರೀಕ್ಷೆಯ ಪ್ರಥಮ ಭಾಷೆ ಕನ್ನಡ ವಿಷಯದ ಪರೀಕ್ಷೆ ಸೋಮವಾರ ಜರುಗಿದ್ದು ಶಾಂತಿತವಾಗಿ ಪರೀಕ್ಷಾ ಕಾರ್ಯ ಮುಗಿದಿರುತ್ತದೆ ಎಂದು ಕುಕನೂರು ಯಲಬುರ್ಗಾ ಕ್ಷೇತ್ರ ಶಿಕ್ಷಣಾಧಿಕಾರಿ ಸೋಮಶೇಖರಗೌಡ ತಿಳಿಸಿರುತ್ತಾರೆ.

ಎಸ್ ಎಸ್ ಎಲ್ ಸಿ ಮುಖ್ಯ ಪರೀಕ್ಷೆಯಲ್ಲಿ ಅನುತ್ತೀರ್ಣಗೊಂಡ ವಿದ್ಯಾರ್ಥಿಗಳಿಗಾಗಿ ಇಲಾಖೆ ಎರಡು ಪೂರಕ ಪರೀಕ್ಷೆಗಳ ಅವಕಾಶವನ್ನು ನೀಡಿದ್ದು ಇಲಾಖೆಯ ಆದೇಶದಂತೆ ಪ್ರಥಮ ಪೂರಕ ಪರೀಕ್ಷೆ ಸೋಮವಾರ ಪ್ರಾರಂಭಗೊಂಡಿದ್ದು ಕುಕನೂರು ಯಲಬುರ್ಗಾ ತಾಲೂಕಿನಾದ್ಯಂತ 7 ಪರೀಕ್ಷಾ ಕೇಂದ್ರಗಳಲ್ಲಿ ಪರೀಕ್ಷೆಗಳು ಜರುಗಿದ್ದು ಏಳು ಪರೀಕ್ಷಾ ಕೇಂದ್ರಗಳಲ್ಲಿ ಪರೀಕ್ಷೆಗಳು ಜರುಗಿದ್ದು ತಾಲೂಕಿನ ಅತ್ಯಂತ ಒಟ್ಟು 1238 ವಿದ್ಯಾರ್ಥಿಗಳು ಅದರಲ್ಲಿ1032 ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗಿದ್ದು 206 ವಿದ್ಯಾರ್ಥಿಗಳು ಪರೀ–



ಕ್ಷೆಗೆ ಗೈರುಹಾಜರಾಗಿರುತ್ತಾರೆ ಎಂದು ಕ್ಷೇತ್ರ ಶಿಕ್ಷಣಾಧಿಕಾರಿ ಸೋಮಶೇಖರ ಗೌಡ ಪತ್ರಿಕಾ ಪ್ರಕಟಣೆಗೆ ತಿಳಿಸಿರುತ್ತಾರೆ

# ತಮ್ಮ ಮಕ್ಕಳ ಉತ್ತಮ ಭವಿಷ್ಯ ರೂಪಿಸಿ ಕೊಳ್ಳಲು ಸರ್ಕಾರಿ ಶಾಲೆಗೆ ಮಕ್ಕಳನ್ನು ದಾಖಲಿಸಿ : ಶಿವಮೂರ್ತಿ ದಳವಾಯಿ




ಮಲ್ಲಮ್ಮ ನುಡಿ ವಾರ್ತೆ

ಕುಕನೂರ : ಪಾಲಕರು ಕಾನ್ವೆಂಟ್ ವ್ಯಾಮೋಹದಿಂದ ಹೊರಬಂದು ತಮ್ಮ ಮಕ್ಕಳನ್ನು ಸುಸಜ್ಜಿತ ಮತ್ತು ಸೌಲಭ್ಯ ಹೊಂದಿರುವ ಸರಕಾರಿ ಶಾಲೆಗಳಿಗೆ ದಾಖಲಿಸಬೇಕು ಎಂದು ಎಸ್ ಡಿ ಎಂ ಸಿ ಅಧ್ಯಕ್ಷ ಶಿಕ್ಷಣ ಪ್ರೇಮಿ ಶಿವಮೂರ್ತಿ ದಳವಾಯಿ ಕರೆ ನೀಡಿದರು.

ಕುಕನೂರು ಪಟ್ಟಣದಲ್ಲಿ ಮಂಡಲಗಿರಿ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಅಧ್ಯಕ್ಷ ಶಿಕ್ಷಣ ಪ್ರೇಮಿ ಶಿವಮೂರ್ತಿ ದಳವಾಯಿ ವರದಿಗಾರರೊಂದಿಗೆ ಮಾತನಾಡುತ್ತಾ ಕಳೆದ ಹಲವು ವರ್ಷಗಳಿಂದ ಪಾಲಕರು ತಮ್ಮ ಮಕ್ಕಳನ್ನು ಖಾಸಗಿ ಶಾಲೆಗೆ ಪೈಪೋಟಿಯ ಮೇಲೆ ದಾಖಲು ಮಾಡುತ್ತಿದ್ದು ವಾಸ್ತವವಾಗಿ ಚಿಂತನೆ ನಡೆಸಿದರೆ ಸರ್ಕಾರಿ ಶಾಲೆಗಳು ಖಾಸಗಿ ಶಾಲೆಗಳಿಗಿಂತ ಬಹುತೇಕ ಪಾಲು ಉತ್ತಮವಾಗಿದ್ದು ಉಚಿತ ಶಿಕ್ಷಣದೊಂದಿಗೆ, ಪಠ್ಯಪುಸ್ತಕ, ಸಮವಸ್ತ್ರ, ಬಿಸಿಯೂಟ ಅದು ಇನ್ನಿತರ ಸೌಲಭ್ಯಗಳನ್ನು ಸರ್ಕಾರಿ ಶಾಲೆಗಳಲ್ಲಿ ನೀಡುತ್ತಿದ್ದು ಆದರೆ ಇದಕ್ಕೆ ತದ್ವಿರುದ್ಧವಾಗಿ ಖಾಸಗಿ ಶಾಲೆಗಳಲ್ಲಿ ಪ್ರತಿಯೊಂದು ಸೌಲಭ್ಯಗಳಿಗೂ ಹೆಚ್ಚಿನ ಹೋರೆಯನ್ನು ಪಾಲಕರ ಮೇಲೆ ಹಾಕುತ್ತಿದ್ದು ಜೊತೆಗೆ ಜೊತೆಗೆ ಅರ್ಹತೆ ಇಲ್ಲದ ಶಿಕ್ಷಕ ವರ್ಗವನ್ನು ಹೊಂದಿರುತ್ತಾರೆ ಆದರೆ ಸರ್ಕಾರಿ ಶಾಲೆಯಲ್ಲಿ ಉನ್ನತ ಪದವಿಯೊಂದಿಗೆ ಅತ್ಯುತ್ತಮ ಪರೀಕ್ಷೆಗಳಲ್ಲಿ ಸಾಮರ್ಥ್ಯ ಹೊಂದಿದ ಶಿಕ್ಷಕ ವರ್ಗವನ್ನು ಹೊಂದಿದ್ದು ತಮ್ಮ ಮಕ್ಕಳ ಭವಿಷ್ಯ ಉತ್ತಮವಾಗಿ ರೂಪಿಸಿ ಕೊಳ್ಳುವುದರಲ್ಲಿ ಯಾವುದೇ ಅನುಮಾನಗಳಿಲ್ಲ ಆದ್ದರಿಂದ ಉಚಿತವಾದ ಉತ್ತಮ ಗುಣಮಟ್ಟದ ಶಿಕ್ಷಣದೊಂದಿಗೆ ಹಲವು ಸೌಲಭ್ಯಗಳನ್ನು ಪಡೆಯುವ ನಿಟ್ಟಿನಲ್ಲಿ ಪಾಲಕರು ತಮ್ಮ ಮಕ್ಕಳನ್ನು ತಪ್ಪದೇ ಸರ್ಕಾರಿ ಶಾಲೆಗಳಿಗೆ ದಾಖಲು ಮಾಡಬೇಕೆಂದು ಹೇಳಿದರು.

ಮೇ 29 ರಿಂದ 2025–26ನೇ ಸಾಲಿನ ಶೈಕ್ಷಣಿಕ ಶಾಲಾ ತರಗತಿಗಳು ಪ್ರಾರಂಭಗೊಳ್ಳುತ್ತಿದ್ದು ವಿದ್ಯಾರ್ಥಿಗಳನ್ನು ಸಾಗತಿಸಲು ಈಗಾಗಲೇ ನಮ್ಮ ಶಾಲೆ ಶೃಂಗಾರಗೊಂಡಿದ್ದು ಮಕ್ಕಳನ್ನು ವಿಶೇಷ ಪ್ರೀತಿ ಹಾಗೂ ಕಾಳಜಿಯಿಂದ ಹೂ ಗೂಚ್ಚ ನೀಡಿ ಸಿಹಿ ವಿತರಣೆಯೊಂದಿಗೆ ಸ್ವಾಗತ ಮಾಡಿಕೊಳ್ಳಲಾಗುವುದು ಜೊತೆಗೆ ಶಾಲೆಯಲ್ಲಿ ಯಾವುದೇ ಖಾಸಗಿ ಶಾಲೆಗಳಿಗೆ ಕಡಿಮೆ ಇಲ್ಲದಂತೆ ಉತ್ತಮ ಗುಣಮಟ್ಟದ ಶಿಕ್ಷಣವನ್ನು ಒದಗಿಸಲಾಗುವುದು ಎಂದು ಹೇಳಿದರು.

ಗ್ರಾಮೀಣ ಪುನರ್ವಸತಿ ಕಾರ್ಯಕರ್ತರ ಸ್ಥಾನಕ್ಕೆ ಗೌರವ ಧನ

# ಆಧಾರದ ಮೇಲೆ ಕರ್ತವ್ಯ ನಿರ್ವಹಿಸಲು ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಮೇ 27 : ಯಾದಗಿರಿ ಜಿಲ್ಲೆಯ ಯಾದಗಿರಿ ತಾಲೂಕಿನ ಮೋಟ್ನಳ್ಳಿ ಗ್ರಾಮ ಪಂಚಾಯತ್ ಹಾಗೂ ಗುರುಮಠಕಲ್ ತಾಲೂಕಿನ ಅನಪುರ ಗ್ರಾಮ ಪಂಚಾಯತ್ ಕಛೇರಿಯಲ್ಲಿ ಗ್ರಾಮೀಣ ಪುನರ್ವಸತಿ ಯೋಜನೆಯಡಿ ಖಾಲಿ ಇರುವ ಗ್ರಾಮೀಣ ಪುನರ್ವಸತಿ ಕಾರ್ಯಕರ್ತರ ಸ್ಥಾನಕ್ಕೆ ಗೌರವ ಧನ ಆಧಾರದ ಮೇಲೆ ಕರ್ತವ್ಯ ನಿರ್ವಹಿಸಲು ಆಸಕ್ತಿಯುಳ್ಳ ವಿಕಲಚೇತನರಿಂದ ಅರ್ಜಿ ಆಹ್ವಾನಿಸಲಾಗಿದೆ ಎಂದು ಯಾದಗಿರಿ ಜಿಲ್ಲಾ ಅಂಗವಿಕಲರ ಮತ್ತು ಹಿರಿಯ ನಾಗರಿಕರ ಕಲ್ಯಾಣಾಧಿಕಾರಿ ಶರಣಪ್ಪ ಪಾಟೀಲ್ ಅವರು ತಿಳಿಸಿದ್ದಾರೆ.

ಯಾದಗಿರಿ ತಾಲೂಕಿನ ಮೋಟ್ನಳ್ಳಿ ಗ್ರಾಮ ಪಂಚಾಯತ್ ಹಾಗೂ ಗುರುಮಠಕಲ್ ತಾಲೂಕಿನ ಅನಪುರ ಗ್ರಾಮ ಪಂಚಾಯತ್‌ದಲ್ಲಿ ಖಾಲಿ ಇರುವ ಗ್ರಾಮೀಣ ಪುನರ್ವಸತಿ ಕಾರ್ಯಕರ್ತರ ಸ್ಥಾನಕ್ಕೆ ತಾತ್ಕಾಲಿಕ ಗೌರವ ಧನ ಆಧಾರದ ಮೇಲೆ ಕಾರ್ಯನಿರ್ವಸಲು ಸ್ಥಳೀಯ ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿ ವಾಸಿಸುತ್ತಿರುವ ಅರ್ಹ ವಿಕಲಚೇತನರಿಂದ ದಾಖಲಾತಿಗಳು ಎಸ್.ಎಸ್.ಎಲ್.ಸಿ ಅಂಕಪಟ್ಟಿ, ಶಾಲಾ ವರ್ಗಾವಣಾ ಪ್ರಮಾಣ ಪತ್ರ, ವಿಕಲಚೇತನ ಗುರುತಿನ ಪ್ರಮಾಣ ಪತ್ರ, ತಹಸೀಲ್ದಾರರಿಂದ ಪಡೆದ ವಾಸಸ್ಥಳ ಪ್ರಮಾಣ ಪತ್ರ, ಜಾತಿ ಮತ್ತು ಆದಾಯ ಪ್ರಮಾಣ ಪತ್ರ, 2 ಪೋಟೋ 2025ರ ಮೇ 31 ರಂದು ಸಂಜೆ 5.30 ಗಂಟೆಯ ಒಳಗೆ ಅರ್ಜಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಕೊಠಡಿ ಸಂಖ್ಯೆ ಬಿ11, ಬಿ12, ನೆಲಮಹಡಿ, ಜಿಲ್ಲಾಡಳಿತ ಭವನ, ಯಾದಗಿರಿ ಇಲ್ಲಿಗೆ ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಿವಿಧ ಬೇಡಿಕೆಗಳು ಈಡೇರಿಸುವಂತೆ ಒತ್ತಾಯ



ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ: ಪೌರ ನೌಕರರ ವಿವಿಧ ಬೇಡಿಕೆಗಳನ್ನು ಈಡೇರಿಕೆಗೆ ಒತ್ತಾಯಿಸಿ, ಪಟ್ಟಣದ ಪುರಸಭೆ ಕಚೇರಿ ಆವರಣದಲ್ಲಿ ಕರ್ನಾಟಕ ರಾಜ್ಯ ಪೌರ ನೌಕರರ ಸಂಘದ ವತಿಯಿಂದ ಮಂಗಳವಾರ ಅನಿರ್ದಿಷ್ಟ ಮುಷ್ಕರ ನಡೆಸಿ ಪುರಸಭೆ ಉಪಾಧ್ಯಕ್ಷ ಮೀರ್ ಮುಜಾಫರ್ ಪಟೇಲ್ ಅವರಿಗೆ ಮನವಿ ಪತ್ರ ಸಲ್ಲಿಸಿದರು. ಪೌರ ನೌಕರರ ಸಂಘದ ತಾಲುಕಾಧ್ಯಕ್ಷ ಕಂಟೇಪ್ಪ ಮಾತನಾಡಿ, ರಾಜ್ಯ ವ್ಯಾಪ್ತಿಯ ಮಹಾನಗರ ಪಾಲಿಕೆ, ನಗರ ಸಭೆ, ಪುರಸಭೆ ಸೇರಿ ಸ್ಥಳೀಯ ಸಂಸ್ಥೆಗಳಲ್ಲಿ ನೀರು ಸರಬರಾಜ ಸಹಾಯಕರು, ವಾಹನ ಚಾಲಕರು, ಬೀದಿ ದೀಪ ಸಹಾಯಕರು ಸೇರಿ ವಿವಿಧ ವೃಂದದಲ್ಲಿ ಹೊರಗುತ್ತಿಗೆ ಆಧಾರದ ಮೇಲೆ ಕೆಲಸ ಮಾಡುತ್ತಿರುವ ನೌಕರರನ್ನು ನೇರ ಪಾವತಿಗೆ ಒಳಪಡಿಸಬೇಕು ಎಂದು ಮನವಿ ಮಾಡಿದರು. ದಿನಗೂಲಿ ಕ್ಷೇಮಾಭಿವೃದ್ಧಿ ಸಮಾನ ಕೆಲಸಕ್ಕೆ ಸಮಾನ ವೇತನ ನೀಡಬೇಕು. ಟೈಮ್ ಸ್ಕೇಲ್ ನೌಕರರನ್ನು ಖಾಲಿ ಇರುವ ಹುದ್ದೆಗಳಿಗೆ ವಿಲಿನ ಮಾಡಬೇಕು. 7ನೇ ವೇತನ ಹಾಗೂ 2023–24ನೇ ಸಾಲಿನಲ್ಲಿ ನೇಮಕಗೊಂಡ ಪೌರ ಕಾರ್ಮಿಕರ ವೇತನವನ್ನು.ಎಫ್.ಸಿ. ಅನುದಾನದಡಿ ವೇತನ ಪಾವತಿ ಸೇರಿ ಪೌರ ನೌಕರರ ಎಲ್ಲ ಬೇಡಿಕೆಗಳನ್ನು ಈಡೇರಿಸಬೇಕು. ಬೇಡಿಕೆ ಈಡೇರಿಸದೇ ಇದ್ದಲ್ಲಿ ಕಾನೂನು ಚೌಕಟ್ಟಿನಲ್ಲಿ ಮುಷ್ಕರ ಹೀಗೆ ಮುಂದುವರೆಯುತ್ತದೆ ಎಂದು ತಿಳಿಸಿದರು. ಸಂಘದ ಉಪಾಧ್ಯಕ್ಷ ಧನರಾಜ ನೇಳಕುಡಕ್ಕರ್, ಕಾರ್ಯದರ್ಶಿ ಪೂಜಾ ಪಾನಶೆಟ್ಟಿ, ಸಂತೋಷ ಬಿರಾದಾರ್, ಚಿದಾನಂದ ಪತ್ರಿ ಸೇರಿದಂತೆ ಪೌರ ನೌಕರರು ಉಪಸ್ಥಿತರಿದ್ದರು.

## ಮೇ 29 ರಿಂದ ವಿಕಸಿತ ಕೃಷಿ ಸಂಕಲ್ಪ ಅಭಿಯಾನ: "ವಿಜ್ಞಾನಿಗಳ ನಡೆ ರೈತರ ಕಡೆ" ಕಾರ್ಯಕ್ರಮ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಮೇ27-ನವದೆಹಲಿಯ ಭಾರತೀಯ ಕೃಷಿ ಅನುಸಂಧಾನ ಪರಿಷತ್ತು ಹಾಗೂ ಅದರ ವಿವಿಧ ಅಂಗ ಸಂಸ್ಥೆಗಳು, ಕೃಷಿ ವಿಶ್ವವಿದ್ಯಾಲಯಗಳು, ಕೃಷಿ ವಿಜ್ಞಾನ ಕೇಂದ್ರಗಳು, ಕೃಷಿ ಇಲಾಖೆ ಮತ್ತು ತೋಟಗಾರಿಕೆ ಇಲಾಖೆಯ ಸಹಯೋಗದೊಂದಿಗೆ ಈ ಮುಂಗಾರು ಹಂಗಾಮಿನಲ್ಲಿ ಕೃಷಿಕರಿಗೆ ವಿವಿಧ ಕೃಷಿ ತಾಂತ್ರಿಕತೆಗಳು ಲಭ್ಯವಾಗುವಂತೆ ಮೇ 29 ರಿಂದ ಜೂನ್ 12 ರವರೆಗೆ ವಿಕಸಿತ ಕೃಷಿ ಸಂಕಲ್ಪ ಅಭಿಯಾನ ಹಮ್ಮಿಕೊಳ್ಳಲಾಗಿದೆ. ಕೃಷಿ ಸಂಶೋಧನೆ ಮತ್ತು ರೈತ ಸಮುದಾಯದ ನಡುವಿನ ಅಂತರವನ್ನು ಕಡಿಮೆ ಮಾಡುವುದು ಈ ಅಭಿಯಾನದ ಉದ್ದೇಶವಾಗಿದೆ. ಕೃಷಿ ಜ್ಞಾನವನ್ನು ನೇರವಾಗಿ ರೈತರ ಜಮೀನುಗಳಿಗೆ ಕೊಂಡೊಯ್ಯುವ ಮೂಲಕ ಈ ಅಭಿಯಾನವನ್ನು ಭಾರತ ಸರ್ಕಾರದ ಭಾರತೀಯ ಕೃಷಿ ಸಂಶೋಧನಾ ಅನುಸಂಧಾನ ಪರಿಷತ್‌ನ ವಿಜ್ಞಾನಿಗಳು ಹಾಗೂ ಕೃಷಿ ವಿಜ್ಞಾನ ಕೇಂದ್ರದ ವಿಜ್ಞಾನಿಗಳನ್ನು ಒಳಗೊಂಡ ಎರಡು ಮತ್ತು ಮೂರು ತಂಡಗಳ ಮೂಲಕ ಕಾರ್ಯಗತಗೊಳಿಸಲಾಗುತ್ತಿದೆ.

ಈ ವಿನೂತನ ಕಾರ್ಯಕ್ರಮದಲ್ಲಿ ಕೃಷಿ ವಿಜ್ಞಾನ ಕೇಂದ್ರದ ವಿಜ್ಞಾನಿಗಳು ರೈತರ ಬಳಿ ತೆರಳಿ, ಜಿಲ್ಲೆಯ ಎಲ್ಲ ರೈತರಿಗೆ ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಮಾಹಿತಿ ನೀಡುವರು. ಇಲ್ಲಿ ರೈತರನ್ನು ಒಗ್ಗೂಡಿಸಿ ನೂತನ ತಂತ್ರಜ್ಞಾನಗಳು, ಹೊಸ ತಳಿಗಳು ಮತ್ತು ಬೀಜಗಳು, ನಿಖರವಾದ ಹವಾಮಾನದ ಮಾಹಿತಿ ಮತ್ತು ಸರ್ಕಾರದ ನಾನಾ ಲಾಭದಾಯಕ ಯೋಜನೆಗಳು, ಕೃಷಿಯಲ್ಲಿ ಹೆಚ್ಚಿನ ಲಾಭವನ್ನು ಹೇಗೆ ಪಡೆಯಬಹುದು ಎಂಬ ಬಗ್ಗೆ ಮಾಹಿತಿ ನೀಡಲಾಗುತ್ತದೆ.

ರೈತರು ನೀಡುವ ಪ್ರತಿಕ್ರಿಯೆಗಳನ್ನು ಸಂಗ್ರಹಿಸಿ ಅವರ ಹೊಸ ಆವಿಷ್ಕಾರಗಳನ್ನು ಸಂಶೋಧನೆ ಮತ್ತು ಪ್ರಸಾರ ಚಟುವಟಿಕೆಗಳಲ್ಲಿ ಬಳಸಲಾಗುತ್ತದೆ. ಬೆಳೆ, ಮಣ್ಣು ಮತ್ತು ಲಭ್ಯವಿರುವ ಸಂಪನ್ಮೂಲಗಳ ಆಧಾರದ ಮೇಲೆ ತಜ್ಞರಿಂದ ಸಲಹೆ ನೀಡಲಾಗುತ್ತದೆ. ಜೊತೆ-ಗೆ ಸರ್ಕಾರದ ಯೋಜನೆಗಳ ಲಾಭ ಪಡೆಯುವ ವಿಧಾನಗಳ ಕುರಿತು ಸಂಪೂರ್ಣ ಮಾಹಿತಿ ನೀಡಲಾಗುತ್ತದೆ.

ಜಿಲ್ಲೆಯ ಆಯಾ ಹೋಬಳಿಯ ರೈತ ಸಂಪರ್ಕ ಕೇಂದ್ರಗಳ ಮೂಲಕ ವಿಕಸಿತ ಕೃಷಿ ಸಂಕಲ್ಪ ಅಭಿಯಾನದ ತಂಡ ಭೇಟಿ ನೀಡುವ ಬಗ್ಗೆ ಅಲ್ಲಿಯ ರೈತರಿಗೆ ಮುಂಚಿತವಾಗಿ ಮಾಹಿತಿ ನೀಡಲಾಗುತ್ತದೆ.

ವಿಕಸಿತ ಕೃಷಿ ಸಂಕಲ್ಪ ಅಭಿಯಾನದ ತಂಡ ಆಯಾ ಗ್ರಾಮಗಳಿಗೆ ಬಂದಾಗ ಈ ಕಾರ್ಯಕ್ರಮದಲ್ಲಿ ಭಾಗವಹಿಸಿ ರೈತರ ಸಮಸ್ಯೆಗಳಿಗೆ ಪರಿಹಾರ ಕಂಡುಕೊಂಡು ಕಾರ್ಯಕ್ರಮದ ಲಾಭ ಪಡೆದು ಕೃಷಿಯನ್ನು ಲಾಭದಾಯಕವಾಗಿಸಿಕೊಳ್ಳಬಹುದು ಎಂದು ಬಳ್ಳಾರಿಯ ಕೃಷಿ ವಿಜ್ಞಾನ ಕೇಂದ್ರದ ಹಿರಿಯ ವಿಜ್ಞಾನಿ ಹಾಗೂ ಮುಖ್ಯಸ್ಥರಾದ ಡಾ.ಪಾಲಯ್ಯ.ಪಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಸತಿ ನಿಲಯಕ್ಕೆ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:- 2025-26ನೇ ಸಾಲಿನ ಮೆಟ್ರಿಕ್ ಪೂರ್ವ/ನಂತರ ಬಾಲಕ/ಬಾಲಕಿಯರ ವಸತಿ ನಿಲಯಗಳು ಖಾಲಿಯಿರುವ ಸ್ಥಾನಗಳು ಭರ್ತಿ ಮಾಡಲು ಆನ್ಲೈನ್ ಮುಖಾಂತರ ಅರ್ಜಿಗಳನ್ನು ಅಹ್ವಾನಿಸಲಾಗಿದೆ ಎಂದು ಸಮಾಜ ಕಲ್ಯಾಣ ಇಲಾಖೆ ಗ್ರೇಡ್1 ಸಹಾಯಕ ನಿರ್ದೇಶಕ ಲಿಂಗರಾಜ ಅರಸ್ ತಿಳಿಸಿದ್ದಾರೆ. ಹುಮನಾಬಾದ ಮತ್ತು ಚಿಟಗುಪ್ಪ ತಾಲೂಕಿನ ವಸತಿ ನಿಲಯಗಳಿಗೆ ಪ್ರವೇಶ ಬಯಸುವ ಆಸಕ್ತರು 5ರಿಂದ 10ನೇ ತರಗತಿಯ ವಿದ್ಯಾರ್ಥಿಗಳು ಮೆಟ್ರಿಕ್ ಪೂರ್ವ/ಮೆಟ್ರಿಕ್ ನಂತರ ಬಾಲಕ/ಬಾಲಕಿಯರ ವಸತಿ ನಿಲಯಗಳಲ್ಲಿ ಪಿಯುಸಿ, ಪದವಿ ಮತ್ತು ವೃತ್ತಿಪರ ಕೋರ್ಸ್‌ಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿ ನಿಲಯಗಳ ಪ್ರವೇಶಕ್ಕಾಗಿ https://swdhmis.karnataka.gov.in/ ವೆಬ್ಸೈಟ್‌ನಲ್ಲಿ ಆನ್ಲೈನ್ ಮೂಲಕ ಅರ್ಜಿ ಸಲ್ಲಿಸಲು ಆಗಸ್ಟ್ 31 ಕೊನೆಯ ದಿನವಾಗಿದೆ. ಆನ್ಲೈನ್ ಮೂಲಕ



ಅರ್ಜಿ ಸಲ್ಲಿಸಲು ಹಿಂದಿನ ತರಗತಿಯಲ್ಲಿ ತೇರ್ಗಡೆಯಾದ ಅಂಕಪಟ್ಟಿ, ಜಾತಿ ಪ್ರಮಾಣ ಪತ್ರ, ಆದಾಯ ಪ್ರಮಾಣ ಪತ್ರ, ವಾಸಸ್ಥಳ ಪ್ರಮಾಣ ಪತ್ರ, ಆಧಾರ್ ಕಾರ್ಡ್, ಬ್ಯಾಂಕ ಖಾತೆ ಸಂಖ್ಯೆ, ವಿದ್ಯಾರ್ಥಿ ಸ್ಯಾಟ್ಸ್ ಹಾಗೂ ಎಸ್.ಎಸ್.ಪಿ., ವಿದ್ಯಾರ್ಥಿ ಐಡಿ ಸಂಖ್ಯೆಯೊಂದಿಗೆ ಆನ್ಲೈನ್ ಅರ್ಜಿ ಭರ್ತಿ ಮಾಡಿ ಪ್ರಿಂಟ್ ಕಾಪಿ ಮತ್ತು ವಿದ್ಯಾರ್ಥಿಯ ಇತ್ತೀಚಿನ 4 ಭಾವಚಿತ್ರದೊಂದಿಗೆ ವಸತಿ ನಿಲಯ ಪಾಲಕರಿಗೆ ಸಲ್ಲಿಸಬೇಕೆಂದು ಸಮಾಜ ಕಲ್ಯಾಣ ಇಲಾಖೆ ಗ್ರೇಡ್1 ಸಹಾಯಕ ನಿರ್ದೇಶಕ ಲಿಂಗರಾಜ ಅರಸ್ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಜಿಲ್ಲಾ ಮಟ್ಟದ ಸಮನ್ವಯ ಸಮಿತಿ ಸಭೆಯಲ್ಲಿ ಡಿಸಿ ಪ್ರಶಾಂತ್ ಕುಮಾರ್ ಮಿಶ್ರಾ ಸೂಚನೆ

## ಜನನ ಮತ್ತು ಮರಣ ನೋಂದಣಿ ವಿಳಂಬವಾಗಬಾರದು




ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಮೇ 27-ಜಿಲ್ಲೆಯಲ್ಲಿ ಗ್ರಾಮೀಣ ಹಾಗೂ ನಗರ ಪ್ರದೇಶಗಳಲ್ಲಿ ಜನನ ಮತ್ತು ಮರಣ ನೋಂದಣಿ ಪ್ರಕ್ರಿಯೆಯು ಯಾವುದೇ ಕಾರಣಕ್ಕೂ ವಿಳಂಬವಾಗದೇ ನಿಗದಿತ ಸಮಯದಲ್ಲಿ ಜರುಗಬೇಕು ಎಂದು ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ಹೇಳಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿಯ ಕೆಸ್ವಾನ್ ವಿಡಿಯೋ ಸಭಾಂಗಣದಲ್ಲಿ ಮಂಗಳವಾರ ಏರ್ಪಡಿಸಿದ್ದ ಬೆಳೆ ಕಟಾವು ಪ್ರಯೋಗಗಳ ಪ್ರಗತಿ ಪರಿಶೀಲನೆ, ಬೆಳೆ ಕ್ಷೇತ್ರ ಮರು ಹೊಂದಾಣಿಕೆ ಮತ್ತು ಜನನ-ಮರಣ ನಾಗರೀಕ ನೋಂದಣಿ ಪದ್ಧತಿಯ ಕುರಿತ ಜಿಲ್ಲಾ ಮಟ್ಟದ ಸಮನ್ವಯ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲೆಯಲ್ಲಿ ಜನನ ಘಟನೆಗಳ ಪ್ರಮಾಣವು ವಾರ್ಷಿಕ ಅಂದಾಜು 30 ಸಾವಿರವಿದೆ. ಪ್ರತಿ ತಿಂಗಳು, ಪ್ರತಿ ಆಸ್ಪತ್ರೆಗಳಲ್ಲಿ ಎಷ್ಟು ಜನನ ಘಟನೆಗಳು ಸಂಭವಿಸುತ್ತಿವೆ ಹಾಗೂ ಎಷ್ಟು ಮಂದಿ ಜನನ ಪ್ರಮಾಣ ಪಡೆದುಕೊಳ್ಳುತ್ತಿದ್ದಾರೆ ಎಂಬುದನ್ನು ಪರಿಶೀಲಿಸಿ, ಮಾಹಿತಿ ಸಂಗ್ರಹಿಸಬೇಕು. ಈ ಕುರಿತು ಆಯಾ ತಾಲ್ಲೂಕು ತಹಶೀಲ್ದಾರರ ನೇತೃತ್ವದಲ್ಲಿ ತಾಲೂಕು ಮಟ್ಟದ ಜನನ ಮತ್ತು ಮರಣ ಸಮನ್ವಯ ಸಮಿತಿ ಸಭೆಗಳನ್ನು ನಿಯಮಿತವಾಗಿ ಜರುಗಿಸಬೇಕು ಎಂದು ಜಿಲ್ಲಾಧಿಕಾರಿಗಳು ನಿರ್ದೇಶನ ನೀಡಿದರು.

ಅದೇರೀತಿಯಾಗಿ ಮರಣ ಘಟನೆಗಳನ್ನು ಹೇಗೆ ಗಣತಿ ಮಾಡುತ್ತೀರಿ ಎಂದು ವಿಚಾರಿಸಿದ ಜಿಲ್ಲಾಧಿಕಾರಿಗಳು, ಮರಣ ಘಟನೆಗಳು ಕೇವಲ ಆಸ್ಪತ್ರೆಗಳಲ್ಲಿ ಸಂಭವಿಸಿದರೆ ಗೊತ್ತಾಗುತ್ತದೆ, ಆದರೆ ಸಮುದಾಯದಲ್ಲಿ ನಡೆದ ಮರಣ ಘಟನೆಗಳನ್ನು ಸಹ ತಪ್ಪದೇ ಗಣತಿ ಮಾಡಬೇಕು ಎಂದು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲಾ ಸಂಖ್ಯಾಸಂಗ್ರಹಣಾಧಿಕಾರಿ ಎನ್.ಕೆ.ಪತ್ರಿಬಸಪ್ಪ ಅವರು ಮಾತನಾಡಿ, 2025 ರ ಜನವರಿಯಿಂದ ಏಪ್ರಿಲ್ ರವರೆಗೆ ಜಿಲ್ಲೆಯಲ್ಲಿ ಜನನ ನೋಂದಣಿ ವಿವರ ಕುರಿತಂತೆ ಗಂಡು-4,827, ಹೆಣ್ಣು-4,361 ಸೇರಿ ಒಟ್ಟು 9,188 ಘಟನೆಗಳು ನೋಂದಣಿಯಾಗಿವೆ. ಅದೇರೀತಿಯಾಗಿ 2025 ರ ಜನವರಿಯಿಂದ ಏಪ್ರಿಲ್ ರವರೆಗೆ ಜಿಲ್ಲೆಯಲ್ಲಿ ಮರಣ ನೋಂದಣಿ ವಿವರ ಕುರಿತಂತೆ ಗಂಡು-2,608, ಹೆಣ್ಣು-1,775 ಮತ್ತು ಲಿಂಗತ್ವ ಅಲ್ಪಸಂಖ್ಯಾತರು-1 ಸೇರಿದಂತೆ ಒಟ್ಟು 4,384 ಘಟನೆಗಳು ನೋಂದಣಿಯಾಗಿವೆ ಎಂದು ಸಭೆಗೆ ತಿಳಿಸಿದರು.

ಜನನ ಘಟನೆಗಳು 21 ದಿನಗಳೊಳಗಾಗಿ ಸಂಭವಿಸಿದ್ದರೆ ಉಚಿತವಾಗಿ ಪ್ರಮಾಣ ಪತ್ರ ಪಡೆಯಬಹುದು. ಘಟನೆ ಸಂಭವಿಸಿ 21 ದಿನದಿಂದ 30 ದಿನಗಳೊಳಗಿದ್ದರೆ ಪ್ರಮಾಣ ಪತ್ರ ಪಡೆಯಲು ರೂ.20 ಪಾವತಿಸಬೇಕು. 30 ದಿನಗಳ ನಂತರ ಪಡೆಯುವಂತಿದ್ದಲ್ಲಿ ರೂ.50 ಪಾವತಿಸಬೇಕು ಎಂದು ಮಾಹಿತಿ ತಿಳಿಸಿದರು.

ಜಿಲ್ಲಾಧಿಕಾರಿಗಳು ಮಾತನಾಡಿ, ಜನನ ಮತ್ತು ಮರಣ ಪ್ರಮಾಣ ವಿತರಣೆಯಲ್ಲಿ ಸಾರ್ವಜನಿಕರನ್ನು ವಿನಾಃಕಾರಣ ಅಲೆದಾಡಿಸುವಂತಿಲ್ಲ. ಮುಖ್ಯವಾಗಿ ಸುಳ್ಳು ಪ್ರಮಾಣ ಪತ್ರ ವಿತರಣೆ ಮಾಡುವಂತಿಲ್ಲ ಎಂದು ತಿಳಿಸಿದರು.

ಕೃಷಿ ಗಣತಿ ಕಾರ್ಯದಲ್ಲಿ ಸಹ ಈವರೆಗೆ ಜಿಲ್ಲೆಯಲ್ಲಿ ಬಿತ್ತನೆಯಾಗಿರುವುದು ಮತ್ತು ಬಿತ್ತನೆಯಾಗದಿರುವುದರ ಕುರಿತು ವಿವಿಧ ನಮೂನೆಗಳಲ್ಲಿ ಪ್ರಯೋಗದ ಮಾಹಿತಿಯನ್ನು ಆಯಾ ತಾಲ್ಲೂಕುಗಳ ತಹಶೀಲ್ದಾರರು ತಪ್ಪದೇ ನಮೂದಿಸಬೇಕು ಎಂದು ಎಲ್ಲಾ ತಾಲ್ಲೂಕು ತಹಶೀಲ್ದಾರರಿಗೆ ತಿಳಿಸಿದರು.

ಸಭೆಯಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕ ವಿಜಯ್ ಕುಮಾರ್, ತೋಟಗಾರಿಕೆ ಇಲಾಖೆಯ ಉಪನಿರ್ದೇಶಕ ಸಂತೋಷ್ ಸಪ್ಪಂಡಿ, ಸಂಡೂರು ತಾಲ್ಲೂಕು ತಹಶೀಲ್ದಾರ ಅನೀಲ್ ಕುಮಾರ್ ಸೇರಿದಂತೆ ಕೃಷಿ, ಆರೋಗ್ಯ ಇಲಾಖೆಯ ಅಧಿಕಾರಿಗಳು ಮತ್ತು ಜಿಲ್ಲಾ ಮಟ್ಟದ ವಿವಿಧ ಇಲಾಖೆಯ ಅಧಿಕಾರಿಗಳು, ತಾಲ್ಲೂಕು ತಹಶೀಲ್ದಾರರು ಉಪಸ್ಥಿತರಿದ್ದರು.

## ಮಿಲಿಟರಿ ಬಾಲಕಿಯರ ವಸತಿ ನಿಲಯದ ಪ್ರವೇಶಕ್ಕಾಗಿ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಮೇ 27-ಧಾರವಾಡ ಶಹರದ ಸಪ್ತಾಪೂರ ರಸ್ತೆಯಲ್ಲಿರುವ ಮಿಲಿಟರಿ ಬಾಲಕಿಯರ ವಸತಿ ನಿಲಯದಲ್ಲಿ 2025-26ನೇ ಶೈಕ್ಷಣಿಕ ವರ್ಷಕ್ಕಾಗಿ ಬಳ್ಳಾರಿ ಜಿಲ್ಲೆಯ ಗ್ರಾಮಾಂತರ ಪ್ರದೇಶ ಹಾಗೂ ರಾಜ್ಯದ ಇತರ ಜಿಲ್ಲೆಗಳಲ್ಲಿರುವ ಯುದ್ಧದಲ್ಲಿ ಮಡಿದ ಯೋಧರ ಮತ್ತು ಮಾಜಿ ಸೈನಿಕರ ಹೆಣ್ಣು ಮಕ್ಕಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಬಾಲಕಿಯರ ವಿದ್ಯಾರ್ಥಿನಿಲಯದಲ್ಲಿ 5 ನೇ ತರಗತಿಯಿಂದ ಪಿಯುಸಿ - 2 ರ ವಿದ್ಯಾರ್ಥಿಗಳಿಗೆ ಪ್ರವೇಶ ನೀಡಲಾಗುತ್ತದೆ. ವಸತಿ ನಿಲಯದಲ್ಲಿ ವಾಸ್ತವ್ಯ ಮತ್ತು ಊಟೋಪಚಾರಗಳು ಉಚಿತವಾಗಿದ್ದು, ಮಾಜಿ ಸೈನಿಕರ ಹೆಣ್ಣು ಮಕ್ಕಳು ಈ ಸೌಲಭ್ಯದ ಉಪಯೋಗ ಪಡೆಯಬಹುದಾಗಿದೆ.

ವಸತಿ ನಿಲಯದಲ್ಲಿ ಧಾರವಾಡ ನಗರದಲ್ಲಿರುವ ವಿದ್ಯಾಸಂಸ್ಥೆಗಳಲ್ಲಿ ಪ್ರವೇಶ ಪಡೆದ ವಿದ್ಯಾರ್ಥಿನಿಯರಿಗೆ ಮಾತ್ರ ನಿಲಯದಲ್ಲಿ ಪ್ರವೇಶ ನೀಡಲಾಗುವುದು.

ಅರ್ಜಿಗಳನ್ನು ಜಂಟಿ ನಿರ್ದೇಶಕರು, ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ, ಉದಯ ಹಾಸ್ಟೆಲ್ ಸರ್ಕಲ್ ಸೈನಿಕ ವಿಶ್ರಾಂತಿ ಗೃಹ ಆವರಣ, ಧಾರವಾಡ ಇಲ್ಲಿ ಪಡೆದು ಭರ್ತಿ ಮಾಡಿದ ಅರ್ಜಿಗಳನ್ನು ಮೇ 31 ರೊಳಗಾಗಿ ಮರಳಿ ಇದೇ ಕಚೇರಿಗೆ ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ಅಥವಾ ದೂ.0836-2440176 ಗೆ ಸಂಪರ್ಕಿಸಬಹುದು ಎಂದು ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆಯ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಮೇ 28 ರಂದು ಜಿಲ್ಲಾ ತಂಬಾಕು ನಿಯಂತ್ರಣ

## ಕೋಶದ ಪ್ರಗತಿ ಪರಿಶೀಲನಾ ಸಭೆ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಮೇ26-ರಾಷ್ಟ್ರೀಯ ತಂಬಾಕು ನಿಯಂತ್ರಣ ಕಾರ್ಯಕ್ರಮದಡಿ ಜಿಲ್ಲೆಯ ಎಲ್ಲಾ ಸಾರ್ವಜನಿಕ ಪ್ರದೇಶಗಳಲ್ಲಿ 'ಸಿಗರೇಟ್ ಮತ್ತು ಇತರೆ ತಂಬಾಕು ಉತ್ಪನ್ನಗಳ ಅಧಿನಿಯಮ(ಕೋಟ್ಪಾ)-2003'ರ ಕಾನೂನನ್ನು ಪರಿಣಾಮಕಾರಿಯಾಗಿ ಜಾರಿಗೆ ಕುರಿತಂತೆ ಚರ್ಚಿಸಲು ಮೇ 28 ರಂದು ಸಂಜೆ 04 ಗಂಟೆಗೆ ನಗರದ ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ "ಜಿಲ್ಲಾ ತಂಬಾಕು ನಿಯಂತ್ರಣ ಕೋಶದ ಪ್ರಗತಿ ಪರಿಶೀಲನಾ ಸಭೆ" ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾ ತಂಬಾಕು ನಿಯಂತ್ರಣ ಕೋಶದ ಅಧ್ಯಕ್ಷರೂ ಆಗಿರುವ ಅಪರ ಜಿಲ್ಲಾಧಿಕಾರಿ ಮಹಮ್ಮದ್ ಝುಬೇರ್ ಅವರು ತಿಳಿಸಿದ್ದಾರೆ.

## ನಗರಡೋಣ ವಿಜಯ ಭಾಸ್ಕರ್ ಅವರಿಗೆ ಪಿಎಚ್‌ಡಿ ಪದವಿ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಮೇ 26:ಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯದ ನಿರ್ವಹಣಾಶಾಸ್ತ್ರ ಅಧ್ಯಯನ ವಿಭಾಗದ ವಿದ್ಯಾರ್ಥಿಯಾಗಿದ್ದ ನಗರಡೋಣ ವಿಜಯ ಭಾಸ್ಕರ್ ಅವರಿಗೆ ಪಿಎಚ್‌ಡಿ ಪದವಿ ಲಭಿಸಿದೆ. ವಿಶ್ವವಿದ್ಯಾಲಯದ ನಿರ್ವಹಣಾ ಶಾಸ್ತ್ರ ಅಧ್ಯಯನ ವಿಭಾಗದ ಸಹಾಯಕ ಪ್ರಾಧ್ಯಾಪಕರಾದ ಡಾ.ಜಿ.ಅರುಣ್ ಕುಮಾರ್ ಅವರ ಮಾರ್ಗದರ್ಶನದಲ್ಲಿ ಸಿದ್ಧಪಡಿಸಿದ "ಫೈನಾನ್ಸಿಯಲ್ ಇನ್ಕ್ಲೂಶನ್ ಆಂಡ್ ಇನ್ಕ್ಲೂಸಿವ್ ಗ್ರೋತ್-ಎ ಸ್ಟಡಿ ವಿತ್ ಸ್ಪೆಷಲ್ ರೆಫರೆನ್ಸ್ ಟು ಕರ್ನಾಟಕ ಗ್ರಾಮೀಣ ಬ್ಯಾಂಕ್ ಇನ್ ಬಳ್ಳಾರಿ ಅಂಡ್ ಕೊಪ್ಪಳ ಡಿಸ್ಟ್ರಿಕ್ಟ್" ಎಂಬ ಮಹಾಪ್ರಬಂಧಕ್ಕೆ ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯವು ಪಿಎಚ್‌ಡಿ ಪದವಿ ಪ್ರದಾನ ಮಾಡಿದೆ ಎಂದು ವಿವಿ ಪ್ರಕಟಣೆ ತಿಳಿಸಿದೆ.

## ಕಂಪ್ಲಿ: ವಿದ್ಯುತ್ ಸಂಬಂಧಿತ ದೂರುಗಳಿದ್ದಲ್ಲಿ ಸಂಪರ್ಕಿಸಿ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಮೇ 27-ಕಂಪ್ಲಿ ಜೆಸ್ಕಾಂ ವ್ಯಾಪ್ತಿಯಲ್ಲಿ ವಿದ್ಯುತ್ ಸಂಬಂಧಿಸಿದಂತೆ ದೂರುಗಳಿದ್ದಲ್ಲಿ ಕಂಪ್ಲಿ ವ್ಯಾಪ್ತಿಯ ಪವರ್‌ಮ್ಯಾನ್‌ಗಳ ಮೊಬೈಲ್ ಸಂಖ್ಯೆಗೆ ಗ್ರಾಹಕರು ಸಂಪರ್ಕಿಸಬಹುದು ಎಂದು ಕಂಪ್ಲಿ ಜೆಸ್ಕಾಂ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ತಿಳಿಸಿದ್ದಾರೆ.

ಮಾನ್ಸೂನ್ ಮಳೆಗಾಲ ಇರುವುದರಿಂದ ಮೋಟಾರ್ ಐಪಿ ಸೆಟ್ ಮಾರ್ಗಗಳ ವಿದ್ಯುತ್ ಲೈನ್ ಸಮಸ್ಯೆಗಳಿದ್ದಾಗ ಲೈನ್ ಮ್ಯಾನ್‌ಗಳು ಸರಿಪಡಿಸಿ ನಂತರ ಅನಿರೀಕ್ಷಿತವಾಗಿ ವಿದ್ಯುತ್ ಸರಬರಾಜು ಮಾಡುವ ಅವಕಾಶ ತುಂಬಾ ಇದ್ದು, ಹಾಗಾಗಿ ರೈತ ಬಾಂಧವರು ಕರೆಂಟ್ ಇರುವುದಿಲ್ಲ ಎಂದು ತಿಳಿದು ಯಾವುದೇ ವಿದ್ಯುತ್ ಕಂಬ, ಲೈನ್ ಮತ್ತು (ಟಿಸಿ) ಪರಿವರ್ತಕಗಳನ್ನು ಮುಟ್ಟಬಾರದು.

ಮಳೆಗಾಲದಲ್ಲಿ ವಿದ್ಯುತ್‌ಗೆ ಸಂಬಂದಿಸಿದ ಉಪಕರಣಗಳಿಂದ ದೂರವಿರಬೇಕು. ಹೊಲಗಳಲ್ಲಿನ ಬೋರ್‌ವೆಲ್‌ಗಳನ್ನು ಆನ್ ಮತ್ತು ಆಫ್ ಮಾಡುವಾಗ ಬಾಕ್ಸ್/ಸ್ಟಾರ್ಟರ್ ಗಳನ್ನು ಮುಟ್ಟುವಾಗ ಜಾಗ್ರತೆ ವಹಿಸಬೇಕು.

ಹೊಲ ಮತ್ತು ತೋಟಗಳಲ್ಲಿ ಬೋರ್‌ಗೆ ಎಳೆದುಕೊಂಡು ಹೋಗಿರುವ ವೈಯರ್‌ಗಳ ಮೇಲೆ ನಿಗಾ ವಹಿಸಬೇಕು. ಮುಂಗಾರು ಮಳೆಗಾಲ ಆರಂಭವಾಗುತ್ತಿರುವುದರಿಂದ ವಿದ್ಯುತ್ ಅವಘಡಗಳು ಸಂಭವಿಸುವ ಸಾಧ್ಯತೆ ಇದ್ದು ಅದಕ್ಕೆ ಸುರಕ್ಷತೆ, ಎಚ್ಚರಿಕೆ ಮತ್ತು ಜಾಗೃತೆಯಿಂದ ಕೆಲಸ ಮಾಡಬೇಕು ಎಂದು ಅವರು ತಿಳಿಸಿದ್ದಾರೆ.

*ಕಂಪ್ಲಿ ಗ್ರಾಮೀಣ ಶಾಖೆ:*

ಮಹಾಂತೇಶ್ (ಜೆಇ)-9448397533:

ಸಣಾಪುರ ಗ್ರಾಪಂ ವ್ಯಾಪ್ತಿಯ ಲೀಲಾವತಿ ಕ್ಯಾಂಪ್, ಬುಜ್ಜಮ್ಮ ಕ್ಯಾಂಪ್, ನಂ.2-ಮುದ್ದಾಪುರ, ಕೊಂಡಯ್ಯ ಕ್ಯಾಂಪ್ ಗ್ರಾಮಗಳಿಗೆ ತ್ರಿಮೂರ್ತಿ-9901340196.

ಸಣಾಪುರ, ರಾಮದೇವರ ಕ್ಯಾಂಪ್, ಬಸವೇಶ್ವರ ಕ್ಯಾಂಪ್, ಅರಳಹಳ್ಳಿ(ಮಟ್ಟಿ), ಮಾರೆಮ್ಮ ಕ್ಯಾಂಪ್ ಗ್ರಾಮಗಳಿಗೆ ಕುಮಾರಗೌಡ-9743852118. ಮಣ್ಣೂರು ಕ್ಯಾಂಪ್, ನಂ1 ಇಟಗಿ ಗ್ರಾಮಗಳಿಗೆ ನಾಗರಾಜ-9731289464.

ಹಂಪಾದೇವನಹಳ್ಳಿ ಗ್ರಾಪಂ ವ್ಯಾಪ್ತಿಯ ಜಾನೂರು, ಚಿಕ್ಕಜಾಯಿಗನೂರು, ಹಂಪಾದೇವನಹಳ್ಳಿ-ನಿಂಗಪ್ಪ(9901873538). ಗೋನಾಳು, ಜೀರಿಗನೂರು, ಕುಂಬಾರ ಕ್ಯಾಂಪ್-ಶಿವಕುಮಾರ(9663561112). ಜೌಕು-ಶಿವರಾಜ(8073452890).

ದೇವಸಮುದ್ರ ಗ್ರಾಪಂ ವ್ಯಾಪ್ತಿಯ ದೇವಸಮುದ್ರ-ಶಾಂತ ಕುಮರ(9148257670). ಕೃಷ್ಣನಗರ ಕ್ಯಾಂಪ್-ಭರತ್(8105429255).

*ಕಂಪ್ಲಿ ಶಾಖೆ:*

ವಿನೋದ ಕುಮಾರ್ (ಎಇ)-9480844965.

ರಾಮಸಾಗರ ಗ್ರಾಪಂ ವ್ಯಾಪ್ತಿಯ ರಾಮಸಾಗರ-ಮಲ್ಲಯ್ಯ(6361171496), ಹರಿಪ್ರಸಾದ್(9535267881), ತಿಮ್ಮಪ್ಪ(8970261726). ನಂ.10-ಮುದ್ದಾಪುರ ಗ್ರಾಪಂ ವ್ಯಾಪ್ತಿಯ ನಂ.10 ಮುದ್ದಾಪುರ-ಉಮೇಶ(9480845105), ಮಲ್ಲಿಕಾರ್ಜುನ(8150039213). ಕಣಿವೆ ತಿಮ್ಮಲಾಪುರ-ವಾರೆಣ್ಣ(940845159). ಬೆಳಗೋಡುಹಾಳು-ವೆಂಕಟೇಶ(8088326535).

*ಮೆಟ್ರಿ ಶಾಖೆ:*

ಮೊಹಮ್ಮದ್ ಸಮಿವುಲ್ಲಾ (ಜೆಇ)-9480844996.

ಮೆಟ್ರಿ ಗ್ರಾಪಂ ವ್ಯಾಪ್ತಿಯ ಮೆಟ್ರಿ-ಶೇಕ್ಷಾವಲಿ(9480845124), ಚಿನ್ನಾಪುರ-ದ್ಯಾವಣ್ಣ(9742251964), ಉಪ್ಪಾರಹಳ್ಳಿ-ರವಿಕುಮಾರ(9008391215).

ದೇವಲಾಪುರ ಗ್ರಾಪಂ ವ್ಯಾಪ್ತಿಯ ದೇವಲಾಪುರ-ರೆಹಮತವುಲ್ಲಾ(9480845122), ಸೋಮಲಾಪುರ-ಹೊನ್ನೂರಸ್ವಾಮಿ(9113916252).

ಸುಗ್ಗೇನಹಳ್ಳಿ ಗ್ರಾಪಂ ವ್ಯಾಪ್ತಿಯ ಸುಗ್ಗೇನಹಳ್ಳಿ-ಗೋಪಾಲ(9482260671), ಮಾವಿನಹಳ್ಳಿ-ಗುರುಪ್ರಸಾದ(7337859377), ಹೊನ್ನಳ್ಳಿ, ಶ್ರೀರಾಮರಂಗಾಪುರ-ನಂದೀಶ(9036506401, 9036506401).

ಜೆಸ್ಕಾಂ ನಪಾಳಿಯ ಸಿಬ್ಬಂದಿಯವರು ಗ್ರಾಹಕರ ದೂರುಗಳಿಗೆ ತ್ವರಿತವಾಗಿ ಸ್ಪಂದಿಸಲಾಗುವುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕನ್ನಡೇತರರಿಗೆ/ ಅನ್ಯಭಾಷಿಕರಿಗೆ ಕನ್ನಡ ಕಲಿಸುವ ತರಬೇತಿ: ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಮೇ27-ಜಿಲ್ಲೆಯಲ್ಲಿರುವ ಕೇಂದ್ರೋದ್ಯಮಗಳು, ಬ್ಯಾಂಕ್‌ಗಳು, ಕೇಂದ್ರ ಸರ್ಕಾರಿ ಕಚೇರಿಗಳು, ವಸತಿ ಸಮುಚ್ಚಯಗಳಲ್ಲಿರುವ ಕನ್ನಡೇತರರು, ಅನ್ಯಭಾಷಿಕರಿಗೆ ಕನ್ನಡ ಕಲಿಸುವ ತರಬೇತಿ ನೀಡಲಾಗುತ್ತಿದ್ದು, ಆಸಕ್ತರು ಅರ್ಜಿ ಸಲ್ಲಿಸಿ ನೋಂದಾಯಿಸಿಕೊಳ್ಳಬಹುದು ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಬಿ.ನಾಗರಾಜ ಅವರು ತಿಳಿಸಿದ್ದಾರೆ.

ಕನ್ನಡ ಅಭಿವೃದ್ಧಿ ಪ್ರಾಧಿಕಾರ ವತಿಯಿಂದ ಕನ್ನಡೇತರರಿಗೆ ಕನ್ನಡ ಕಲಿಸುವ ಪ್ರಯತ್ನವನ್ನು ಹಲವು ವರ್ಷಗಳಿಂದ ನಿರಂತರವಾಗಿ ಕೈಗೊಳ್ಳುತ್ತಿದ್ದು, 2025-26ನೇ ಸಾಲಿನಲ್ಲಿ ಇನ್ನಷ್ಟು ವ್ಯಾಪಕಗೊಳಿಸಲು ಪ್ರಾಧಿಕಾರವು ವೈಜ್ಞಾನಿಕ ಪಠ್ಯಕ್ರಮವನ್ನು ರೂಪಿಸಿ ತರಬೇತಿ ಹೊಂದಿದ ಶಿಕ್ಷಕರನ್ನು ಆಯೋಜಿಸುವ ಮೂಲಕ ವೃತ್ತಿಪರತೆಯನ್ನು ಒದಗಿಸಲಿದೆ.

ಕನ್ನಡ ಕಲಿಸುವ ತರಬೇತಿಯನ್ನು 3 ತಿಂಗಳ ಅವಧಿಯಲ್ಲಿ ವಾರಕ್ಕೆ 3 ದಿನದಂತೆ ಪ್ರತಿದಿನ 01 ಗಂಟೆ ತರಬೇತಿಯನ್ನು ನಗರದ ಡಾ. ರಾಜ್‌ಕುಮಾರ್ ರಸ್ತೆಯ ಸಾಂಸ್ಕೃತಿಕ ಸಮುಚ್ಚಯದ ಹೊಂಗಿರಣ ಸಭಾಂಗಣದಲ್ಲಿ ನೀಡಲಾಗುತ್ತದೆ.

ಆಸಕ್ತ ಕನ್ನಡೇತರರು ತಮ್ಮ ಸ್ವ-ವಿವರದೊಂದಿಗೆ ಜೂ.06 ರೊಳಗಾಗಿ ಅರ್ಜಿಯನ್ನು ಡಾ.ರಾಜ್‌ಕುಮಾರ್ ರಸ್ತೆಯ ಸಾಂಸ್ಕೃತಿಕ ಸಮುಚ್ಚಯದ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರ ಕಚೇರಿಗೆ ಸಲ್ಲಿಸಬಹುದು.

ಹೆಚ್ಚಿನ ಮಾಹಿತಿಗಾಗಿ ಕಚೇ-ರಿಯ ದೂ.08392-275182 ಗೆ ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಬಿತ್ತನೆ ಬೀಜ, ಗೊಬ್ಬರಗಳನ್ನು ರೈತರಿಗೆ ಸರಿಯಾದ ರೀತಿಯಲ್ಲಿ ಪೂರೈಕೆ ಮಾಡುವಂತೆ ರಾಯರಡ್ಡಿ ಸೂಚನೆ





ಮಲ್ಲಮ್ಮ ನುಡಿ ವಾರ್ತೆ

ಕುಕನೂರ : ಪಟ್ಟಣದಲ್ಲಿ ಕೃಷಿ ಇಲಾಖೆ ಆಯೋಜಿಸಿದ್ದ ಬೀಜ ವಿತರಣೆ ಪ್ರಾರಂಭೋತ್ಸವ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡುತ್ತಾ ರಾಜ್ಯ ಸರ್ಕಾರವು ರೈತರಿಗೆ ಮುಂಗಾರು ಹಂಗಾಮಿನಲ್ಲಿ ಬಿತ್ತನೆಗೆ ಅವಶ್ಯಕವಾಗಿರುವ ಬೀಜ ಗೊಬ್ಬರಗಳ ಪೂರೈಕೆಯನ್ನು ಈಗಾಗಲೇ ಮಾಡಿದ್ದು ರೈತ ಸಂಪರ್ಕ ಕೇಂದ್ರದ ಮೂಲಕ ರಾಜ್ಯ ಸರ್ಕಾರ ರಿಯಾಯಿತಿ ದರದಲ್ಲಿ ಬಿತ್ತನೆ ಬೀಜ ಹಾಗೂ ಗೊಬ್ಬರವನ್ನು ವಿತರಣೆ ಮಾಡುತ್ತಿದೆ. ರೈತರ ಬೇಡಿಕೆಗಳಿಗೆ ತಕ್ಕಂತೆ ಬಿತ್ತನೆ ಬೀಜ ಹಾಗೂ ಗುಲ್ಬರ್ಗ ಪೂರೈಕೆ ಮಾಡಲಾಗಿದ್ದು ಕೃಷಿ ಇಲಾಖೆ ಅಧಿಕಾರಿಗಳು ಸಮರ್ಪಕವಾಗಿ ವಿತರಣೆ ಮಾಡಬೇಕು ಎಂದು ಸೂಚನೆ ನೀಡಿದರು.

ಕುಕನೂರು-ಯಲಬುರ್ಗಾ ತಾಲೂಕು ಕೃಷಿ ನಿರ್ದೇಶಕ ಪ್ರಮೋದ ಸಂಬಳ ಮಾತನಾಡುತ್ತ ಅಖಂಡ ತಾಲೂಕು ಸೇರಿ ಒಟ್ಟು ಮೂರು ಪಾಯಿಂಟ್ 16 ಲಕ್ಷ ಎಕರೆ ಸಾಗುವಳಿ ಭೂಮಿ ಇದ್ದು ಅದರಲ್ಲಿ 2.19 ಲಕ್ಷ ಎಕರೆ ಮುಂಗಾರು ಹಂಗಾಮಿನಲ್ಲಿ ಬಿತ್ತನೆ ಮಾಡುವ ನಿರೀಕ್ಷೆ ಹೊಂದಲಾಗಿದೆ ಹಾಗೂ ಎರಡು ತಾಲೂಕುಗಳು ಸೇರಿದಂತೆ 8 ಸ್ಥಳಗಳಲ್ಲಿ ಬೀಜ ಮಾರಾಟ ಕೇಂದ್ರ ತೆರೆಯಲಾಗಿದೆ ಎಂದು ಹೇಳಿದರು.

ರೈತ ಸಂಪರ್ಕ ಕೇಂದ್ರದ ಅಧಿಕಾರಿ ಬಸವರಾಜ ತೇರಿನ, ಸಿದ್ದರಾಮ ರೆಡ್ಡಿ, ಹನುಮಂತಗೌಡ ಚಂಡೂರ್, ಶಿವಾನಂದ ಮಳಗಿ, ಗೂಳಪ್ಪ ಕೊಳಜಿ, ಮಂಜುನಾಥ ಕಡೆಮನಿ, ಸಂಗಮೇಶ ಗುತ್ತಿ, ರೆಹಮಾನಸಾಬ್ ಮಕಪ್ಪನವರ್ ಹಾಗೂ ಪಟ್ಟಣ ಪಂಚಾಯಿತಿ ಸದಸ್ಯರು ಸೇರಿದಂತೆ ಇನ್ನಿತರರು ಪಾಲ್ಗೊಂಡಿದ್ದರು.



ಚಿಟಗುಪ್ಪ ಪಟ್ಟಣದ ನಾಂದೇಡಿ ಫಂಕ್ಷನ್ ಹಾಲನಲ್ಲಿ ಅತಿಥಿ ಶಿಕ್ಷಕ ಹಸನ್ ಲಚ್ಚಿಕೆ ಅವರ ಸೊಹೋದರ ಉಸ್ಮಾನಮಿಯಾ ಇವರ ಮಗನಾದ ಮಹಮ್ಮದ್ ವಸೀಮ್ ಲಚ್ಚಿಕೆ ಇವರ ವಲಿಮಾ ಕಾರ್ಯಕ್ರಮದಲ್ಲಿ ಸಾಮಾಜಿಕ ಕಾರ್ಯಕರ್ತ ಮಹಮ್ಮದ್ ಅಸ್ಲಾಂಮಿಯಾ, ಶಿಕ್ಷಕರಾದ ಸಂಜೀವನ ಭೋಸ್ಲೆ, ಗುಂಡಪ್ಪ ಕೋರಿ, ಪತ್ರಕರ್ತರಾದ ರಾಜಕುಮಾರ ಆರ್. ಹಡಪದ, ಸೈಯದ್ ಅಜೀಮ, ಭಾಗವಹಿಸಿ ಶುಭ ಹಾರೈಸಿದರು. ಈ ಸಂದರ್ಭದಲ್ಲಿ ಖಾಜಾ ಮೈನೊದ್ದಿನ, ಮಹಮ್ಮದ್ ಹುಸೇನ್, ಹಸನ್, ಮಹಮ್ಮದ್ ಅಲಿ, ಅಹಮದ್, ಮಹಮ್ಮದ್ ಮಶಾಕ್, ಮಸ್ತಾನ ಪಾಶಾ, ರಾಶೀದ್ ಪಟೇಲ್, ಮಲ್ಲಿಕಾರ್ಜುನ ತಿರಲಾಪುರ್, ಶೇಷಾಂಕ ಭೋಸ್ಲೆ ಉಪಸ್ಥಿತರಿದ್ದರು. (ಮಲ್ಲಮ್ಮ ನುಡಿ ಚಿತ್ರ)

## ಎಸ್‌ಎಸ್‌ಎಲ್‌ಸಿ ಪರೀಕ್ಷೆ-2: ಜೂನ್ 02ರವರೆಗೆ ನಿಷೇಧಾಜ್ಞೆ ಜಾರಿ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಮೇ27-ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಳಿಯಿಂದ ಎಸ್‌ಎಸ್‌ಎಲ್‌ಸಿ ಪರೀಕ್ಷೆ-2ರ ಪರೀಕ್ಷೆಯು ಜಿಲ್ಲೆಯಲ್ಲಿ ಜೂನ್ 2ರವರೆಗೆ ಒಟ್ಟು 51 ಪರೀಕ್ಷಾ ಕೇಂದ್ರಗಳಲ್ಲಿ ನಡೆಯಲಿದ್ದು, ಪರೀಕ್ಷಾ ಕೇಂದ್ರದ ಸುತ್ತಲೂ ಕಲಂ 163ರ ಅನ್ವಯ ನಿಷೇಧಾಜ್ಞೆ ಜಾರಿ ಮಾಡಲಾಗಿದೆ ಎಂದು ಜಿಲ್ಲಾಧಿಕಾರಿಗಳಾದ ನಿತೀಶ್ ಕೆ., ಅವರು ತಿಳಿಸಿದ್ದಾರೆ.

ಪರೀಕ್ಷಾ ಕೇಂದ್ರಗಳ ಸುತ್ತಲು ಶಾಂತಿ ಮತ್ತು ಸುವ್ಯವಸ್ಥೆ ಕಾಪಾಡುವ ಹಿತದೃಷ್ಟಿಯಿಂದ ಹಾಗೂ ಯಾವುದೇ ಅಹಿತಕರ ಘಟನೆಗಳು ಸಂಭವಿಸದಂತೆ ಮುಂಜಾಗ್ರತಾ ಕ್ರಮವಾಗಿ ಭಾರತೀಯ ನಾಗರಿಕ ಸುರಕ್ಷಾ ಸಂಹಿತೆ 2023ರ ಕಲಂ 163ರ ಅನ್ವಯ ನಿಷೇಧಾಜ್ಞೆ ಜಾರಿ ಮಾಡಲಾಗಿದೆ. ಪ್ರತಿ ಪರೀಕ್ಷಾ ಕೇಂದ್ರದ ಸುತ್ತಲೂ 200 ಮೀಟರ್ ಪ್ರದೇಶ ವ್ಯಾಪ್ತಿಯ ಪರೀಕ್ಷೆಕೇಂದ್ರಗಳಿಗೆ ನಿಯೋಜಿಸಿದ ಸಿಬ್ಬಂದಿ ಮತ್ತು ಅಧಿಕಾರಿಗಳನ್ನು ಹೊರತುಪಡಿಸಿ ಯಾರೂ ನಿಷೇಧಿತ ಪ್ರದೇಶವನ್ನು ಪ್ರವೇಶಿಸಕೂಡದು., ಸದರಿ ದಿನಗಳಂದು ಪರೀಕ್ಷೆ ಕೇಂದ್ರಗಳಿಗೆ ಅಧಿಕಾರಿಗಳು, ಸಿಬ್ಬಂದಿ ವರ್ಗದವರು ಹಾಗೂ ವಿದ್ಯಾರ್ಥಿಗಳು ಮೊಬೈಲ್ ಫೋನ್‌ಗಳು, ಪಠ್ಯ ಪುಸ್ತಕಗಳು ಹಾಗೂ ಕ್ಯಾಲ್ಕುಲೇಟರ್‌ಗಳು ತರುವುದನ್ನು ನಿಷೇಧಿಸಿದೆ., ಪರೀಕ್ಷಾ ಕೇಂದ್ರಗಳ ಸುತ್ತಲಿನ ಎಲ್ಲಾ ಝುರಾಕ್ಸ್ ಅಂಗಡಿಗಳನ್ನು ಹಾಗೂ ಸೈಬರ್ ಕೆಫೆಗಳನ್ನು ಪರೀಕ್ಷಾ ಸಮಯದಲ್ಲಿ ಕಡ್ಡಾಯ ಮುಚ್ಚಬೇಕೆಂದು ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ದಿಶಾ ಪ್ರಗತಿ ಪರಿಶೀಲನಾ ಸಭೆ

## ರಸ್ತೆ ಕಾಮಗಾರಿ ತೀವ್ರ ಪೂರ್ಣಗೊಳಿಸಿ:ಸಂಸದ ಗದ್ದಿಗೌಡರ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮೇ.27-ಜಿಲ್ಲೆಯಲ್ಲಿ ನಡೆಯುತ್ತಿರುವ ಗ್ರಾಮೀಣ, ರಾಜ್ಯ ಹಾಗೂ ರಾಷ್ಟ್ರೀಯ ಹೆದ್ದಾರಿ ರಸ್ತೆ ಕಾಮಗಾರಿಗಳ ಕೆಲಸಗಳನ್ನು ತೀವ್ರಗೊಳಿಸಿ ಪೂರ್ಣಗೊಳಿಸುವಂತೆ ಸಂಸದ ಪಿ.ಸಿ.ಗದ್ದಿಗೌಡರ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಿಲ್ಲಾ ಪಂಚಾಯತ ನೂತನ ಸಭಾಭವನದಲ್ಲಿ ಮಂಗಳವಾರ ಜರುಗಿದ 2024-25ನೇ ಸಾಲಿನ ನಾಲ್ಕನೇ ತ್ರೈಮಾಸಿಕ ದಿಶಾ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಪ್ರಧಾನಮಂತ್ರಿ ಗ್ರಾಮಸಡಕ್ ಯೋಜನೆಯಡಿ ಕೈಗೊಂಡ ಒಟ್ಟು 34 ರಸ್ತೆ ಕಾಮಗಾರಿಗಳ ಪೈಕಿ 29 ಪೂರ್ಣಗೊಂಡಿದ್ದು, 208 ಕಿಮೀ ಪೈಕಿ 1621 ಕಿ.ಮೀ ಮಾತ್ರ ಪೂರ್ಣಗೊಂಡಿದೆ. ಬಾಕಿ ರಸ್ತೆ ಕಾಮಗಾರಿ ತೀವ್ರಗತಿಯಲ್ಲಿ ಕೈಗೊಂಡು ಪೂರ್ಣಗೊಳಿಸುವಂತೆ ಸಹಾಯಕ ಕಾರ್ಯನಿರ್ವಾಹಕ ಇಂಜಿನೀಯರ್‌ಗೆ ಸೂಚಿಸಿದರು.

ಶಿರೂರದಿಂದಗದ್ದನಕೇರಿಕ್ರಾಸ್‌ವರೆಗೆ ನಡೆದಿರುವ 24 ಕಿ.ಮೀ ಚತುಷ್ಪಥ ರಸ್ತೆ ಕಾಮಗಾರಿ ಕಳೆದ 4 ವರ್ಷಗಳಿಂದ ನಡೆಯುತ್ತಿದ್ದರೂ ಕಾಮಗಾರಿ ಪೂರ್ಣಗೊಂಡಿರುವದಿಲ್ಲ. ಪಟ್ಟದಕಲ್ಲದಿಂದ ಶಿರೂರವರೆಗಿನ 26 ಕಿ.ಮೀ ರಸ್ತೆ ಕಾಮಗಾರಿಯೂ ಸಹ ವಿಳಂಬವಾಗುತ್ತಿದೆ. ವಿಳಂಬಕ್ಕೆ ಯಾವುದೇ ರೀತಿಯ ಸಬೂಬು ಹೇಳದೇ ಗುತ್ತಿಗೆದಾರರು ಕೆಲಸ ಮಾಡದಿದ್ದರೆ, ಬೇರೆಯವರಿಗೆ ಹಸ್ತಾಂತರ ಮಾಡಿ ರಸ್ತೆ ಕಾಮಗಾರಿ ಪೂರ್ಣಗೊಳಿಸುವಂತೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಗ್ರಾಮೀಣ ಕುಡಿಯುವ ನೀರಿನ ಯೋಜನೆಯಡಿ ಕೈಗೊಂಡ ಕಾಮಗಾರಿಯಲ್ಲಿ ರಾಜ್ಯ ಹಾಗೂ ಹೆದ್ದಾರಿ ರಸ್ತೆ ಪಕ್ಕದಲ್ಲಿ ಪೈಪಲೈನ್ ಮಾಡಲು ಜಾಗ ಗುರುತಿಸಿಕೊಡುವಲ್ಲಿ ವಿಳಂಬನೆಯಿಂದ ಕಾಮಗಾರಿ ಸ್ಥಗಿ-ತಗೊಂಡಿದೆ. ಬೇಗನೇ ಸಂಬಂಧಿಸಿದ ಅಧಿಕಾರಿಗಳಿಂದ ಎನ್.ಓ.ಸಿ ಕೊಡಿಸುವಂತೆ ಜಿ.ಪಂ ಸಿಇಓ ಶಶಿಧರ ಕುರೇರ ಕೇಳಿದಾಗ, ವಿಧಾನ ಪರಿಷತ್ ಸದಸ್ಯ ಪಿ.ಎಚ್.ಪೂಜಾರ ಕುಡಿಯುವ ನೀರಿನ ಕಾಮಗಾರಿ ವಿಳಂಬಕ್ಕೆ ಅವಕಾಶ ಕೊಡದೇ ಪೈಪಲೈನ್ ಮಾಡಲು ತುರ್ತಾಗಿ ಅನುಕೂಲ ಮಾಡಿಕೊಡುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಮುಂಗಾರು ಪ್ರಾರಂಭದ ಪೂರ್ವದಲ್ಲಿಯೇ ಮಳೆಯಾಗುತ್ತಿದ್ದು, ಶಾಲಾಕೊಠಡಿಗಳನ್ನು ಸುಸ್ಥಿತಿಯಲ್ಲಿಡಬೇಕು. ಸಣ್ಣಪುಟ್ಟ ದುರಸ್ಥಿ ಮಾಡಿಕೊಂಡು ಶಾಲಾ ಮಕ್ಕಳಿಗೆ ಯಾವುದೇ ರೀತಿಯ ತೊಂದರೆಯಾಗದಂತೆ ಮುತುವರ್ಜಿವಹಿಸಲು ತಿಳಿಸಿದರು. ರಾಜ್ಯದಲ್ಲಿ ಕೋವಿಡ್ ಪ್ರಕರಣಗಳು ಕಂಡುಬರುತ್ತಿದ್ದು, ಆರೋಗ್ಯ ಇಲಾಖೆಯಿಂದ ನೀಡಿದ ಸಲಹೆ ಪಾಲಿಸುವಂತೆ ಸೂಚನೆ ನೀಡಿದರು. ಬಾಲ್ಯ ವಿವಾಹ ತಡೆಗೆ ಜನರಲ್ಲಿ ಅರಿವು ಮೂಡಿಸಬೇಕು. ಸಾಮಾಜಿಕ ಜಾಲತಾಣದಲ್ಲಿ ಬಾಲ್ಯವಿವಾಹದಿಂದ ಮಕ್ಕಳ ಮೇಲಾಗುವ ಆರೋಗ್ಯದ ದುಷ್ಪರಿಣಾಮದ ಬಗ್ಗೆ ಜಾಗೃತಿ ಮೂಡಿಸುವ ಕೆಲಸವಾಗಬೇಕು ಎಂದರು.

ಕೃಷಿ ಇಲಾಖೆಯಲ್ಲಿರುವ ಪ್ರತಿಯೊಂದು ಯೋಜನೆಗಳನ್ನು ರೈತರಿಗೆ ತಲುಪಿಸುವ ಕಾರ್ಯವಾಗಬೇಕು. ಈ ಹಂಗಾಮಿಗೆ ಉತ್ತಮ ಮಳೆಯಾಗುತ್ತಿದ್ದು, ರೈತರಿಗೆ ಬೇಕಾದ ಅಗತ್ಯ ಬೀಜ ಹಾಗೂ ಗೊಬ್ಬರಗಳ ದಾಸ್ತಾನಿಗೆ ಕ್ರಮಕೈಗೊಳ್ಳಲು ಸಂಸದ ಗದ್ದಿಗೌಡರ ತಿಳಿಸಿದರು. ಸಾವಯುವ ಕೃಷಿಗೆ ಹೆಚ್ಚಿನ ಆದ್ಯತೆ ಕೊಡುವ ಮೂಲಕ ಜಿಲ್ಲೆಯ ಸವಳು ಜವಳು ಆಗುವದನ್ನು ತಪ್ಪಿಸಬೇಕು ಎಂದು ಹೇಳಿದರು.

ರಾಜ್ಯಸಭಾ ಸದಸ್ಯ ನಾರಾಯಣಸಾ ಭಾಂಡಗೆ, ವಿಧಾನ ಪರಿಷತ್ ಸದಸ್ಯ ಪಿ.ಎಚ್.ಪೂಜಾರ, ನಾಮನಿರ್ದೇಶಿತ ಸದಸ್ಯರು, ಜಿಲ್ಲಾಧಿಕಾರಿ ಜಾನಕಿ

## ಬೇಡಿಕೆಗಳಿಗೆ ಆಗ್ರಹಿಸಿ ಪೌರನೌಕರರ ಮುಷ್ಕರ




ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮೇ.27-ಶಿರೂರ ಪಟ್ಟಣ ಪಂಚಾಯತಿ ನೌಕರರು ಹಲವು ಬೇಡಿಕೆಗಳನ್ನು ಈಡೇರಿಸುವಂತೆ ಆಗ್ರಹಿಸಿ ಮಂಗಳವಾರ ಅನಿರ್ಧಿಷ್ಟ ಅವಧಿಯ ಮುಷ್ಕರ ಆರಂಭಿಸಿದರು.

ಪಟ್ಟಣ ಪಂಚಾಯತಿ ಎದುರು ಮುಷ್ಕರ ಆರಂಭಿಸಿರುವ ನೌಕರರು ಪಂಚಾಯತರಾಜ್ ಇಲಾಖೆ ನೌಕರರನ್ನು ರಾಜ್ಯ ಸರ್ಕಾರಿ ನೌಕರರೆಂದು ಪರಿಗಣಿಸಿರುವ ಮಾದರಿಯಲ್ಲೇ ರಾಜ್ಯದ ನಗರ ಸ್ಥಳೀಯ ಸಂಸ್ಥೆ ನೌಕರರನ್ನೂ ಪರಿಗಣಿಸಬೇಕು ಎಂದು ಒತ್ತಾಯಿಸಿದರು.

ಹೊರಗುತ್ತಿಗೆ ಆಧಾರದ ಮೇಲೆ ಕೆಲಸ ಮಾಡುತ್ತಿರುವ ನೀರು ಸರಬರಾಜು ಸಹಾಯಕರು, ವಾಹನ ಚಾಲಕರು, ಬೀದಿ ದೀಪ ಸಹಾಯಕರು, ಟೋಡರ್ಸ್, ಪಾರ್ಕ ಗಾರ್ಡನರ, ಕಾವಲುಗಾರ, ಸ್ಯಾನಿಟರಿ ಸುಪರವೈಜರ್ ಸೇರಿದಂತೆ ವಿವಿಧ ವೃಂದಗಳಲ್ಲಿ ಕೆಲಸ ನಿರ್ವಹಿಸುತ್ತಿರುವ ನೌಕರರನ್ನು ನೇರ ಪಾವತಿಗೆ ಒಳಪಡಿಸಬೇಕು.

7ನೇ ವೇತನ ಹಾಗೂ 2023-24 ನೇ ಸಾಲಿನಲ್ಲಿ ನೇಮಕಾತಿಗೊಂಡ ಪೌರಕಾರ್ಮಿಕರು, ಲೋಡರ್ಸ್ ಕ್ಲೀನರ್ಸ ವೇತನವನ್ನು ಎಸ್.ಪಿಸಿ ವೇತನ ಅನುದಾನದಡಿಯಲ್ಲಿ ವೇತನ ನೀಡಬೇಕು ಎಂಬ ಬೇಡಿಕೆಗಳನ್ನು ಪೌರ ನೌಕರರು ಮುಂದಿಟ್ಟು ಮುಷ್ಕರ ನಡೆಸುವುದಾಗಿ ಪ್ರತಿಭಟನಾಕಾರರು ತಿಳಿಸಿದರು.

ರಾಜ್ಯ ಸಂಘದ ಕರೆಯ ಮೇರೆಗೆ ಅನಿರ್ಧಿಷ್ಟ ಅವಧಿಯ ಮುಷ್ಕರ ಆರಂಭಿಸಿದ್ದು, ಸರ್ಕಾರ ನಮ್ಮ ಬೇಡಿಕೆಗಳನ್ನು ಈಡೇರಿಸಬೇಕು ಎಂದು ಪೌರಸೇವಾ ನೌಕರರ ಸೇವಾ ಸಂಘದ ಶಿರೂರ ಪಟ್ಟಣ ಪಂಚಾಯತಿ ಘಟಕದ ಅಧ್ಯಕ್ಷ ಪ್ರಶಾಂತ ಬೂದಿಹಾಳ ಒತ್ತಾಯಿಸಿದರು.

ಸಂಘದ ಉಪಾಧ್ಯಕ್ಷ ಸೋಮಪ್ಪ ಕುರಿಗಾರ, ಕಾರ್ಯದರ್ಶಿ ಜಿ.ಜಿ.ಹಿರೇಮಠ, ನಿರ್ದೇಶಕರುಗಳಾದ ಹನಮಂತ ಹಳ್ಳಿಯವರ, ನಾಗರಾಜ ಸೂಳಿಕೇರಿ, ಬಲರಾಮ ದೊಡಮನಿ, ಎಚ್.ವಾಯ್.ಚನ್ನದಾಸರ, ಈರಪ್ಪ ಗಿರಿಜಾ, ನಾರಾಯಣ ಪೂಜಾರಿ, ಶಂಕ್ರಪ್ಪ ರಾಠೋಡ, ಚಂದ್ರಶೇಖರ ಕಟ್ಟಿಮನಿ, ಕುಮಾರಗೌಡ ಮತ್ತಿತರರು ಪಾಲ್ಗೊಂಡಿದ್ದರು.

## ಜಿಪಂ, ತಾಪಂ ಚುನಾವಣೆಗೆ ಆಮ್ ಆದ್ಮಿ ಸ್ಪರ್ಧೆ




ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮೇ.27-ಮುಂಬರುವ ಜಿಲ್ಲಾ ಪಂಚಾಯತಿ, ತಾಲೂಕು ಪಂಚಾಯತಿ ಚುನಾವಣೆಗೆ ಆಮ್ ಆದ್ಮಿ ಪಕ್ಷ ಸ್ಪರ್ಧೆ ಮಾಡಲಿದೆ ಎಂದು ಆಮ್ ಆದ್ಮಿ ಪಕ್ಷದ ರಾಜ್ಯ ರಾಜ್ಯಾಧ್ಯಕ್ಷ ಸೀತಾರಾಮ ಗುಂಡಪ್ಪ ಹೇಳಿದ್ದಾರೆ.

ನಗರದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಜ್ಯದಲ್ಲಿ ಭ್ರಷ್ಟಾಚಾರ ವ್ಯಾಪಕವಾಗಿದ್ದು, ಪ್ರತಿ ಕೆಲಸಕ್ಕೂ ಲಂಚ ನೀಡುವ ಪರಿಸ್ಥಿತಿ ಇದೆ ಎಂದು ಹೇಳಿ, ರಾಜ್ಯದಲ್ಲಿ ಮುಂಬರುವ ಜಿಪಂ, ತಾಪಂ ಚುನಾವಣೆಗೆ ಎಲ್ಲ ಕ್ಷೇತ್ರಗಳಲ್ಲೂ ಪಕ್ಷ ಸ್ಪರ್ಧೆ ಮಾಡಲಿದೆ. ಆ ಹಿನ್ನೆಲೆಯಲ್ಲಿ ಪಕ್ಷದ ಸಂಘಟನೆ ಮಾಡಲಾಗುವುದು ಎಂದರು.

ನಮ್ಮ ಪಕ್ಷ ದೆಹಲಿಯಲ್ಲಿ ಜಾರಿಗೊಳಿಸಿದ್ದ ಅನೇಕ ಯೋಜನೆಗಳನ್ನು ಕರ್ನಾಟಕದಲ್ಲಿ ಗ್ಯಾರಂಟಿರೂಪದಲ್ಲಿ ಜಾರಿಗೊಳಿಸಲಾಗಿದೆ. ಆದರೆ ಅವುಗಳ ಸರಿಯಾದ ಅನುಷ್ಠಾನವಾಗುತ್ತಿಲ್ಲ. ಉಳಿದಂತೆ ಯಾವುದೇ ಅಭಿವೃದ್ಧಿ ಕಾರ್ಯಗಳು ನಡೆಯುತ್ತಿಲ್ಲ. ಗುತ್ತಿಗೆದಾರರ ಬಾಕಿ ಬಿಲ್ ಪಾವತಿಸುತ್ತಿಲ್ಲ ಎ ಂದು ಸೀತಾರಾಮ ಹೇಳಿದರು.

ಮುಖಂಡ ಜಗದೀಶ ಮಾತನಾಡಿ, ಪಕ್ಷದಲ್ಲಿ ನಿಷ್ಕ್ರೀಯರಾಗಿದ್ದ ಅನೇಕರು ಪಕ್ಷ ಬಿಟ್ಟು ಹೋಗಿದ್ದು, ಈಗ ಮತ್ತೆ ಸಂಘಟನೆ ಮಾಡಲಾಗುತ್ತಿದೆ ಎಂದರು. ಉತ್ತರ ಕರ್ನಾಟಕ ಸಂಘಟನಾ ಕಾರ್ಯದರ್ಶಿ ಅರ್ಜುನ ಹಲಗಿಗೌಡರ ಮಾತನಾಡಿ, ರಾಜ್ಯದಲ್ಲಿ ಆಡಳಿತ ನಿಷ್ಕ್ರೀಯವಾಗಿದೆ. ಆರೋಗ್ಯ, ಉತ್ತಮ ಶಿಕ್ಷಣ, ಜನಪರ ಯೋಜನೆಗಳನ್ನು ಜನರ ಮನೆ ಬಾಗಿಲಿಗೆ ತಲುಪಿಸುವ ಕೆಲಸವನ್ನು ಆಮ್ ಆದ್ಮಿ ಮಾಡುವುದು ಎಂದರು.

ಎಎಪಿ ಜಿಲ್ಲಾಧ್ಯಕ್ಷ ಆನಂದ ದೇವಾಡಿಗ, ರವಿಕುಮಾರ, ಫರೀದ ನದಾಫ ಇದ್ದರು.

## ಗ್ರಾಮೀಣ ಸೊಗಡೇ ಕನ್ನಡ ನಾಟಕಗಳ ಜೀವಾಳ: ಡಾ.ವೀರೇಶ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮೇ.27-ಗ್ರಾಮೀಣ ಸೊಗಡೇ ಕನ್ನಡ ನಾಟಕಗಳ ಜೀವಾಳವಾಗಿದೆ ಎಂದು ಹಂಪಿ ವಿಶ್ವವಿದ್ಯಾಲಯದ ಹಸ್ತಪ್ರತಿ ಹಾಗೂ ನಾಟಕ ವಿಭಾಗದ ಮುಖ್ಯಸ್ಥ ಡಾ.ವೀರೇಶ ಬಡಿಗೇರ ಹೇಳಿದರು.

ನವನಗರದ ಸರಕಾರಿ ಪ್ರಥಮ ದರ್ಜೆ ಕಾಲೇಜಿನ ಸಭಾಂಗಣದಲ್ಲಿ ಮಂಗಳವಾರ ಹಂಪಿ ಕನ್ನಡ ವಿಶ್ವವಿದ್ಯಾಲಯ ನಾಟಕ ವಿಭಾಗ, ಗುಳೆದಗುಡ್ಡದ ರಾಷ್ಟ್ರೀಯ ಸಂಶೋಧನಾ ವೇದಿಕೆ ಇವರ ಸಹಯೋಗದಲ್ಲಿ ನಡೆದ ಕನ್ನಡ ನಾಟಕಗಳ ವಿಭಿನ್ನ ನೆಲೆಗಳು ಕುರಿತ ಒಂದು ದಿನದ ರಾಜ್ಯಮಟ್ಟದ ಸಂಶೋಧನಾ ಕಮ್ಮಟವನ್ನು ಸಸಿಗೆ ನಿರುಣಿಸುವ ಮೂಲಕ ಉದ್ಘಾಟಿಸಿ ಅವರು ಮಾತನಾಡಿದರು.

ಕನ್ನಡ ನಾಟಕಗಳ ಕಥಾವಸ್ತುವಿಗೆ ಮೂಲಬೇರು ಸಿಗುವುದು ಗ್ರಾಮೀಣ ಭಾಗದ ಜನ ಸಮುದಾಯದ ನಿತ್ಯದ ಸಂಹವನ, ಸಂಭಾಷಣೆ, ಹಾವ ಭಾವಗಳ ಅನುಕರಣೆ ಮೂಲಕ ನೆಲೆ ಕಂಡುಕೊಂಡದ್ದಾಗಿದೆ. ಕನ್ನಡ ನಾಟಕ ಕ್ಷೇತ್ರಕ್ಕೆ ಸಂಬಂಧಿಸಿದಂತೆ ನಟನೆ ಮತ್ತು ಅಭಿನಯಕ್ಕೆ ಸೂಕ್ಷ್ಮವಾದ ವ್ಯತ್ಯಾಸವನ್ನು ಗುರುತಿಸಬಹುದಾಗಿದೆ. ನಟಿಸುವುದು ನಟನೆಯಾದರೆ, ಅನುಭವಿಸಿ ಅಭಿವ್ಯಕ್ತಿಸುವುದು ಅಭಿನಯವಾಗಿದೆ. ಅಭಿನಯದ ಮೂಲಕ ಅಭಿವ್ಯಕ್ತಿಗೊಂಡ ಕಲೆಯೇ ನಾಟಕವೆನಿಸಿಕೊಳ್ಳುತ್ತದೆ ಎಂದು ಡಾ.ವೀರೇಶ ಬಡಿಗೇರ ಹೇಳಿದರು.

ಜಾನಪದ ಹಾಗೂ ಶಾಸ್ತ್ರೀಯ ಕಾವ್ಯಕೃತಿಗಳನ್ನು ಮರುವಾಖ್ಯಾನಿಸಿ, ವಿಭಿನ್ನವಾಗಿ ಕಟ್ಟಿಕೊಡುವ ವಿಶಿಷ್ಟ ಸಾಮರ್ಥ್ಯ ಕನ್ನಡ ಕವಿಗಳಿಗೆ ಮಾತ್ರ ದಕ್ಕಿದ್ದು, ಆ ಪರಂಪರೆಯ ಮುಂದುವರಿಕೆಯನ್ನು ಕನ್ನಡ ನಾಟಕಗಳು ಬೆಳೆದು ಬಂದ ಬಗೆಯಲ್ಲಿ ಕಂಡುಕೊಳ್ಳಬಹುದಾಗಿದೆ ಎಂದರು.

ರಾಷ್ಟೀಯ ಸಂಶೋಧನಾ ವೇದಿಕೆಯ ಗೌರವಾಧ್ಯಕ್ಷ ಡಾ.ಸಂಗಮೇಶ ಕಲ್ಯಾಣಿ ಮುಖ್ಯ ಅತಿಥಿಗಳಾಗಿ ಮಾತನಾಡಿ, ಸಮಾಜದ ಏರುಪೇರುಗಳನ್ನು ತಿದ್ದುವ, ತಿಳುವಳಿಕೆ ನೀಡುವ, ಅರಿವು ಮೂಡಿಸುವ ವಿಷಯಗಳ ಮೇಲೆ ನಾಟಕ ರಚನೆ, ಅಭಿನಯ, ಅನುಭವಗಳ ಮಾತು ಎಲ್ಲವೂ ಬೇಕಾಗುತ್ತದೆ. ಹಳಗನ್ನಡದ ಚಂಪೂ ಕಾವ್ಯಗಳನ್ನು ಓದಿದರೆ ಹತ್ತಾರು ಕನ್ನಡ ನಾಟಕಗಳನ್ನು ಬರೆಯಬಹುದು. ನಾಟಕ ರಚನೆಯಲ್ಲಿ ಹೆಚ್ಚು ಅನುಭವ ಮುಖ್ಯವಾಗುತ್ತದೆ ಎಂದು ಹೇಳಿದರು.

ಅಧ್ಯಕ್ಷತೆ ವಹಿಸಿದ್ದ ಕಾಲೇಜಿನ ಪ್ರಾಚಾರ್ಯ ಡಾ.ಅರುಣಕುಮಾರ ಗಾಳಿ, ಕನ್ನಡ ನಾಟಕ ಪರಂಪರೆ ಶ್ರೀಮಂತವಾಗಿದೆ. ರಾಜ್ಯಮಟ್ಟದ ಸಂಶೋಧನಾ ಕಮ್ಮಟದಿಂದ ವಿದ್ಯಾರ್ಥಿಗಳಿಗೆ ಕುವೆಂಪು ಅವರ ಶೂದ್ರ ತಪಸ್ವಿ, ಕಂಬಾರ ಅವರ ಶಿವರಾತ್ರಿ ಹಾಗೂ ಕಾರ್ನಾಡ ಅವರ ತಲೆದಂಡ ನಾಟಕಗಳ ವಸ್ತು ಅವುಗಳ ಮಹತ್ವ ತಿಳಿಸುವ ಉದ್ದೇಶವಾಗಿದೆ. ಇದು ವಿದ್ಯಾರ್ಥಿಗಳ ಜ್ಞಾನಾರ್ಜನೆಗೆ ಅನುಕೂಲವಾಗಿದೆ ಎಂದರು.

ಪ್ರಾಧ್ಯಾಪಕ ಡಾ.ಜಿಜಿ.ಹಿರೇಮಠ ಪ್ರಾಸ್ತಾವಿಕ ಮಾತನಾಡಿ, ಕನ್ನಡ ನಾಟಕಗಳ ವಿಭಿನ್ನ ನೆಲೆಗಳ ಕುರಿತಾಗಿ ನಡೆದ ಸಂಶೋಧನಾ ಕಮ್ಮಟದ ಆಶಯಗಳನ್ನು ವಿವರವಾಗಿ ತಿಳಿಸಿದರು. ರಾಷ್ಟ್ರೀಯ ಸಂಶೋಧನಾ ವೇದಿಕೆಯ ಕಾರ್ಯದರ್ಶಿ ಡಾ.ಚಂದ್ರಶೇಖರ ಕಾಳನ್ನವರ ವೇದಿಕೆ ಮೇಲೆ ಉಪಸ್ಥಿತರಿದ್ದರು.

ನಂತರ ನಡೆದ ಮೊದಲ ಗೋಷ್ಠಿಯಲ್ಲಿ ಡಾ.ಸದಾಶಿವ ದೊಡ್ಡಮನಿ, ಕುವೆಂಪು ಅವರ ಶೂದ್ರ ತಪಸ್ವಿ ನಾಟಕ ಕುರಿತು ವಿಷಯ ಮಂಡನೆ ಮಾಡಿದರು. ಗದಗನ ಪ್ರೊ.ಸಿದ್ಧಲಿಂಗೇಶ ಸಜ್ಜನಶೆಟ್ಟರ ಅಧ್ಯಕ್ಷತೆ ವಹಿಸಿದ್ದರು. ಎರಡನೇ ಗೋಷ್ಠಿಯಲ್ಲಿ ಯರಗಟ್ಟಿಯ ಡಾ.ರಾಜಶೇಖರ ಬಿರಾದಾರ, ಕಂಬಾರ ಅವರ ಶಿವರಾತ್ರಿ ನಾಟಕ ಕುರಿತು ವಿಷಯ ಮಂಡನೆ ಮಾಡಿದರು. ರಂಗನಿರ್ದೇಶಕರಾದ ಪ್ರೊ.ಶ್ರೀಹರಿ ಧೂಪದ ಅಧ್ಯಕ್ಷತೆ ವಹಿಸಿದ್ದರು.

ಮೂರನೇ ಗೋಷ್ಠಿಯಲ್ಲಿ ಧಾರವಾಡದ ಡಾ.ರುದ್ರೇಶ ಮೇಟಿ, ಕಾರ್ನಾಡ ಅವರ ತಲೆದಂಡ ನಾಟಕ ಕುರಿತು ವಿಷಯ ಮಂಡನೆ ಮಾಡಿದರು. ಬೀಳಗಿಯ ಡಾ.ವಿಜಯಶ್ರೀ ಇಟ್ಟಣ್ಣವರ ಅಧ್ಯಕ್ಷತೆ ವಹಿಸಿದ್ದರು. ಸಾಹಿತ್ಯ ಅಕಾಡೆಮಿ ಸದಸ್ಯ ಮಹಾದೇವ ಬಸರಕೋಡ, ಸಾಹಿತಿ ಡಾ.ಸಣ್ಣವೀರಣ್ಣ ದೊಡ್ಡಮನಿ, ಕನ್ನಡ ಸಾಹಿತ್ಯ ಪರಿಷತ್ತಿನ ತಾಲೂಕು ಅಧ್ಯಕ್ಷ ಪಾಂಡುರಂಗ ಸಣ್ಣಪ್ಪನವರ,

## ಜೂನ್.12ರಿಂದ ವಿಕಸಿತ ಕೃಷಿ ಸಂಕಲ್ಪ ಅಭಿಯಾನ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮೇ.27-ಭಾರತ ಸರ್ಕಾರದ ಕೇಂದ್ರ ಕೃಷಿ ಮತ್ತು ರೈತ ಕಲ್ಯಾಣ ಹಾಗೂ ಗ್ರಾಮೀಣ ಅಭಿವೃದ್ಧಿ ಸಚಿವಾಲಯದಿಂದ 2025 ನೇ ಸಾಲಿನ ಪೂರ್ವ ಮುಂಗಾರಿನಲ್ಲಿ ವಿಕಸಿತ ಕೃಷಿ ಸಂಕಲ್ಪ ಅಭಿಯಾನ ಎಂಬ ರೈತ ಕಾರ್ಯಕ್ರಮವನ್ನು ಭಾರತೀಯ ಕೃಷಿ ಅನುಸಂಧಾನ ಪರಿಷತ್, ಕೃಷಿ ಮತ್ತು ತೋಟಗಾರಿಕೆ ವಿಶ್ವವಿದ್ಯಾಲಯಗಳು, ಜಿಲ್ಲಾ ಕೃಷಿ, ತೋಟಗಾರಿಕೆ, ಮತ್ತು ಸಂಬಂಧಿತ ಇಲಾಖೆಗಳು ಮತ್ತು ಕೃಷಿ ವಿಜ್ಞಾನ ಕೇಂದ್ರಗಳ ಸಹಯೋಗದಲ್ಲಿ ಹಮ್ಮಿಕೊಳ್ಳಲಾಗುತ್ತಿದೆ.

ಈ ಅಭಿಯಾನ ಬಾಗಲಕೋಟೆ ಜಿಲ್ಲೆಯ 6 ತಾಲೂಕಿನಲ್ಲಿ ಮೇ. 29 ರಿಂದ ಜೂನ್ 12 ರವರೆಗೆ ನಡೆಯಲಿದ್ದು, ಈ ಅಭಿಯಾನದಲ್ಲಿ ಸರ್ಕಾರ ದೇಶದ ಸುಮಾರು 700 ಜಿಲ್ಲೆಗಳಲ್ಲಿನ 1.5 ರಿಂದ 2 ಕೋಟಿ ರೈತರನ್ನು ತಲುಪಿ ಅವರಿಗೆ ಕೃಷಿಯಲ್ಲಿ ಅವಶ್ಯಕ ಮಾಹಿತಿ ನೀಡುವುದರ ಜೊತೆಗೆ ನೇರ ಸಂವಾದ ನಡೆಸಲು ಸಿದ್ಧತೆ ನಡೆಸಿದೆ.

ಅಭಿಯಾನದ ಉದ್ದೇಶದಂತೆ ಬಾಗಲಕೋಟೆ ಜಿಲ್ಲೆಯಲ್ಲಿ 15 ದಿನಗಳಲ್ಲಿ ವಿವಿಧ ತಾಲೂಕಿನ ಹಳ್ಳಿಗಳಲ್ಲಿ ಸುಮಾರು 17,000 ರೈತರನ್ನು ಸಂಪರ್ಕಿಸಿ ಅವರಿಗೆ ಕೃಷಿಯಲ್ಲಿ ನವೀನ ತಂತ್ರಜ್ಞಾನಗಳ ಪರಿಚಯ, ಮಣ್ಣು ಮತ್ತು ನೀರು ಪರೀಕ್ಷೆಯ ಮಹತ್ವ, ಸಮಗ್ರ ಕೃಷಿ ಮತ್ತು ಬೆಳೆಗಳ ಸಮಗ್ರ ನಿರ್ವಹಣೆ, ಜಾನುವಾರುಗಳ ನಿರ್ವಹಣೆ, ತೆ-ೂೕಟಗಾರಿಕೆ ಬೆಳೆಗಳ ನಿರ್ವಹಣೆ, ಹವಾಮಾನ ಮಾಹಿತಿ ಹಾಗೂ ಇನ್ನಿತರ ಕೃಷಿ ಚಟುವಟಿಕೆಗಳ ಬಗ್ಗೆ ಕೇಂದ್ರದ ವಿಷಯ ತಜ್ಞರು, ಐ.ಸಿ.ಎ.ಆರ್ ಮತ್ತು ತೋಟಗಾರಿಕೆ ವಿಶ್ವವಿದ್ಯಾಲಯದ ವಿಜ್ಞಾನಿಗಳಿಂದ ಮಾಹಿತಿ ಒದಗಿಸಲಾಗುತ್ತದೆ ಎಂದು ಬಾಗಲಕೋಟೆ ಕೃಷಿ ವಿಜ್ಞಾನ ಕೇಂದ್ರದ ಮುಖ್ಯಸ್ಥ ಡಾ.ಗುರುದತ್ತ ಹೆಗಡೆ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಆಫ್ರಿಕನ್ ಹಂದಿ ಜ್ವರ : ಕಟ್ಟುನಿಟ್ಟಿನ ನಿರ್ಬಂಧ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮೇ.27-ಜಿಲ್ಲೆಯ ಇಳಕಲ್ ತಾಲೂಕಿನ ಗೊರಬಾಳ ಗ್ರಾಮದ ಹಂದಿ ಸಾಕಾಣಿಕೆ ಕೇಂದ್ರದಲ್ಲಿ ಆಫ್ರಿಕನ್ ಹಂದಿ ಜ್ವರ ದೃಢಪಟ್ಟ ಹಿನ್ನೆಲೆಯಲ್ಲಿ ಜಿಲ್ಲಾಡಳಿತ ಕಟ್ಟುನಿಟ್ಟಿನ ಕ್ರಮಕೈಗೊಂಡಿದೆ ಎಂದು ಜಿಲ್ಲಾಧಿಕಾರಿ ಜಾನಕಿ ಕೆ.ಎಂ.ಹೇಳಿದ್ದಾರೆ.

ಸಾಕಾಣಿಕೆ ಕೇಂದ್ರದಿಂದ ಒಂದು ಕಿ.ಮೀ.ವ್ಯಾಪ್ತಿಯನ್ನು ರೋಗಪೀಡಿತ ವಲಯ ಹಾಗೂ 1.10 ಕಿ.ಮೀ.ವ್ಯಾಪ್ತಿಯನ್ನು ಜಾಗೃತ ವಲಯವೆಂದು ಘೋಷಿಸಲಾಗಿದೆ. ರೋಗಪೀಡಿತ ವಲಯದಲ್ಲಿನ ಎಲ್ಲಾ ಹಂದಿ ಫಾರಂಗಳನ್ನು ಮುಚ್ಚಿ, ಹಂದಿಗಳನ್ನು ನಿಯಮಾನುಸಾರ ವಧೆಮಾಡಿ ವೈಜ್ಞಾನಿಕವಾಗಿ ವಿಲೇವಾರಿ ಮಾಡಬೇಕೆಂದು ಆದೇಶಿಸಲಾಗಿದೆ. ವಾಹನ, ಜನರ ಓಡಾಟ ಹಾಗೂ ಹಂದಿಮಾಂಸ ಮಾರಾಟವನ್ನೂ ಸಂಪೂರ್ಣವಾಗಿ ನಿಷೇಧಿಸಲಾಗಿದೆ.

ಜಾಗೃತ ವಲಯದ ಹಂದಿ ಸಾಕಾಣಿಕೆದಾರರು ಹೊಸ ಹಂದಿಗಳನ್ನು ತರಬಾರದು. ಹಂದಿಗಳಿಗೆ ಬೇಯಿಸಿದ ಆಹಾರ ನೀಡಬೇಕು. ಫಾರಂಗಳ ಪ್ರವೇಶ ದ್ವಾರದಲ್ಲಿ ಸೋಂಕು ನಿವಾರಕದೊಂದಿಗೆ ಕಾಲು ತೊಳೆಯುವ ವ್ಯವಸ್ಥೆ ಮಾಡಬೇಕು. ಈ ಕ್ರಮಗಳನ್ನು ಪಶುಸಂಗೋಪನಾ ಇಲಾಖೆ ಮಾರ್ಗದರ್ಶನದಲ್ಲಿ ಎಲ್ಲ ಇಲಾಖೆ ಸಹಯೋಗದಿಂದ ಕಡ್ಡಾಯವಾಗಿ ಜಾರಿಗೆ ತರಲಾಗಿದೆ ಎಂದು ಜಿಲ್ಲಾಧಿಕಾರಿ ಕೆ.ಎಮ್. ಜಾನಕಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮೇ.31ರಂದು ಸಾರಿಗೆ ಅದಾಲತ್

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಮೇ 27: ಇಲ್ಲಿನ ಸಾರಿಗೆ ಇಲಾಖೆಯ ಕಚೇರಿಯಲ್ಲಿ ಮೇ.31ರ ಬೆಳಿಗ್ಗೆ 12ಗಂಟೆಗೆ ಸಾರ್ವಜನಿಕರ ಕುಂದುಕೊರತೆ ಅಹವಾಲು ಸ್ವೀಕರಿಸಲು ಸಾರಿಗೆ ಅದಾಲತ್ ಹಮ್ಮಿಕೊಳ್ಳಲಾಗಿದೆ. ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ತಮ್ಮ ಸಮಸ್ಯೆಗಳನ್ನು ಪರಿಹಾರಿಸಿಕೊಳ್ಳಬಹುದಾಗಿದೆ ಎಂದು ಪ್ರಾದೇಶಿಕ ಸಾರಿಗೆ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕೋವಿಡ್-ಭಯ ಬೇಡ, ಎಚ್ಚರಿಕೆ ಅಗತ್ಯ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮೇ.27-ರಾಜ್ಯದಲ್ಲಿ ಕಳೆದ 20 ದಿನಗಳಿಂದ ಕೋವಿಡ್-19 ಪ್ರಕರಣಗಳಲ್ಲಿ ಏರಿಕೆ ಕಂಡುಬಂದಿದ್ದರೂ ಜಿಲ್ಲೆಯಲ್ಲಿ ಪರಿಸ್ಥಿತಿ ಹತೋಟಿಯಲ್ಲಿದೆ. ಸಾರ್ವಜನಿಕರು ಅನಗತ್ಯವಾಗಿ ಭಯ ಪಡುವ ಅಗತ್ಯವಿಲ್ಲ. ಈ ವರ್ಷ ಜಿಲ್ಲೆಯಲ್ಲಿ ಯಾವುದೇ ಕೋವಿಡ್ ಪ್ರಕರಣ ವರದಿಯಾಗಿಲ್ಲ. ಆದರೂ ಮುಂಜಾಗ್ರತಾ ಕ್ರಮವಾಗಿ ಜಿಲ್ಲೆಯ ಎಲ್ಲ ಸರ್ಕಾರಿ ಆಸ್ಪತ್ರೆಗಳಲ್ಲಿ ಹಾಸಿಗೆಗಳನ್ನು ಕಾಯ್ದಿರಿಸಲಾಗಿದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳು ತಿಳಿಸಿದ್ದಾರೆ.

ಸಾಮಾನ್ಯ ಮುಂಜಾಗ್ರತಾ ಕ್ರಮಗಳಾಗಿ ಕೈ ತೊಳೆಯುವುದು, ಮಾಸ್ಕ್ ಧರಿಸುವುದು, ಟಿಶ್ಯೂ ಬಳಸುವುದು, ರೋಗದ ಲಕ್ಷಣಗಳು ಕಂಡುಬಂದರೆ ತಕ್ಷಣ ವೈದ್ಯರನ್ನು ಸಂಪರ್ಕಿಸುವುದು ಮತ್ತು ಗರ್ಭಿಣಿಯರು, ಮಕ್ಕಳು ಹಾಗೂ ಆರೋಗ್ಯಸಮಸ್ಯೆ ಹೊಂದಿರುವವರು ಜನಸಂದಣಿ ಪ್ರದೇಶಗಳಲ್ಲಿ ಮಾಸ್ಕ್ ಧರಿಸುವುದು ಅಗತ್ಯವಾಗಿದೆ. ಸಹಾಯಕ್ಕಾಗಿ ಉಚಿತ ಆರೋಗ್ಯ ಸಹಾಯವಾಣಿ 104 ಕ್ಕೆ ಕರೆ ಮಾಡುವಂತೆ ಸಾರ್ವಜನಿಕರಿಗೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಕಲಬುರಗಿ-ಕೊಲ್ಹಾಪುರ ಎಕ್ಸ್‌ಪ್ರೆಸ್ ರೈಲಿಗೆ 3 ಹೆಚ್ಚುವರಿ

## ಸಾಮಾನ್ಯ ದ್ವಿತೀಯ ದರ್ಜೆಯ ಬೋಗಿಗಳ ಜೋಡಣೆ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಮೇ.27-ಕೇಂದ್ರ ರೈಲ್ವೆ ಸೋಲಾಪುರ ವಿಭಾಗದಿಂದ ಪ್ರಯಾಣಿಕರ ಬೇಡಿಕೆಯನ್ನು ಗಮನದಲ್ಲಿಟ್ಟುಕೊಂಡು ರೈಲು ಸಂಖ್ಯೆ 22155/22156 ಕಲಬುರಗಿ-ಶ್ರೀ ಛತ್ರಪತಿ ಶಾಹು ಮಹಾರಾಜ್ ಟರ್ಮಿನಸ್ ಕೊಲ್ಹಾಪುರ ಎಕ್ಸ್‌ಪ್ರೆಸ್ ರೈಲ್ವೆಗೆ 3 ಹೆಚ್ಚುವರಿ ಸಾಮಾನ್ಯ ದ್ವಿತೀಯ ದರ್ಜೆಯ ಬೋಗಿಗಳನ್ನು ದಿನಾಂಕ: 10-06-2025 ರಿಂದ ಜಾರಿಗೆ ಬರುವಂತೆ ಜೋಡಿಸಲು ನಿರ್ಧರಿಸಲಾಗಿದೆ ಎಂದು ಕೇಂದ್ರ ರೈಲ್ವೆಯ ಸೋಲಾಪುರ ವಿಭಾಗದ ಸಾರ್ವಜನಿಕ ಸಂಪರ್ಕ ಇಲಾಖೆಯ ಪ್ರಕಟಣೆಯಲ್ಲಿ ತಿಳಿಸಲಾಗಿದೆ.

ಈ ರೈಲಿನಲ್ಲಿ 2 ಎಸಿ-III ಟೈರ್, 3 ಸ್ಲೀಪರ್ ಕ್ಲಾಸ್, 10 ಸೆಕೆಂಡ್ ಸಿಟ್ಟಿಂಗ್, 3 ಜನರಲ್ ದ್ವಿತೀಯ ದರ್ಜೆ ಮತ್ತು 2 ಲಗೇಜ್ ಕಮ್ ಗಾರ್ಡ್ ಬ್ರೇಕ್ ವ್ಯಾನ್‌ಗಳು (20 ಬೋಗಿಗಳು) ಇರುತ್ತದೆ. ಪ್ರಯಾಣಿಕರು ಬದಲಾವಣೆಗಳನ್ನು ಗಮನಿಸಿ ಸೌಲಭ್ಯವನ್ನು ಪಡೆದುಕೊಳ್ಳಬೇಕೆಂದು ಅವರು ತಿಳಿಸಿದ್ದಾರೆ.

## ಸಸ್ಯಹಾರಿ ಜಾಗೃತಿ ಜಾಥಾ: ಮಾಂಸಾಹಾರ ತ್ಯಜಿಸುವಂತೆ ಸಲಹೆ




ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮೇ.27-ವಿದ್ಯಾಗಿರಿ, ನವನಗರ ಹಾಗೂ ಗದ್ದನಕೇರಿಗಳಲ್ಲಿ ಪಿರಮಿಡ್ ಸ್ಪಿರಿಚುವಲ್ ಸೊಸೈಟೀಸ್ ಮೂವ್ಮೆಂಟ್ ಆಫ್ ಇಂಡಿಯಾದಿಂದ ಬೃಹತ್ ಸಸ್ಯಹಾರಿ ಜಾಗೃತಿ ಜಾಥಾ ಹಮ್ಮಿಕೊಳ್ಳಲಾಗಿತ್ತು. ಜಾಥಾದಲ್ಲಿ ಪಾಲ್ಗೊಂಡಿದ್ದ ಸ್ವಯಂ ಸೇವಕರು ಮಾಂಸಾಹಾರದಿಂದ ಉಂಟಾಗುವ ದುಷ್ಪರಿಣಾಮಗಳ ಕುರಿತು ಜಾಗೃತಿ ಮೂಡಿಸಿದರು. ಜಾಥಾದ ನೇತೃತ್ವ ವಹಿಸಿದ್ದ ಧ್ಯಾನ ತರಬೇತುದಾರ ರಾಜಶೇಖರ ಅಡಿಕೆನ್ನವರ ಮಾತನಾಡಿ, ಹಿಂಸಾಚಾರ, ಗಲಭೆ, ಅಶಾಂತಿ, ಖಿನ್ನತೆ, ನೆಮ್ಮದಿ ರಹಿತವಾದ ಜೀವನ, ಕಾಯಿಲೆಗಳಿಗೆ ಮಾಂಸಹಾರ ಸೇವನೆ ಪ್ರಮುಖ ಕಾರಣವಾಗಿದೆ. ಪ್ರಾಣಿಗಳಿಗೂ ನಮ್ಮಂತೆ ಜೀವಿಸುವ ಹಕ್ಕು ಇದ್ದು, ಅವುಗಳನ್ನು ಕೊಂದು ತಿನ್ನುವುದು ಒಪ್ಪುವಂಥದಲ್ಲ, ಹೀಗಾಗಿ ಮಾಂಸಹಾರ ತ್ಯಜಿಸಿ ಸಸ್ಯಹಾರವನ್ನು ಪ್ರಚುರಪಡಿಸುವುದಕ್ಕಾಗಿ ಜಾಥಾ ಏರ್ಪಡಿಸಲಾಗಿದೆ ಎಂದು ತಿಳಿಸಿದರು.

ಸುಭಾಷ್ ಪತ್ರಿಜಿ ಅವರು ಸರಳ ಸೂತ್ರದ ಧ್ಯಾನವನ್ನು ಕಲಿಸಿಕೊಟ್ಟಿದ್ದು, ಪ್ರತಿ ಮನೆಗೂ ಧ್ಯಾನವನ್ನು ತಲುಪಿಸಿ ಜ್ಞಾನವನ್ನು ಬೆಳಗುವ ಗುರಿ ನಮ್ಮದಾಗಿದೆ. ಮಾಂಸಾಹಾರ ತ್ಯಜಿಸುವುದರಿಂದ ದೈಹಿಕ ಹಾಗೂ ಮಾನಸಿಕ ಆರೋಗ್ಯ ವೃದ್ಧಿಯಾಗುತ್ತದೆ. ಜೀವನದಲ್ಲಿ ಗುರಿಯಿಟ್ಟುಕೊಂಡು ಸಾಗಲು ಸಹಕಾರಿ ಆಗುತ್ತದೆ. ಮನಸ್ಸಿನ ನಿಯಂತ್ರಣಕ್ಕಾಗಿ ಧ್ಯಾನವನ್ನು ಮಾಡಬಹುದಾಗಿದೆ ಎಂದರು.

ಬಾಗಲಕೋಟೆಯ ವಿದ್ಯಾಗಿರಿಯ ಬಿಪ್ಸ್ ಶಾಲೆ, ನವನಗರದ ಸೆಕ್ಟರ್ ನಂ.60ರ ನೀರಾವರಿ ಕಚೇರಿ ಆವರಣದಿಂದ ಹಾಗೂ ಗದ್ದನಕೇರಿ ತಾಂಡಾದ ಶ್ರೀದುರ್ಗಾ ಪ್ರಾಥಮಿಕ ಶಾಲೆ ಆವರಣಗಳಲ್ಲಿ ಜಾಥಾ ಏರ್ಪಡಿಸಲಾಗಿತ್ತು. ನೂರಾರು ಸಂಖ್ಯೆಯಲ್ಲಿ ಜನ ಪಾಲ್ಗೊಂಡು ಜಾಥಾ ಯಶಸ್ವಿಗೊಳಿಸಿದ್ದಾರೆ ಎಂದು ಅವರು ತಿಳಿಸಿದರು. ಸಾಯಿ ಮಂದಿರದ ಹಿರಿಯ ನಾಗರಿಕರ ವೇದಿಕೆ, ಕುಮಾರೇಶ್ವರ ಶಾಂತಾಶ್ರಮ, ಪರಿಸರ ಬಳಗ ಹಾಗೂ ನಿಸರ್ಗ ಶಿಕ್ಷಣ ಸಂಸ್ಥೆ ಹಾಗೂ ಬವಿವ ಸಂಸ್ಥೆ ಮತ್ತು ಕೊಟಕ್ ಮಹಿಂದ್ರಾ ಸಹಭಾಗಿತ್ವದ ಗ್ರಾಮೀಣ ಅಭಿವೃದ್ಧಿ ಮತ್ತು ಸ್ವ ಉದ್ಯೋಗ ತರಬೇತಿ ಕೇಂದ್ರ, ಬ್ಯಾಂಕ ಆಫ್ ಬರೋಡಾ ಮತ್ತು ನಗರದ ಕಾಲೇಜು ವಿದ್ಯಾರ್ಥಿಗಳು ಜಾಥಾದಲ್ಲಿ ಪಾಲ್ಗೊಂಡಿದ್ದರು.

# ಜಿಲ್ಲೆಯ ನಗರ ಸ್ಥಳೀಯ ಸಂಸ್ಥೆಗಳ ಅಭಿವೃದ್ಧಿಗೆ ಹೆಚ್ಚುವರಿಯಾಗಿ 250 ಕೋಟಿ ನೀಡಲಾಗಿದೆ:ಸಚಿವ ರಹೀಂ ಖಾನ್

ಮಲ್ಲಮ್ಮ ನುಡಿ ವಾರ್ತೆ

ಬೀದರ:ಮೇ.26:ಬೀದರ ಜಿಲ್ಲೆಯ ಸ್ಥಳೀಯ ಸಂಸ್ಥೆಗಳ ಅಭಿವೃದ್ಧಿಗೆ ಹೆಚ್ಚುವರಿಯಾಗಿ 250 ಕೋಟಿ ಹಣವನ್ನು ನೀಡಲಾಗಿದೆ ಎಂದು ಪೌರಾಡಳಿತ ಹಾಗೂ ಹಜ್ ಸಚಿವರಾದ ರಹೀಂ ಖಾನ್ ಅವರು ತಿಳಿಸಿದರು.

ಅವರು ಮಂಗಳವಾರ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಬೀದರ ಜಿಲ್ಲೆಯ ನಗರ ಸ್ಥಳೀಯ ಸಂಸ್ಥೆಗಳಿಗೆ ಸಂಬಂಧಿಸಿದಂತೆ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆಯನ್ನು ವಹಿಸಿ ಮಾತನಾಡಿದರು.ಮುಖ್ಯಮಂತ್ರಿಗಳ ಅಮೃತ ನಗರೋತ್ಥಾನ ಯೋಜನೆ ಹಂತ-4ರ ಅಡಿಯಲ್ಲಿ ಅನೇಕ ಕಾಮಗಾರಿಗಳನ್ನು ಹಮ್ಮಿಕೊಳ್ಳಲಾಗಿದ್ದು ಅದರಲ್ಲಿ ಭಾಗಶಃ ಪರ್ಣಗೊಂಡಿದ್ದು, ಇನ್ನು ಕೆಲವು ಕರ್ಯ ಪ್ರಗತಿಯಲ್ಲಿವೆ. 15ನೇ ಹಣಕಾಸು ಆಯೋಗದ ಅನುದಾನದ ಅಡಿಯಲ್ಲಿ ನಗರ ಸ್ಥಳೀಯ ಸಂಸ್ಥೆಗಳಿಗೆ ಕುಡಿಯುವ ನೀರಿನ ಪೂರೈಕೆ ಮತ್ತು ಘನತ್ಯಾಜ್ಯ ನರ್ವಹಣೆಗೆ ಸಂಬಂಧಿಸಿದಂತೆ ಅನೇಕ ಕರ್ಯಕ್ರಮಗಳು ಕೈಗೊಳ್ಳಲಾಗಿದೆ ಹಾಗೂ ರಾಜ್ಯ ಹಣಕಾಸು ಆಯೋಗದಿಂದ ಖಅಖಕ ಮತ್ತು ಖಿಖಕ ಯೋಜನೆಗಳ ಅಡಿಯಲ್ಲಿ ಅಭಿವೃದ್ಧಿ ಕಾಮಗಾರಿಗಳನ್ನು ಹಮ್ಮಿಕೊಳ್ಳಲಾಗಿದೆ ಎಂದರು.ಸ್ವಚ್ಛ




ಭಾರತ ಮಿಷನ್ ರ್ಬನ್ 2.0 ಯೋಜನೆಯಡಿ ನಗರ ಪ್ರದೇಶಗಳಲ್ಲಿ ಗೃಹ ಶೌಚಾಲಯಗಳು ಮತ್ತು ಸರ್ವಜನಿಕ ಶೌಚಾಲಯ ನರ್ಮಾಣ ಮಾಡಲಾಗಿದೆ. ಅಮೃತ 2.0 ಯೋಜನೆ ಅಡಿಯಲ್ಲಿ ಉದ್ಯಾನವನ ಹಾಗೂ ಕೆರೆಗಳ ಪುನಶ್ಚೇತನ ಮತ್ತು ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ. ಹುಮನಾಬಾದನಲ್ಲಿ 3 ಪಾರ್ಕಗಳ ನಿರ್ಮಾಣ ಮತ್ತು ಬೀದರನಲ್ಲಿ ಪಾಪನಾಶ ಕೆರೆ 5 ಕೋಟಿ ರೂ. ಮತ್ತು ಗರ್ನಳ್ಳಿ ಕರೆ 15 ಕೋಟಿ ರೂ. ಅಭಿವೃದ್ಧಿ ಕಾಮಗಾರಿಗಳು ಪ್ರಗತಿಯಲ್ಲಿವೆ. ಜಿಲ್ಲೆಯಲ್ಲಿ ಹೊಸದಾಗಿ 5 ಇಂದಿರಾ ಕ್ಯಾಂಟೀನ್ ಗಳು ಆರಂಭವಾಗಲಿವೆ, ಬೀದರ ನಗರದಲ್ಲಿ 3, ಚಿಟ್ಟಗುಪ್ಪಾ ಮತ್ತು ಹಳ್ಳಿಖೇಡ (ಬಿ) ಗಳಲ್ಲಿ ತಲಾ ಒಂದು ಆರಂಭವಾಗಲಿವೆ. ಇ-ಖಾತಾಗೆ ಸಂಬಂಧಿಸಿದ ಕರ್ಯಗಳು ಕೂಡ ತ್ವರಿತವಾಗಿ ಪ್ರಗತಿ ಕಾಣಬೇಕು ಎಂದು ತಿಳಿಸಿದರು.ಹುಮನಾಬಾದ ಶಾಸಕರಾದ ಡಾ. ಸಿದ್ಧಲಿಂಗಪ್ಪ ಎನ್. ಪಾಟೀಲ್ ಮಾತನಾಡಿ, ಹುಮನಾಬಾದ, ಚಿಟ್ಟಗುಪ್ಪಾ, ಹಳ್ಳಿಖೇಡ (ಬಿ) ಪುರಸಭೆಯಲ್ಲಿ ಖಾಲಿ ಇರುವ ಹುದ್ದೆಗಳನ್ನು ರ್ತಿ ಮಾಡಿಕೊಳ್ಳಲು ಸಚಿವರಿಗೆ ಮನವಿ ಮಾಡಿದರು

ಬೀದರ ದಕ್ಷಿಣ ಶಾಸಕರಾದ ಶೈಲೇಂದ್ರ ಬೆಲ್ದಾಳೆ ಅವರು ಮಾತನಾಡಿ, ಹೊಸದಾಗಿ ಆಗಿರುವ ಮಹಾನಗರ ಪಾಲಿಕೆಗೆ ಬೀದರ ದಕ್ಷಿಣದ 8 ಗ್ರಾಮಗಳು ಸರ್ಪಡೆ-ಯಾಗಿದ್ದು, ಅವುಗಳ ಸರ್ವಾಂಗೀಣ ಅಭಿವೃದ್ಧಿಗೆ ಕ್ರಮ ಕೈಗೊಳ್ಳಲು ಸಚಿವರಿಗೆ ಮನವಿ ಮಾಡಿದರು.

ಈ ಸಂರ್ಭದಲ್ಲಿ ಜಿಲ್ಲಾಧಿಕಾರಿಗಳಾದ ಶಿಲ್ಪಾ ರ್ಮಾ, ಪೌರಾಡಳಿತ ಮತ್ತು ಹಜ್ ಸಚಿವರ ಆಪ್ತ ಕರ್ಯರ್ಶಿ ಕೆ. ಮುರಳಿಧರ, ನಗರಸಭೆ ಅಧ್ಯಕ್ಷರಾದ ಮಹಮ್ಮದ ಗೌಸ, ಬೀದರ ನಗರಸಭೆಯ ಆಯುಕ್ತರಾದ ಶಿವರಾಜ್ ರಾಥೋಡ್ ಹಾಗೂ ಎಲ್ಲಾ ನಗರಸಭೆ ಮತ್ತು ಪುರಸಭೆ ಮತ್ತು ಪಟ್ಟಣ ಪಂಚಾಯಿತಿಗಳ ಮುಖ್ಯ ಅಧಿಕಾರಿಗಳು ಸೇರಿದಂತೆ ಜಿಲ್ಲಾ ಮತ್ತು ತಾಲೂಕು ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

# ರಜಾದಿನಗಳಂದು ಉಪನೋಂದಣಿ ಕಚೇರಿಗಳು ಕಾರ್ಯನಿರ್ವಹಣೆ

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು,ಮೇ27:ಸಾರ್ವಜನಿಕರ ಉಪಯೋಗಕ್ಕಾಗಿ ರಾಜ್ಯದಲ್ಲಿ ಜಿಲ್ಲೆಗೆ ಒಂದು ಉಪನೋಂದಣಾಧಿಕಾರಿಗಳ ಕಚೇರಿಯು 2 ಮತ್ತು 4ನೇ ಶನಿವಾರ ಹಾಗೂ ಎಲ್ಲಾ ಭಾನುವಾರಗಳಂದು ಕಾರ್ಯನಿರ್ವಹಿಸಲು ಸರ್ಕಾರ ಆದೇಶ ಹೊರಡಿಸಿದೆ.ಬಸವನಗುಡಿ ಉಪನೋಂದಣಾಧಿಕಾರಿಗಳ ಕಚೇರಿ, ಗಾಂಧಿನಗರ ಉಪನೋಂದಣಾಧಿಕಾರಿಗಳ ಕಚೇರಿ, ಜಯನಗರ ಉಪನೋಂದಣಾಧಿಕಾರಿಗಳ ಕಚೇರಿ, ರಾಜಾಜಿನಗರದ ಮಾದನಾಯಕನಹಳ್ಳಿ ಉಪನೋಂದಣಾಧಿಕಾರಿಗಳ ಕಚೇರಿ, ಶಿವಾಜಿನಗರ ಉಪನೋಂದಣಾಧಿಕಾರಿಗಳ ಕಚೇರಿ, ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೇವನಹಳ್ಳಿ ಉಪನೋಂದಣಾಧಿಕಾರಿಗಳ ಕಚೇರಿ, ಚಿತ್ರದುರ್ಗ ಉಪನೋಂದಣಾಧಿಕಾರಿಗಳ ಕಚೇರಿ, ಚಿಕ್ಕಬಳ್ಳಾಪುರ ಜಿಲ್ಲೆಯ ಬಾಗೇಪಲ್ಲಿ ಉಪನೋಂದಣಾಧಿಕಾರಿಗಳ ಕಚೇರಿ, ದಾವಣಗೆರೆ ಉಪನೋಂದಣಾಧಿಕಾರಿಗಳ ಕಚೇರಿ, ರಾಮನಗರ ಉಪನೋಂದಣಾಧಿಕಾರಿಗಳ ಕಚೇರಿ, ಶಿವಮೊಗ್ಗ ಉಪನೋಂದಣಾಧಿಕಾರಿಗಳ ಕಚೇರಿ, ತುಮಕೂರು ಜಿಲ್ಲೆಯ ಕುಣಿಗಲ್ ಉಪನೋಂದಣಾಧಿಕಾರಿಗಳ ಕಚೇರಿ, ಕೋಲಾರ ಉಪನೋಂದಣಾಧಿಕಾರಿಗಳ ಕಚೇರಿ, ಬೆಳಗಾವಿ ಜಿಲ್ಲೆಯ ಮೂಡಲಗಿ ಉಪನೋಂದಣಾಧಿಕಾರಿಗಳ ಕಚೇರಿ, ಬಾಗಲಕೋಟೆ ಜಿಲ್ಲೆಯ ಇಳಕಲ್ ಉಪನೋಂದಣಾಧಿಕಾರಿಗಳ ಕಚೇರಿ, ಧಾರವಾಡ ಜಿಲ್ಲೆಯ ಹುಬ್ಬಳ್ಳಿ ಉತ್ತರ ಉಪನೋಂದಣಾಧಿಕಾರಿಗಳ ಕಚೇರಿ, ಗದಗ್ ಜಿಲ್ಲೆಯ ಗಜೇಂದ್ರಗಢ ಉಪನೋಂದಣಾಧಿಕಾರಿಗಳ ಕಚೇರಿ, ಕಾರವಾರ/ಉತ್ತರಕನ್ನಡದ ಕುಮಟಾ ಉಪನೋಂದಣಾಧಿಕಾರಿಗಳ ಕಚೇರಿ, ಹಾವೇರಿ ಉಪನೋಂದಣಾಧಿಕಾರಿಗಳ ಕಚೇರಿ, ವಿಜಯಪುರ ಉಪನೋಂದಣಾಧಿಕಾರಿಗಳ ಕಚೇರಿ, ಚಾಮರಾಜನಗರ ಜಿಲ್ಲೆಯ ಕುದೇರು ಉಪನೋಂದಣಾಧಿಕಾರಿಗಳ ಕಚೇರಿ, ಹಾಸನ ಜಿಲ್ಲೆಯ ಸಕಲೇಶಪುರ ಉಪನೋಂದಣಾಧಿಕಾರಿಗಳ ಕಚೇರಿ, ಕೊಡಗು ಜಿಲ್ಲೆಯ ಮಡಿಕೇರಿ ಉಪನೋಂದಣಾಧಿಕಾರಿಗಳ ಕಚೇರಿ, ಚಿಕ್ಕಮಗಳೂರು ಉಪನೋಂದಣಾಧಿಕಾರಿಗಳ ಕಚೇರಿ, ದಕ್ಷಿಣಕನ್ನಡ ಜಿಲ್ಲೆಯ ಮಂಗಳೂರು ಸಿಟಿ ಉಪನೋಂದಣಾಧಿಕಾರಿಗಳ ಕಚೇರಿ, ಮಂಡ್ಯ ಜಿಲ್ಲೆಯ ಮಳವಳ್ಳಿ ಉಪನೋಂದಣಾಧಿಕಾರಿಗಳ ಕಚೇರಿ, ಮೈಸೂರು ಜಿಲ್ಲೆಯ ಮೈಸೂರು ದಕ್ಷಿಣ ಉಪನೋಂದಣಾಧಿಕಾರಿಗಳ ಕಚೇರಿ, ಉಡುಪಿ ಉಪನೋಂದಣಾಧಿಕಾರಿಗಳ ಕಚೇರಿ, ಕೊಪ್ಪಳ ಜಿಲ್ಲೆಯ ಗಂಗಾವತಿ ಉಪನೋಂದಣಾಧಿಕಾರಿಗಳ ಕಚೇರಿ, ಬೀದ???ನ ಉಪನೋಂದಣಾಧಿಕಾರಿಗಳ ಕಚೇರಿ,ಗುಲ್ಬರ್ಗಾ ಉಪನೋಂದಣಾಧಿಕಾರಿಗಳ ಕಚೇರಿ, ರಾಯಚೂರು ಉಪನೋಂದಣಾಧಿಕಾರಿಗಳ ಕಚೇರಿ, ಯಾದಗಿರಿ ಉಪನೋಂದಣಾಧಿಕಾರಿಗಳ ಕಚೇರಿ,ಬಳ್ಳಾರಿ ಉಪನೋಂದಣಾಧಿಕಾರಿಗಳ ಕಚೇರಿ ಹಾಗೂ ವಿಜಯನಗರ ಜಿಲ್ಲೆಯ ಹೂವಿನಹಡಗಲಿ ಉಪನೋಂದಣಾಧಿಕಾರಿಗಳ ಕಚೇರಿಗಳು ಕಾರ್ಯನಿರ್ವಹಿಸಲಿವೆ.

ಸಾರ್ವಜನಿಕರು

ಸಂಬಂಧಪಟ್ಟ ಜಿಲ್ಲೆಯ ಯಾವುದೇ ಸ್ವತ್ತುಗಳನ್ನು ಆ ಸಂಬಂಧಿಸಿದ ಉಪನೋಂದಣಾಧಿಕಾರಿಗಳ ಕಚೇರಿಯಲ್ಲಿ

ನೋಂದಣಿ ಮಾಡಿಸಿಕೊಳ್ಳಬಹುದಾಗಿದೆ. ಸಾರ್ವಜನಿಕರು

ಈ ಅವಕಾಶವನ್ನು ಸದುಪಯೋಗಪಡೆದುಕೊಳ್ಳಬೇಕು ಎಂದು ನೋಂದಣಿ ಮಹಾಪರಿವೀಕ್ಷಕರು ಮತ್ತು ಮುದ್ರಾಂಕಗಳ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬಿತ್ತನೆ ಬೀಜ, ರಸಗೊಬ್ಬರ ಕೊರತೆಯಿಲ್ಲ :ಸಂಸದ ಸಾಗರ ಖಂಡ್ರೆ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಮೇ.27:ತಾಲೂಕಿನ ರೈತರು ರೈತಸಂಪರ್ಕ ಕೇಂದ್ರಗಳಲ್ಲಿ ರಿಯಾಯಿತಿ ದರದಲ್ಲಿ ಬಿತ್ತನೆ ಬೀಜಗಳನ್ನು ಖರೀದಿಸಿ ಸರಕಾರದ ಸೌಲಭ್ಯದ ಸದುಪಯೋಗ ಪಡೆದುಕೊಳ್ಳಬೇಕು ಎಂದು ಸಂಸದ ಸಾಗರ ಖಂಡ್ರೆ ಹೇಳಿದರು.

ಪಟ್ಟಣದ ಪುರಭವನದಲ್ಲಿ ಕೃಷಿ ಇಲಾಖೆ ವತಿಯಿಂದ ಭಾನುವಾರ ಆಯೋಜಿಸಿದ್ದ 2025-26ನೆಯ ಸಾಲಿನ ಮುಂಗಾರು ಹಂಗಾಮಿನ ಬಿತ್ತನೆ ಬೀಜ ವಿತರಣೆಗೆ ಚಾಲನೆ ನೀಡಿ ಅವರು ಮಾತನಾಡಿದರು. ತಾಲೂಕಿನಲ್ಲಿ ಮುಂಗಾರು ಪೂರ್ವ ಉತ್ತಮ ಮಳೆ ಆಗುತ್ತಿದೆ. ಹಾಗಾಗಿ ರೈತರು ಬಿತ್ತನೆಗೆ ಸಜ್ಜಾಗುತ್ತಿದ್ದಾರೆ.

ಈ ಬಾರಿಯ ಮುಂಗಾರು ಹಂಗಾಮು ಆಶಾಯದಾಕದ ನಿರೀಕ್ಷೆಯಿದ್ದು ಬಿತ್ತನೆ ಬೀಜ ಮತ್ತು ರಸಗೊಬ್ಬರ ಸಮರ್ಪಕ ಪೂರೈಕೆಗೆ ಸರಕಾರ ಕ್ರಮ ಕೈಗೊಂಡಿದೆ.

ಹಾಗಾಗಿ ರೈತರು ಬಿತ್ತನೆ ಬೀಜ ಮತ್ತು ರಸಗೊಬ್ಬರದ ಬಗ್ಗೆ ಆತಂಕ ಪಡಬೇಕಿಲ್ಲ. ತಾಲೂಕಿನ ಎಲ್ಲ ರೈತ ಸಂಪರ್ಕ ಕೇಂದ್ರಗಳಲ್ಲಿ ಬಿತ್ತನೆ ಬೀಜದ ಲಭ್ಯತೆ ಇರಲಿದೆ. ಕೃಷಿ ಅಧಿಕಾರಿಗಳು ರೈತರಿಗೆ ಯಾವುದೇ ಕಾರಣಕ್ಕೂ ಬಿತ್ತನೆ ಬೀಜದ ಕೊರತೆ ಆಗದಂತೆ ನೋಡಿಕೊಳ್ಳಬೇಕು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ತಾಲೂಕು ಗ್ಯಾರಂಟಿ ಯೋಜನೆ ಅನುಷ್ಠಾನದ ಅಧ್ಯಕ್ಷ ಹಣಮತರಾವ ಚವ್ಹಾಣ, ಜಿಲ್ಲಾ ರೈತ ಸಂಘದ ಅಧ್ಯಕ್ಷ ಮಲ್ಲಿಕಾರ್ಜುನಸ್ವಾಮಿ,ಬಸವಕಲ್ಯಾಣ ಕೃಷಿ ಇಲಾಖೆ ಉಪನಿರ್ದೇಶಕ ಸೂರ್ಯಕಾಂತ ಬಿರಾದಾರ್, ತಾಲೂಕು ಕೃಷಿ ಸಮಾಜದ ಅಧ್ಯಕ್ಷ ರಮೇಶ ಪಾಟೀಲ್, ಪುರಸಭೆ ಅಧ್ಯಕ್ಷೆ

> ರೈತರನ್ನು ಆತ್ಮನಿರ್ಭರಗೊಳಿಸುವುದು ನಮ್ಮ ಮುಖ್ಯ ಗುರಿ. ಮುಂಗಾರು ಬೆಳೆಗಳಿಗೆ ಅಗತ್ಯವಾದ ಎಲ್ಲಾ ವಿಧದ ಬಿತ್ತನೆ ಬೀಜಗಳನ್ನು ರೈತರ ಬೇಡಿ-ಕೆಗೆ ಅನುಗುಣವಾಗಿ, ಸರಿಯಾದ ಸಮಯದಲ್ಲಿ,ರಿಯಾಯಿತಿ ದರದಲ್ಲಿ ವಿತರಿಸಬೇಕು.
>
> – ಸಾಗರ ಖಂಡ್ರೆ ಸಂಸದರು ಬೀದರ್

ಶಶಿಕಲಾ ಅಶೋಕ ಸಿಂದನಕೇರೆ, ಉಪಾಧ್ಯಕ್ಷ ವಿಜಯಕುಮಾರ ರಾಜಭವನ,ತಾಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿ ಸೂರ್ಯಕಾಂತ ಬಿರಾದಾರ್,ಕೆವಿಕೆ ಮುಖ್ಯಸ್ಥ ಡಾ.ಆರ್.ಎಲ್.ಜಾಧವ ಸೇರಿದಂತೆ ಹಲವರು ಇದ್ದರು.

ಸಹಾಯಕ ಕೃಷಿ ನಿರ್ದೇಶಕ ಪಿ.ಎಂ.ಮಲ್ಲಿಕಾರ್ಜುನ ಸ್ವಾಗತಿಸಿದರು. ದೀಪಕ ಠಮಕೆ ನಿರೂಪಿಸಿದರು. ಆಕಾಶ ಹಿಲಾಲಪೂರೆ ವಂದಿಸಿದರು.

# ಕೋವಿಡ್ ಎದುರಿಸಲು ಬೀದರ್ ಸಜ್ಜು

ಮಲ್ಲಮ್ಮ ನುಡಿ ವಾರ್ತೆ

ಬೀದರ. ಮೇ. 27 : ರಾಜ್ಯದ ಹಲವೆಡೆ ಕೋವಿಡ್ ಪ್ರಕರಣಗಳು ವರದಿಯಾಗುತ್ತಿರುವುದರ ಬೆನ್ನಲ್ಲೇ ಜಿಲ್ಲಾ ಆರೋಗ್ಯ ಇಲಾಖೆಯು ಮುನ್ನೆಚ್ಚರಿಕೆ ಕ್ರಮವಾಗಿ ಅದನ್ನು ಎದುರಿಸಲು ಎಲ್ಲ ರೀತಿಯ ಸಿದ್ಧತೆ ಮಾಡಿಕೊಂಡಿದೆ.

ನಗರದ ಬೀದರ್ ವೈದ್ಯಕೀಯ ವಿಜ್ಞಾನ ಸಂಸ್ಥೆಯ (ಬ್ರಿಮ್ಸ್) ಆವರಣದಲ್ಲಿರುವ ಹಳೆ ಸರ್ಕಾರಿ ಆಸ್ಪತ್ರೆಯ ಕಟ್ಟಡದ ಮೊದಲ ಮಹಡಿಯಲ್ಲಿ ವೆಂಟಿಲೇಟರ್ ಸೌಲಭ್ಯ ಹೊಂದಿರುವ ಒಂಬತ್ತು ಬೆಡ್‌ಗಳ ಪ್ರತ್ಯೇಕ ವಾರ್ಡ್ ಸ್ಥಾಪಿಸಲಾಗಿದೆ.

ಇನ್ನು, ಸೋಂಕಿತರಿಗೆ ಚಿಕಿತ್ಸೆ ಕೊಡುವುದಕ್ಕಾಗಿ ಅದೇ ಕಟ್ಟಡದ ನೆಲ ಮಹಡಿಯಲ್ಲಿ 20 ಹಾಸಿಗೆಗಳ ಮತ್ತೊಂದು ಪ್ರತ್ಯೇಕ ವಾರ್ಡ್ ಕೂಡ ಆರಂಭಿಸಲಾಗಿದೆ.

ಕೋವಿಡ್ ಪ್ರಕರಣಗಳ ಚಿಕಿತೆ-ಗಾಗಿಯೇ ವೈದ್ಯರು, ಸಿಬ್ಬಂದಿಯ ವ್ಯವಸ್ಥೆ ಮಾಡಲಾಗಿದೆ. ಆಕ್ಸಿಜನ್, ಪರೀಕ್ಷೆ, ಅಗತ್ಯ ಔಷಧೋಪಚಾರಕ್ಕೂ ಸಿದ್ಧತೆ ಮಾಡಿಕೊಳ್ಳಲಾಗಿದೆ.

ರಾಜ್ಯದ ಹಲವೆಡೆ ಈಗಾಗಲೇ ಕೋವಿಡ್ ಪ್ರಕರಣಗಳು ಪತ್ತೆಯಾಗಿವೆ. ಆದರೆ,ಬೀದರ್ ಜಿಲ್ಲೆಯಲ್ಲಿ ಇದುವರೆಗೆ ಯಾವುದೇ ಪ್ರಕರಣ ಬೆಳಕಿಗೆ ಬಂದಿಲ್ಲ. ಆದರೆ, ತೆಲಂಗಾಣ ಮತ್ತು ಮಹಾರಾಷ್ಟ್ರದೊಂದಿಗೆ ಜಿಲ್ಲೆ ಗಡಿ ಹಂಚಿಕೊಂಡಿದೆ. ಹೈದರಾಬಾದ್, ಸೊಲ್ಲಾಪೂರ, ಪುಣೆ, ಮುಂಬೈ ಮಹಾನಗರಗಳಿಗೆ ಜನರ ಓಡಾಟ ಹೆಚ್ಚಿದೆ. ಇದನ್ನೆಲ್ಲ ಮನಗಂಡೇ



ಆರೋಗ್ಯ ಇಲಾಖೆ ಹೆಚ್ಚಿನ ಎಚ್ಚರ ವಹಿಸಿದೆ.

'ಎರಡು ದಿನಗಳಿಂದ ಜನರ ಚಲನವಲನಗಳ ಮೇಲೆ ನಿಗಾ ವಹಿಸಿದ್ದೇವೆ. ಇದುವರೆಗೆ ಯಾವುದೇ ಕೋವಿಡ್ ಪ್ರಕರಣ ವರದಿಯಾಗಿಲ್ಲ. ಅನ್ಯ ಭಾಗಗಳಿಂದ ಪ್ರಯಾಣ ಮಾಡಿಕೊಂಡು ಬಂದವರು, ರೋಗ ಲಕ್ಷಣ ಇರುವವರನ್ನು ಪರೀಕ್ಷೆಗೆ ಒಳಪಡಿಸಲಾಗುತ್ತಿದೆ' ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಧ್ಯಾನೇಶ್ವರ ನೀರಗುಡಿ ತಿಳಿಸಿದ್ದಾರೆ.

'ನಮ್ಮಲ್ಲೇ ಸ್ವಾಬ್ ಪರೀಕ್ಷೆಯ ಲ್ಯಾಬ್ ಇದೆ. 48 ಗಂಟೆಗಳಲ್ಲಿ ಪರೀಕ್ಷಾ ವರದಿ ಕೈಸೇರುತ್ತದೆ. ಅದನ್ನು ನೋಡಿಕೊಂಡು ಚಿಕಿತ್ಸೆ ಕೊಡಲಾಗುತ್ತದೆ. ಯಾರು ಕೂಡ ಆತಂಕ ಪಡಬೇಕಿಲ್ಲ. ಆದರೆ, ಎಚ್ಚರ ವಹಿಸಬೇಕು' ಎಂದು ಸಲಹೆ ಮಾಡಿದ್ದಾರೆ.

'ಈ ಹಿಂದೆ ಕೋವಿಡ್ ನಿಭಾಯಿಸಿದ ಅನುಭವ ನಮ್ಮ ವೈದ್ಯಕೀಯ ಸಿಬ್ಬಂದಿಗೆ ಇರುವುದರಿಂದ ಎಷ್ಟೇ ಪ್ರಕರಣ ಬಂದರೂ ನಿಭಾಯಿಸುತ್ತೇವೆ. ಔಷಧಿ ಸೇರಿದಂತೆ ಯಾವುದಕ್ಕೂ ಕೊರತೆ ಇಲ್ಲ. ಇದರೊಂದಿಗೆ ಡೆಂಗಿ, ಚಿಕುನ್‌ಗುನ್ಯಾ ಪ್ರಕರಣಗಳಿಗೆ ಚಿಕಿತ್ಸೆ ನೀಡಲಾಗುತ್ತದೆ' ಎಂದು ಹೇಳಿದ್ದಾರೆ.

'ಬೀದರ್ ಜಿಲ್ಲೆಯಾದ್ಯಂತ ಈಗ ಮದುವೆ, ಕಿರುಗುಣಿ ಸೇರಿದಂತೆ ಇತರೆ ಕಾರ್ಯಕ್ರಮಗಳು ಜಾಸ್ತಿಯಾಗಿ ನಡೆಯುತ್ತಿವೆ. ಜನ ಕೂಡ ದಂಡಿಂ-ಯಾಗಿ ಸೇರುತ್ತಿದ್ದಾರೆ. ಬಸ್‌ಗಳಲ್ಲಿ ಉಚಿತ ಪ್ರಯಾಣದ ಸೌಲಭ್ಯದ ನಂತರ ಹೆಚ್ಚಿನ ಸಂಖ್ಯೆಯ ಜನ ಓಡಾಡುತ್ತಿದ್ದಾರೆ. ಯಾರು ಕೂಡ ಅಂತರ ಕಾಯ್ದುಕೊಳ್ಳುತ್ತಿಲ್ಲ. ಇದರ ಕಡೆಗೆ ಗಮನಹರಿಸಬೇಕು. ಸಾರ್ವಜನಿಕ ಸ್ಥಳಗಳಲ್ಲಿ ಮಾಸ್ಕ್ ಧರಿಸಿಕೊಂಡು ಓಡಾಡುವುದು ಕಡ್ಡಾಯಗೊಳಿಸುವ ಅಗತ್ಯವಿದೆ' ಎಂದು ಸಾರ್ವಜನಿಕರು ಅಭಿಪ್ರಾಯ ಪಟ್ಟಿದ್ದಾರೆ.

ಡಾ. ಧ್ಯಾನೇಶ್ವರ ನೀರಗುಡಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಯಾವುದೇ ರೀತಿಯ ಆರೋಗ್ಯ ಸಮಸ್ಯೆ ಎದುರಾದರೆ ಸ್ವಯಂಪ್ರೇರಿತರಾಗಿ ಔಷಧಿ ತೆಗೆದುಕೊಳ್ಳುವುದರ ಬದಲು ವೈದ್ಯರನ್ನು ಕಾಣಬೇಕು. ಡಾ. ಶಿವಯೋಗಿ ಬಾಳಿ ಬ್ರಿಮ್ಸ್ ಸೂಪರಿಟೆಂಡೆಂಟ್ ಸೋಮವಾರದಿಂದ (ಮೇ 26) ಸ್ವಾಬ್ ಟೆಸ್ಟ್ ಪರೀಕ್ಷೆ ಆರಂಭಿಸಲಾಗುವುದು. ಯಾರಿಗಾದರೂ ಅನುಮಾನವಿದ್ದರೆ ಅವರು ಬಂದು ಪರೀಕ್ಷೆ ಮಾಡಿಸಿಕೊಳ್ಳಬಹುದು.

ಯಾರು ಯಾರು ಎಚ್ಚರ ವಹಿಸಬೇಕು?

ಮಧುಮೇಹ ರಕ್ತದೊತ್ತಡ ಉಸಿರಾಟದ ಸಮಸ್ಯೆ ಇರುವವರು ಕ್ಯಾನ್ಸರ್‌ನಿಂದ ಬಳಲುತ್ತಿರುವವರಿಗೆ ಕೋವಿಡ್ ಸೋಂಕು ಬೇಗ ತಗುಲುವ ಸಾಧ್ಯತೆ ಹೆಚ್ಚಿರುತ್ತದೆ.

ಅವರು ಹೆಚ್ಚಿನ ಎಚ್ಚರ ವಹಿಸಬೇಕು ಎಂದು ವೈದ್ಯರು ಸಲಹೆ ಮಾಡಿದ್ದಾರೆ. 'ಗರ್ಭಿಣಿಯರು ವಯಸ್ಸಾದವರು ಕೂಡ ಹೆಚ್ಚು ಎಚ್ಚರದಿಂದ ಇರಬೇಕು. ಆರೋಗ್ಯದಲ್ಲಿ ಸ್ವಲ್ಪ ಏರುಪೇರು ಕಂಡ ಬಂದರೂ ತಕ್ಷಣವೇ ಆಸ್ಪತ್ರೆಗೆ ಹೋಗಿ ಚಿಕಿತ್ಸೆ ಪಡೆದುಕೊಳ್ಳಬೇಕು' ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಧ್ಯಾನೇಶ್ವರ ನೀರಗುಡಿ ತಿಳಿಸಿದ್ದಾರೆ.

ಏನೇನು ಎಚ್ಚರ ಅಗತ್ಯ?

ಅಧಿಕ ಜನ ಸೇರುವ ಸ್ಥಳಗಳಿಗೆ ಹೋಗುವುದನ್ನು ಸಾಧ್ಯವಾದಷ್ಟು ತಪ್ಪಿಸಬೇಕು. ಒಂದುವೇಳೆ ಜನದಟ್ಟಣೆಯಿರುವ ಕಡೆಗಳಿಗೆ ಹೋದರೆ ಕಡ್ಡಾಯವಾಗಿ ಮಾಸ್ಕ್ ಧರಿಸಿಕೊಂಡು ಹೋಗಬೇಕು ಎಂದು ಬ್ರಿಮ್ಸ್ ಸೂಪರಿಟೆಂಡೆಂಟ್

ಡಾ. ಶಿವಯೋಗಿ ಬಾಳಿ ಸಲಹೆ ಮಾಡಿದ್ದಾರೆ. ಮೈ ಕೈ ನೋವು ಜ್ವರ ಬಂದರೆ ತಕ್ಷಣವೇ ವೈದ್ಯರನ್ನು ಕಂಡು ಪರೀಕ್ಷೆ ಮಾಡಿಸಿಕೊಳ್ಳಬೇಕು. ಸ್ವಚ್ಛ ಹಾಗೂ ಬಿಸಿಯಾದ ಆಹಾರ ಸೇವಿಸಬೇಕು.

ಅನಗತ್ಯ ಆತಂಕ ಪಡುವ ಅಗತ್ಯವಿಲ್ಲ ಎಂದು ತಿಳಿಸಿದ್ದಾರೆ. ಸತತವಾಗಿ ಮಳೆ ಸುರಿಯುತ್ತಿದ್ದು ಶೀತ ಜ್ವರ ಸೇರಿದಂತೆ ಇತರೆ ಕಾಯಿಲೆಗಳು ಬರಬಹುದು. ಇವುಗಳು ಬಂದರೆ ಉಪೇಕ್ಷೆ ಮಾಡದೇ ಆಸ್ಪತ್ರೆಗೆ ಹೋಗಿ ಚಿಕಿತ್ಸೆ ಪಡೆದುಕೊಳ್ಳಬೇಕು ಎಂದು ತಿಳಿಸಿದ್ದಾರೆ.

# ಆದಾಯ ತೆರಿಗೆ ರಿಟರ್ನ್ಸ್ ಸಲ್ಲಿಕೆಗೆ ಗಡುವು ಜು.31 ರಿಂದ ಸೆ.15ರವರೆಗೆ ವಿಸ್ತರಣೆ

ಮಲ್ಲಮ್ಮ ನುಡಿ ವಾರ್ತೆ

ನವದೆಹಲಿ:ಮೇ.27: 2025-26ನೇ ಮೌಲ್ಯಮಾಪನ ವರ್ಷದ ಆದಾಯ ತೆರಿಗೆ ರಿಟರ್ನ್ಸ್ (ಐಟಿಆ-ರ್) ಸಲ್ಲಿಸುವ ಗಡುವನ್ನು ಕೇಂದ್ರ ಸರ್ಕಾರ ವಿಸ್ತರಿಸಿದೆ. ಈ ಹಿಂದೆ ಜುಲೈ 31 ಅಂತಿಮ ದಿನವಾಗಿತ್ತು. ಆದರೆ, ಇದೀಗ ಸೆಪ್ಟೆಂಬರ್ 15, 2025ರವರೆಗೆ ವಿಸ್ತರಿಸಲಾಗಿದೆ.

ಐಟಿಆರ್ ಫಾರ್ಮ್‌ಗಳಲ್ಲಿ ಗಣನೀಯ ಬದಲಾವಣೆಗಳಾಗಿದ್ದು, ಸಿಸ್ಟಮ್ ಅಪ್‌ಡೇಟ್ ನಡೆಯುತ್ತಿದೆ. ಹೀಗಾಗಿ, ರಿಟರ್ನ್ಸ್ ಸಲ್ಲಿಸಲು ಹೆಚ್ಚು ಸಮಯ ಬೇಕಾಗಬಹುದು ಎಂದು ಪರಿಗಣಿಸಿ ಅಂತಿಮ ದಿನಾಂಕವನ್ನು ಸೆಪ್ಟೆಂಬರ್ 25ರವರೆಗೂ ವಿಸ್ತರಿಸಲಾಗಿದೆ.ಈ ವಿಸ್ತರಣೆಯಿಂದ ತೆರಿಗೆ ಪಾವತಿದಾರರು ಯಾವುದೇ ತಪ್ಪುಗಳಿಲ್ಲದೆ ರಿಟರ್ನ್ಸ್ ಸಲ್ಲಿಸಲು ಸಾಕಷ್ಟು ಸಮಯ ಸಿಗಲಿದೆ. ಈ ಬಗ್ಗೆ ಶೀಘ್ರದಲ್ಲೇ ಅಧಿಕೃತ ಪ್ರಕಟಣೆ ಹೊರಡಿಸಲಾಗುವುದು ಎಂದು ಕೇಂದ್ರೀಯ ನೇರ ತೆರಿಗೆಗಳ ಮಂಡಳಿ (CBDT) ಮಂಗಳವಾರ ಮಾಹಿತಿ ನೀಡಿದೆ.ಈ ಕುರಿತು ಸಾಮಾಜಿಕ ಜಾಲತಾಣ




ಎಕ್ಸ್ ನಲ್ಲಿ ಪೋಸ್ಟ್ ಮಾಡಿರುವ CBDT,ಈ ವಿಸ್ತರಣೆಯು ತೆ-ರಿಗೆದಾರರಿಗೆ ಸುಗಮ ಹಾಗೂ ನಿಖರವಾಗಿ ರಿಟರ್ನ್ಸ್ ಸಲ್ಲಿಕೆಗೆ ಖಾತ್ರಿ ಒದಗಿಸುತ್ತದೆ. ಗಮನಾರ್ಹ ಐಟಿ ಫಾರಂ ಬದಲಾವಣೆ, ಸಿಸ್ಟಂ ಅಭಿವೃದ್ಧಿ ಮತ್ತು TDS ಕ್ರೆಡಿಟ್ ಪ್ರತಿಫಲನದಿಂದಾಗಿ ಈ ವಿಸ್ತರಣೆಯು ಹೆಚ್ಚಿನ ಸಮಯವನ್ನು ಒದಗಿಸುತ್ತದೆ. ಇದು ಎಲ್ಲರಿಗೂ ಸುಗಮ ಮತ್ತು ಹೆಚ್ಚು ನಿಖರವಾದ ಫೈಲಿಂಗ್ ಅನುಭವವನ್ನು ಖಾತ್ರಿಗೊಳಿಸುತ್ತದೆ. ಈ ಕುರಿತು ಅಧಿಸೂಚನೆಯನ್ನು ಶೀಘ್ರದಲ್ಲಿಯೇ ಹೊರಡಿಸಲಾಗುವುದು ಎಂದು ಹೇಳಿದೆ.

ಅಲ್ಲದೇ ಮೇ 31, 2025 ರವರೆಗಿನ ಬಾಕಿಯಿರುವ TDS ಸ್ಟೇಟ್ ಮೆಂಟ್ ಗಳು ಜೂನ್ ಆರಂಭದವರೆಗೆ ಪ್ರತಿಫಲಿಸುವ ನಿರೀಕ್ಷೆಯಿಲ್ಲ. ಸಿಸ್ಟಂ ಅಪ್ ಡೇಟ್ ನಿಂದ ವಿಳಂಬವಾಗುತ್ತಿದ್ದು, ತೆ-ರಿಗೆದಾರರ ಸಮಸ್ಯೆಗಳನ್ನು ಪರಿಹರಿಸಲಾಗುವುದು ಮತ್ತು ತೆರಿಗೆ ಸಲ್ಲಿಸುವ ಪ್ರಕ್ರಿಯೆಯ ಸಮಗ್ರತೆಯನ್ನು ಕಾಪಾಡಿಕೊಳ್ಳಲಾಗುತ್ತಿದೆ ಎಂದು CBDT ತಿಳಿಸಿದೆ.

# ಅಪಾಯದ ಆಹ್ವಾನ ಕೊಡುತ್ತಿರುವ ಹೆದ್ದಾರಿ ರಂಧ್ರಗಳು



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ :ಮೇ.27: ತಾಲೂಕಿನ ಕುಷ್ಟಗಿ ಕೊಪ್ಪಳ ಹೆದ್ದಾರಿಯಲ್ಲಿ ಸೇತುವೆ ಕುಸಿದು ಭಾರಿ ರಂಧ್ರಗಳು ಬಿದ್ದಿವೆ ಸುಮಾರು ದಿನಗಳಿಂದ ಈ ರಂಧ್ರಗಳನ್ನು ನೋಡಿಯೂ ನೋಡದಂತೆ ಅಧಿಕಾರಿಗಳು ವರ್ತಿಸುತ್ತಿದ್ದಾರೆ ದಿನಾಲು ನೂರಾರು ವಾಹನಗಳು ಸಂಚರಿಸುವ ಹೆದ್ದಾರಿಯಾಗಿದೆ ವರದಿಗಾರರೊಂದಿಗೆ ಮಾತನಾಡಿದ ಸ್ಥಳೀಯ ಮುಖಂಡರಾದ ದೊಡ್ಡಬಸಪ್ಪ ತಾಳಿಕೇರಿ ಅಧಿಕಾರಿಗಳ ಗಮನಕ್ಕೆ ತಂದರು ಯಾವುದೇ ಪ್ರಯೋಜನವಾಗುತ್ತಿಲ್ಲ ಸುಮಾರು ದಿನಗಳಿಂದ ಭಯಭೀತರಾಗಿ ಓಡಾಡುವ ಪರಿಸ್ಥಿತಿ ಬಂದಿದೆ ಸಾಕಷ್ಟು ವಾಹನಗಳು ಈ ರಂಧ್ರವನ್ನು ತಪ್ಪಿಸಲು ಹೋಗಿ ಬಿದ್ದ ಉದಾಹರಣೆಗಳು ಇವೆ . ಈಗಲಾದರೂ ಎಚ್ಚೆತ್ತುಕೊಂಡು ಅಧಿಕಾರಿಗಳು ಈ ಬ್ರಿಜ್ ಅನ್ನು ಸರಿಪಡಿಸಬೇಕೆಂದು ಮನವಿ ಮಾಡಿದರು.

# ಗ್ರಾಮೀಣ ಯುವಸಮೂಹ ಸಬಲರನ್ನಾಗಿಸುವುದೇ ನಮ್ಮ ಗುರಿ: ಶರಣಪ್ರಕಾಶ್ ಪಾಟೀಲ್

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು:ಮೇ.27: ಗ್ರಾಮೀಣ ಯುವ ಸಮೂಹವನ್ನು ಸಬಲೀಕರಣಗೊಳಿಸಲು, ನಾವೀನ್ಯತೆ, ಸಮಾನತೆ ಮತ್ತು ಅಂತರ್ಗತ ಅಭಿವೃದ್ಧಿಗೆ ಮಾದರಿಯಾಗಿ ಉಳಿಯುವ ಭವಿಷ್ಯವನ್ನು ರೂಪಿಸಲು ನಮ್ಮ ಸರ್ಕಾರ ಸಂಕಲ್ಪ ತೊಟ್ಟಿದೆ ಎಂದು ಸಚಿವ ಡಾ. ಶರಣಪ್ರಕಾಶ್ ಪಾಟೀಲ್ ತಿಳಿಸಿದರು.

ಬೆಂಗಳೂರಿನ ರಾಡಿಸನ್ ಬ್ಲೂನಲ್ಲಿ ನಡೆದ ಕೌಶಲ್ಯ ಅಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯ ರಾಷ್ಟ್ರೀಯ ಗ್ರಾಮೀಣ ಜೀವನೋಪಾಯ ಮಿಷನ್ ಅಡಿಯಲ್ಲಿ ದೀನ್ ದಯಾಳ್ ಉಪಾಧ್ಯಾಯ ಗ್ರಾಮೀಣ ಕೌಶಲ್ಯ ಯೋಜನೆಯಾ ಅಫಿಔ ಸಮಾವೇಶ ಮತ್ತು ಹಳೆಯ ವಿದ್ಯಾರ್ಥಿಗಳ ಸಭೆಯನ್ನು ಉದ್ದೇಶಿಸಿ ಸಚಿವರು ಮಾತನಾಡಿದರು.

ಅಫಿಔ ಸಮಾವೇಶ ಮತ್ತು ಹಳೆಯ ವಿದ್ಯಾರ್ಥಿಗಳ ಸಭೆಯು ಸಹಯೋಗದ ಕ್ರಮ, ನಾವೀನ್ಯತೆ ಮತ್ತು ಬದ್ಧತೆಯ ಮೂಲಕ ಕರ್ನಾಟಕದ ಭವಿಷ್ಯವನ್ನು ರೂಪಿಸುವ ಪ್ರಮುಖ ಅವಕಾಶ ಕಲ್ಪಿಸುವ ವೇದಿಕೆಯಾಗಿದೆ ಎಂದರು.ನಮ್ಮ ಕೌಶಲ್ಯ ಅಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯ ಮೂಲಕ ಗ್ರಾಮೀಣ ಯುವಕರನ್ನು ಸಬಲೀಕರಣಗೊಳಿಸುವ ಪರಿವರ್ತನಾತ್ಮಕ ಹಾದಿಯಲ್ಲಿದೆ. ದೀನ್ ದಯಾಳ್ ಉಪಾಧ್ಯಾಯ ಗ್ರಾಮೀಣ ಕೌಶಲ್ಯ ಯೋಜನೆ



ರಾಷ್ಟ್ರೀಯ ಗ್ರಾಮೀಣ ಜೀವನೋಪಾಯ ಮಿಷನ್ ಅಡಿಯಲ್ಲಿ ಒಂದು ಮೂಲಾಧಾರ ಮತ್ತು ಪ್ರಮುಖ ಉಪಕ್ರಮವಾಗಿದೆ. ಈ ಕಾರ್ಯಕ್ರಮವು ಗ್ರಾಮೀಣ ಯುವಜನರಿಗೆ ಜೀವನಾಡಿಯಾಗಿ ಹೊರಹೊಮ್ಮಿದೆ ಎಂದು ಸ್ಪಷ್ಟಪಡಿಸಿದರು.

ಉದ್ಯಮ-ಸಂಬಂಧಿತ ಕೌಶಲ್ಯ ತರಬೇತಿಯನ್ನು ನೀಡುವ ಮೂಲಕ, ಯುವಕರು ಅರ್ಥಪೂರ್ಣ ಉದ್ಯೋಗವನ್ನು ಪಡೆಯಲು ಅನುವು ಮಾಡಿಕೊಡುತ್ತದೆ. ಇದರಿಂದಾಗಿ ಅವರ ಜೀವನಮಟ್ಟ ಸುಧಾರಿಸುತ್ತದೆ ಮತ್ತು ಗ್ರಾಮೀಣ ಬಡತನವನ್ನು ನಿರ್ಮೂಲನೆ ಮಾಡಲು ಸಹಕಾರಿಯಾಗಲಿದೆ ಎಂದು ತಿಳಿಸಿದರು. ನಮ್ಮ ಸರ್ಕಾರ ಸಮಗ್ರ ಬೆಳವಣಿಗೆಯನ್ನು ಉತ್ತೇಜಿಸಲು, ಸುಸ್ಥಿರ ಉದ್ಯೋಗಾವಕಾಶಗಳನ್ನು ಸೃಷ್ಟಿಸಲು ಮತ್ತು ನಮ್ಮ ಹಳ್ಳಿಗಳಲ್ಲಿ ಆರ್ಥಿಕ ಸದೃಢತೆ ನಿರ್ಮಿಸುವ ಗುರಿ ಹೊಂದಿದೆ. ನಾವು ಕೇವಲ ಜೀವನೋಪಾಯ ನಿರ್ಮಿಸುತ್ತಿಲ್ಲ. ಕರ್ನಾಟಕಕ್ಕೆ ಉಜ್ವಲ, ಸಮಾನ ಭವಿಷ್ಯವನ್ನು ರೂಪಿಸುತ್ತಿದ್ದೇವೆ ಎಂದು ಸ್ಪಷ್ಟಪಡಿಸಿದರು.

ನಮ್ಮ ಸರ್ಕಾರದ ಮತ್ತೊಂದು ಮಹತ್ವದ ಹೆಜ್ಜೆ ಯುವನಿಧಿ. ನಿರುದ್ಯೋಗಿ ಪದವೀಧರರು ಮತ್ತು ಡಿಪ್ಲೊಮಾ ಹೊಂದಿರುವವರಿಗೆ ಆರ್ಥಿಕ ನೆರವು ನೀಡುವ ಯೋಜನೆ ಸಾವಿರಾರು ಮಂದಿಗೆ ಅನುಕೂಲವಾಗಿದೆ. ಯುವನಿಧಿ ಫಲಾನುಭವಿಗಳಿಗೆ ತರಬೇತಿ ನೀಡುವುದು ನಮ್ಮ ಪ್ರಾಥಮಿಕ ಆದ್ಯತೆಯಾಗಿದೆ ಎಂದು ತಿಳಿಸಿದರು.

ಸರ್ಕಾರ ಮತ್ತು ಖಾಸಗಿ ಪಾಲುದಾರಿಕೆಯಲ್ಲಿ ಹೊಸ ಅನ್ವೇಷಣೆ ಮಾಡೋಣ. ಮಹತ್ವಾಕಾಂಕ್ಷೆಯನ್ನು ಪೋಷಿಸೋಣ ಮತ್ತು ಕರ್ನಾಟಕದ ನಿಜವಾದ ಚೈತನ್ಯವನ್ನು ಪ್ರತಿಬಿಂಬಿಸುವ ಭವಿಷ್ಯವನ್ನು ರೂಪಿಸೋಣ ಎಂದು ಕರೆ ನೀಡಿದರು.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.
Editor: Ramesh Reddy, Office Ph. No: +91 9449732000.